ಸಂಪುಟ: 14 Volume ಸಂಚಿಕೆ: 100 Issue ಪುಟಗಳು 08 Pages
ಶುಕ್ರವಾರ 24 ಜುಲೈ 2026
₹4 PRGINO.120927 (RNINO:KARKAN/2011/48371)
BDR/054/2026-2027
www.mallammanudi.in
mallammanudi@gmail.com
9448604450, 9845028349

ಬೆಂಗಳೂರು | ಹುಬ್ಬಳ್ಳಿ | ಬೀದರ ಆವೃತ್ತಿ: ಕಲ್ಬುರ್ಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ, ಬಾಗಲಕೋಟೆ, ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

**ಬೆಳಗು**

ನಿನ್ನನ್ನು ಪೀಡಿಸುವ ಸಂಕಟಗಳನ್ನು ನಗುನಗುತ್ತಾ ನಾಶಪಡಿಸು.

–ಸ್ವಾಮಿ ವಿವೇಕಾನಂದ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ



## ಮೊಬೈಲ್ ಫೋನ್ ಅಧ್ಯಯನದ ಮೇಲಿನ ಆಸಕ್ತಿ ಕಡಿಮೆ

ತಂತ್ರಜ್ಞಾನ ಅಭಿವೃದ್ಧಿಯೊಂದಿಗೆ ಮೊಬೈಲ್ ಫೋನ್, ಸಾಮಾಜಿಕ ಜಾಲತಾಣಗಳು, ವಿಡಿಯೋ ಗೇಮ್‌ಗಳು ಮತ್ತು ಅನಗತ್ಯ ಮನರಂಜನೆ ವಿದ್ಯಾರ್ಥಿಗಳ ಸಮಯವನ್ನು ಹೆಚ್ಚು ಕಸಿದುಕೊಳ್ಳುತ್ತಿವೆ. ಇದರಿಂದ ಅಧ್ಯಯನದ ಮೇಲಿನ ಆಸಕ್ತಿ ಕಡಿಮೆಯಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಸಮಯವನ್ನು ಸರಿಯಾಗಿ ಬಳಸಿಕೊಳ್ಳದ ವಿದ್ಯಾರ್ಥಿಗಳು ಭವಿಷ್ಯದಲ್ಲಿ ಅನೇಕ ಅವಕಾಶಗಳನ್ನು ಕಳೆದುಕೊಳ್ಳುವ ಪರಿಸ್ಥಿತಿ ಎದುರಾಗಬಹುದು.

## ಸಂಪಾದಕೀಯ




**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**

ಶಿಕ್ಷಣವು ಕೇವಲ ಪರೀಕ್ಷೆಯಲ್ಲಿ ಅಂಕಗಳನ್ನು ಗಳಿಸುವುದಕ್ಕಷ್ಟೇ ಸೀಮಿತವಲ್ಲ. ಅದು ವ್ಯಕ್ತಿತ್ವ ವಿಕಾಸ, ಶಿಸ್ತು, ಹೊಣೆಗಾರಿಕೆ ಮತ್ತು ಉತ್ತಮ ನಾಗರಿಕತೆಯನ್ನು ಬೆಳೆಸುವ ಸಾಧನವಾಗಿದೆ. ಆದ್ದರಿಂದ ವಿದ್ಯಾರ್ಥಿಗಳು ದಿನನಿತ್ಯದ ಅಧ್ಯಯನಕ್ಕೆ ನಿಗದಿತ ಸಮಯ ಮೀಸಲಿಟ್ಟು, ಗುರಿ ಹೊಂದಿ ಪರಿಶ್ರಮಪಟ್ಟು ಓದುವ ಅಭ್ಯಾಸ ಬೆಳೆಸಿಕೊಳ್ಳಬೇಕು.

ಪೋಷಕರು ಮತ್ತು ಶಿಕ್ಷಕರು ಸಹ ಮಕ್ಕಳ ಮೇಲೆ ಅತಿಯಾದ ಒತ್ತಡ ಹೇರುವ ಬದಲು, ಓದಿನ ಬಗ್ಗೆ ಆಸಕ್ತಿ ಮೂಡಿಸುವ ವಾತಾವರಣ ನಿರ್ಮಿಸಬೇಕು. ಉತ್ತಮ ಮಾರ್ಗದರ್ಶನ ಮತ್ತು ಪ್ರೋತ್ಸಾಹ ವಿದ್ಯಾರ್ಥಿಗಳ ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ.

ದೇಶದ ಭವಿಷ್ಯ ಇಂದಿನ ವಿದ್ಯಾರ್ಥಿಗಳ ಕೈಯಲ್ಲಿದೆ. ಅವರು ಶಿಕ್ಷಣದ ಕಡೆ ಗಮನ ಹರಿಸಿದರೆ ಉತ್ತಮ ಸಮಾಜ ನಿರ್ಮಾಣ ಸಾಧ್ಯ. ಆದ್ದರಿಂದ ವಿದ್ಯಾರ್ಥಿಗಳು ಅನಗತ್ಯ ವ್ಯಸನಗಳಿಂದ ದೂರವಿದ್ದು, ಓದಿನ ಕಡೆ ಹೆಚ್ಚಿನ ಗಮನ ಹರಿಸಿ ತಮ್ಮ ಭವಿಷ್ಯವನ್ನು ಉಜ್ವಲಗೊಳಿಸಬೇಕು ಎಂಬುದು ಇಂದಿನ ಅಗತ್ಯವಾಗಿದೆ.

## 82,812 ಸಾಮಾಜಿಕ ಭದ್ರತಾ ವೇತನ ಸ್ಥಗಿತ: ಬಡವರ ಬದುಕಿನ ಮೇಲೆ ಕಾಂಗ್ರೆಸ್ ಸರ್ಕಾರದ ಪ್ರಹಾರ



**ಬೀದರ್:** ಕಾಂಗ್ರೆಸ್ ಸರ್ಕಾರದ ಅವೈಜ್ಞಾನಿಕ ಹಾಗೂ ಜನವಿರೋಧಿ ನೀತಿಗಳ ಪರಿಣಾಮವಾಗಿ ಬೀದರ್ ಜಿಲ್ಲೆಯ ಸಾವಿರಾರು ಬಡ ಕುಟುಂಬಗಳು ಸಂಕಷ್ಟಕ್ಕೆ ಸಿಲುಕಿವೆ. ವೃದ್ಧಾಪ್ಯ ವೇತನ, ವಿಧವಾ ವೇತನ, ಅಂಗವಿಕಲರ ವೇತನ ಸೇರಿದಂತೆ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ 82,812 ಫಲಾನುಭವಿಗಳ ವೇತನವನ್ನು ಸ್ಥಗಿತಗೊಳಿಸಿರುವುದು ಅತ್ಯಂತ ಖಂಡನೀಯ ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕ ಹಾಗೂ ಬಿಜೆಪಿ ರಾಜ್ಯ ಕಾರ್ಯದರ್ಶಿ ಡಾ. ಶೈಲೇಂದ್ರ ಬೆಲ್ದಾಳೆ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು.

ಜಿಲ್ಲಾ ಆಡಳಿತದ ಅಧಿಕೃತ ಅಂಕಿಅಂಶಗಳ ಪ್ರಕಾರ, ಜಿಲ್ಲೆಯಲ್ಲಿ 1,18,081 ಅನುಮಾನಾಸ್ಪದ ಪ್ರಕರಣಗಳು ಗುರುತಿಸಲಾಗಿದ್ದು, ಅವುಗಳಲ್ಲಿ 95,863 ಪ್ರಕರಣಗಳ ಪರಿಶೀಲನೆ ಪೂರ್ಣಗೊಂಡಿದೆ. ಈ ಪೈಕಿ 14,002 ಪ್ರಕರಣಗಳನ್ನು ಮುಂದುವರಿಸಲಾಗಿದ್ದು, 82,812 ಪ್ರಕರಣಗಳ ವೇತನ ಸ್ಥಗಿತಗೊಳಿಸಲಾಗಿದೆ. ಇನ್ನೂ 21,267 ಪ್ರಕರಣಗಳ ಪರಿಶೀಲನೆ ಬಾಕಿ ಇದ್ದರೂ, ಸೂಕ್ತ ಪರಿಶೀಲನೆ ಪೂರ್ಣಗೊಳ್ಳುವ ಮೊದಲೇ ಸಾವಿರಾರು ಫಲಾನುಭವಿಗಳ ವೇತನ ಸ್ಥಗಿತಗೊಳಿಸಿರುವುದು ಸರ್ಕಾರದ ಆಡಳಿತ ವೈಫಲ್ಯಕ್ಕೆ ಸಾಕ್ಷಿಯಾಗಿದೆ ಎಂದು ಅವರು ಹೇಳಿದರು.

ಸರ್ಕಾರ ಜಾರಿಗೆ ತಂದಿರುವ ವಾರ್ಷಿಕ ₹32 ಸಾವಿರ ಆದಾಯ ಪ್ರಮಾಣಪತ್ರ ಕಡ್ಡಾಯ ನಿಯಮವೇ ಈ ಸಮಸ್ಯೆಗೆ ಮೂಲ ಕಾರಣವಾಗಿದೆ. ಗ್ರಾಮೀಣ ಭಾಗದ ಬಡವರು, ಹಿರಿಯ ನಾಗರಿಕರು, ವಿಧವೆಯರು ಹಾಗೂ ಅಂಗವಿಕಲರು ಆದಾಯ ಪ್ರಮಾಣಪತ್ರ ಪಡೆಯಲು ತಹಶೀಲ್ದಾರ್ ಕಚೇರಿ ಹಾಗೂ ನಾಡಕಚೇರಿಗಳಿಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ವಯಸ್ಸಾದವರು, ಅಂಗವಿಕಲರು ಹಾಗೂ ಅನಾರೋಗ್ಯದಿಂದ ಬಳಲುತ್ತಿರುವವರಿಗೆ ಈ ಪ್ರಕ್ರಿಯೆ ಮತ್ತಷ್ಟು ಸಂಕಷ್ಟ ಉಂಟುಮಾಡಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು. ಈ ಹಿಂದೆ ಬಿಪಿಎಲ್ ಪಡಿತರ ಚೀಟಿ ಹೊಂದಿದ್ದವರನ್ನು ಅರ್ಹರೆಂದು ಪರಿಗಣಿಸಿ ಸಾಮಾಜಿಕ ಭದ್ರತಾ ವೇತನ ನೀಡಲಾಗುತ್ತಿತ್ತು. ಹಲವು ವರ್ಷಗಳಿಂದ ಯಾವುದೇ ಗೊಂದಲವಿಲ್ಲದೆ ಜಾರಿಯಲ್ಲಿದ್ದ ಈ ವ್ಯವಸ್ಥೆಯನ್ನು ಬದಲಿಸಿ, ಏಕಾಏಕಿ ಆದಾಯ ಪ್ರಮಾಣಪತ್ರ ಕಡ್ಡಾಯಗೊಳಿಸಿರುವುದು ಬಡವರ ಜೀವನೋಪಾಯಕ್ಕೆ ಪೆಟ್ಟು ನೀಡಿದಂತಾಗಿದೆ. ಸಾಮಾಜಿಕ ಭದ್ರತೆ ನೀಡಬೇಕಾದ ಸರ್ಕಾರವೇ ಬಡವರ ಜೀವನದ ಆಧಾರವಾಗಿರುವ ವೇತನವನ್ನು ಸ್ಥಗಿತಗೊಳಿಸಿರುವುದು ಅತ್ಯಂತ ಅಮಾನವೀಯ ಕ್ರಮ ಎಂದು ಟೀಕಿಸಿದರು. ಇಂದು ಅನೇಕ ವೃದ್ಧರು ತಮ್ಮ ಔಷಧೋಪಚಾರಕ್ಕೂ ಹಣವಿಲ್ಲದೆ ಪರದಾಡುತ್ತಿದ್ದಾರೆ. ವಿಧವೆಯರು ಕುಟುಂಬ ನಿರ್ವಹಣೆಗೆ ತೊಂದರೆ ಅನುಭವಿಸುತ್ತಿದ್ದಾರೆ. ಅಂಗವಿಕಲರು ದೈನಂದಿನ ಜೀವನ ನಿರ್ವಹಿಸಲು ಸಂಕಷ್ಟ ಎದುರಿಸುತ್ತಿದ್ದಾರೆ. ತಿಂಗಳ ವೇತನವನ್ನೇ ನಂಬಿ ಬದುಕುತ್ತಿರುವ ಸಾವಿರಾರು ಬಡ ಕುಟುಂಬಗಳ ಜೀವನದೊಂದಿಗೆ ಸರ್ಕಾರ ಚೆಲ್ಲಾಟವಾಡುತ್ತಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಕೂಡಲೇ ₹32 ಸಾವಿರ ಆದಾಯ ಪ್ರಮಾಣಪತ್ರ ಕಡ್ಡಾಯ ನಿಯಮವನ್ನು ಹಿಂಪಡೆದು, ಬಿಪಿಎಲ್ ಪಡಿತರ ಚೀಟಿ ಆಧಾರದ ಮೇಲೆಯೇ ಹಿಂದಿನಂತೆ ಸಾಮಾಜಿಕ ಭದ್ರತಾ ವೇತನ ಮಂಜೂರು ಮಾಡುವ ವ್ಯವಸ್ಥೆಯನ್ನು ಮರುಜಾರಿಗೆ ತರಬೇಕು. ಈಗಾಗಲೇ ಸ್ಥಗಿತಗೊಂಡಿರುವ 82,812 ಅರ್ಹ ಫಲಾನುಭವಿಗಳ ವೇತನವನ್ನು ತಕ್ಷಣ ಮರುಪ್ರಾರಂಭಿಸಬೇಕು. ಸರ್ಕಾರ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸದಿದ್ದರೆ ಬಿಜೆಪಿ ಜನರೊಂದಿಗೆ ಸೇರಿ ಜಿಲ್ಲಾದ್ಯಂತ ಉಗ್ರ ಹೋರಾಟ ನಡೆಸಲಿದೆ ಎಂದು ಡಾ. ಶೈಲೇಂದ್ರ ಬೆಲ್ದಾಳೆ ಎಚ್ಚರಿಕೆ ನೀಡಿದರು.

# ಉಚಿತ ಸೀಳುತುಟಿ ಶಸ್ತ್ರಚಿಕಿತ್ಸಾ ಶಿಬಿರಕ್ಕೆ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ




ಮಿಷನ್ ಸ್ಮೈಲ್ ಉಚಿತ ಸೇವಾ ಶಿಬಿರಕ್ಕಾಗಿ ದೇಶದ ವಿವಿಧಭಾಗಗಳಿಂದ ಆಗಮಿಸಿರುವ ನುರಿತ ವೈದ್ಯಕೀಯ ತಂಡ ಮತ್ತು ಸ್ವಯಂ ಸೇವಕರು ಮಹತ್ತರವಾದ ಚಾಲನೆ ಸಿಕ್ಕಿರುವುದರಿಂದ ಮುಂದಿನ ಮೂರೂವರೆ ದಿನಗಳಲ್ಲಿ ಸುಮಾರು 50ಕ್ಕೂ ಹೆಚ್ಚು ಮುಗ್ಧ ಮಕ್ಕಳ ಸೀಳುತುಟಿ ಸಮಸ್ಯೆ ನಿವಾರಿಸಿ, ಅವರ ಕುಟುಂಬಗಳಲ್ಲಿ ಹೊಸ ಭರವಸೆಯ ನಗು ಮೂಡಿಸುವದಾಗಿ ಮಿಷನ್ ಸ್ಮೈಲ್ ನಾನು ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಕಾನ್ರಾಡ್ ಜಿ. ಡೆನ್ನಿಸ್ ಹೇಳಿದರು.

ಗುರುವಾರ ನಗರದ ಕಲಬುರಗಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಜಿಮ್ಸ್) ಸೂಪರ್ ಸ್ಪೇಷಾಲಿಟಿ ಆಸ್ಪತ್ರೆಯ ಆಡಿಟೋರಿಯಂ ಸಭಾಂಗಣದಲ್ಲಿ ಆಯೋಜಿಸಿದ ಉಚಿತ ಸಮಗ್ರ ಸೀಳು ತುಟಿ ಹಾಗೂ ಸೀಳು ಅಂಗಳಿ ಶಸ್ತ್ರಚಿಕಿತ್ಸಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ ಅವರು ಮಿಷನ್ ಸ್ಮೈಲ್ ಒಂದು ನೋಂದಾಯಿತ ವೈದ್ಯಕೀಯ ದತ್ತಿ ಸಂಸ್ಥೆಯಾಗಿದ್ದು, 2003 ರಿಂದ ಸೀಳುತುಟಿ, ಸೀಳು ಅಂಗುಳಿ ಹಾಗೂ ಇತರೆ ಉಚಿತ ಮಿಷಿನ್ ಸ್ಮೈಲ್ ಚಿಕಿತ್ಸೆಯನ್ನು ಅಂದರೆ 23 ವರ್ಷಗಳಿಂದ ನಿರಂತರವಾಗಿ ಸಾಗಿ ಬಂದಿದೆ.

ಈ 'ಮಿಷನ್ ಸ್ಮೈಲ್' ಅಭಿಯಾನದ ಮೂಲಕ ಇದುವರೆಗೆ ಒಟ್ಟು 77,000ಕ್ಕೂ ಹೆಚ್ಚು ಮಕ್ಕಳ ತಪಾಸಣೆ ನಡೆಸಲಾಗಿದ್ದು, 52,500ಕ್ಕೂ ಹೆಚ್ಚು ಮಕ್ಕಳಿಗೆ ಯಶಸ್ವಿ ಶಸ್ತ್ರಚಿಕಿತ್ಸೆ ಒದಗಿಸಲಾಗಿದೆ.ಈ ಸಂಸ್ಥೆಯ ನಿಸ್ವಾರ್ಥ ಸೇವೆ ಹಾಗೂ ಸತ್ಕರ್ಮದ ಫಲವಾಗಿ, ಮುಂಬರುವ ದಿನಗಳಲ್ಲಿ ಇನ್ನಷ್ಟು ಹೆಚ್ಚಿನ ರೋಗಿಗಳಿಗೆ ಚಿಕಿತ್ಸೆ ಮತ್ತು ಹೊಸ ಜೀವನ ಲಭಿಸುವಂತಾಗಲಿ ಎಂದರು.

ಮುತ್ತೂಟ್ ಪಾಪಚನ್ ಗ್ರೂಪ್ (CSR) ಮುಖ್ಯಸ್ಥ ಪ್ರಶಾಂತಕುಮಾರ: ಮುತ್ತೂಟ್ ಸಮೂಹ ಸಂಸ್ಥೆ ಬ್ಯಾಂಕಿಂಗ್ ವ್ಯವಹಾರದ ಜೊತೆಗೆ ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಆರೋಗ್ಯ ಸೇವೆ ತಲುಪಿಸುತ್ತಿದೆ. ಈ ಮುತೂಟ್ ಮತ್ತು 'ಮಿಷನ್ ಸ್ಮೈಲ್' ಸಹಭಾಗಿತ್ವದಲ್ಲಿ ಈಗ 12ನೇ ವರ್ಷದ ಸಂಭ್ರಮವಾಗಿದ್ದು, ಇವುಗಳ ಸಂಯುಕ್ತಾಶ್ರಯದಲ್ಲಿ ಇದುವರೆಗೆ ಒಟ್ಟು 3,747 ಉಚಿತ ಶಸ್ತ್ರಚಿಕಿತ್ಸೆಗಳನ್ನು ಯಶಸ್ವಿಯಾಗಿ ನೆರವೇರಿಸಲಾಗಿದ್ದು, ಈ ಆರ್ಥಿಕ ವರ್ಷದಲ್ಲಿ ಇದು 2ನೇ ಶಿಬಿರವಾಗಿದ್ದು ದೇಶದ ವಿವಿಧ ರಾಜ್ಯಗಳಲ್ಲಿ ಇನ್ನು 6 ಶಿಬಿರಗಳನ್ನು ನಡೆಸುವ ಯೋಜನೆಯನ್ನು ಸಂಸ್ಥೆ ಹೊಂದಿದೆ ಎಂದು ಹೇಳಿದರು.

ಈ ಸಿ.ಎಸ್.ಆರ್ ಚಟುವಟಿಕೆಗಳಿಗೆ ಮುತೂಟ್ ಫಿನ್ಕಾರ್ಪ್ ಲಿಮಿಟೆಡ್ (ಚಿನ್ನದ ಸಾಲ), ಮೈಕ್ರೋ ಫೈನಾನ್ಸ್, ಹೌಸಿಂಗ್ ಫೈನಾನ್ಸ್, ಮುತ್ತೂಟ್ ಕ್ಯಾಪಿಟಲ್ ಸರ್ವಿಸಸ್ (ವಾಹನ ಸಾಲ), ರಿಸ್ಕ್ ಇನ್ಶ್ಯೂರೆನ್ಸ್, ಎಕ್ಸಿಮ್ ಮತ್ತು ಮುತೂಟ್ ಚಿಟ್ಸ್ ಸೇರಿದಂತೆ ಒಟ್ಟು 7 ಹಣಕಾಸು ಸಂಸ್ಥೆಗಳು ಬೆಂಬಲ ನೀಡುತ್ತಿವೆ. ಎಲ್ಲಾ ಶಾಖಾ ಸದಸ್ಯರ ಈ ಶ್ರಮ ಮತ್ತು ಸೇವೆ ನಿಜಕ್ಕೂ ಅಭಿನಂದನೀಯವಾಗಿದೆ ಎಂದು ಶ್ಲಾಘೀಸಿದರು. ಜಿಮ್ಸ್ ಹಿರಿಯ ವೈದ್ಯಾಧಿಕಾರಿಗಳು ಡಾ. ಶಿವಕುಮಾರ್ ದೇಶಮುಖ್ ಮಾತಾನಾಡಿ ಹುಟ್ಟಿನಿಂದಲೇ ಸೀಳುತುಟಿ ಮತ್ತು ಸೀಳುಅಂಗುಳು ಮೇಲಿನ ತುಟಿ ಹಾಗೂ ಮಸಡಿನ ಮೇಲಿನ ರಂಧ್ರ ಅಥವಾ ನ್ಯೂನತೆ) ಇರುವ ಸಣ್ಣ ಮಕ್ಕಳಿಗೆ ಶಸ್ತ್ರಚಿಕಿತ್ಸೆಯ ಮೂಲಕ ಉಚಿತ ಮತ್ತು ಸುರಕ್ಷಿತವಾದ ಸೇವೆಯನ್ನು ನೀಡುವುದು ಇದರ ಮುಖ್ಯ ಉದ್ದೇಶವಾಗಿದೆ ಎಂದರು.

ಮುಂದಿನ ಮೂರು ದಿನಗಳಲ್ಲಿ ನೋಂದಾಯಿಸಿಕೊಂಡಿರುವ 50 ರಿಂದ 80 ಮಕ್ಕಳಿಗೆ ನಮ್ಮ ಆಸ್ಪತ್ರೆಯಲ್ಲೇ ಅತ್ಯಂತ ಸುರಕ್ಷಿತ ಮತ್ತು ಗುಣಮಟ್ಟದ ಚಿಕಿತ್ಸೆಯನ್ನು ನೀಡಲಾಗುವುದು. ಇದು ವೈದ್ಯರ ಸೇವಾ ಭಾವದಿಂದ ಮಾಡುತ್ತಿರುವ ಕಾರ್ಯ ಹಾಗೂ ಕ್ಯಾಂಪ್ ಸುಗಮವಾಗಿ ನಡೆಯಲು ಆಸ್ಪತ್ರೆಯಲ್ಲಿ ರೋಗಿಗಳಿಗೆ ಅನುಕೂಲವಾಗುವಂತೆ ವ್ಯವಸ್ಥೆ ಮತ್ತು ತಾಂತ್ರಿಕ ಸಿದ್ಧತೆಗಳು ಮಾಡಲಾಗಿದೆ.

ಓರಲ್ ಸರ್ಜರಿ ಪಿಜಿ (Oral Surgery PGs) ವಿದ್ಯಾರ್ಥಿಗಳು ಆಸ್ಪತ್ರೆಯ ಅರಿವಳಿಕೆ (Anesthesia) ಮತ್ತು ಸರ್ಜರಿ ವಿಭಾಗದ ಸಹೋದ್ಯೋಗಿಗಳಿಗೆ ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಮಟ್ಟದ ಹಿರಿಯ, ಅನುಭವಿ ತಜ್ಞರು ಕಾರ್ಯನಿರ್ವಹಿಸುವ ವಿಧಾನವನ್ನು ಹತ್ತಿರದಿಂದ ನೋಡುವ ಮತ್ತು ಕಲಿಯುವ ಉತ್ತಮ ಅವಕಾಶವಾಗಿದೆ. ಮುಂದಿನ 3 ದಿನಗಳ ಕಾಲ ಈ ಕಾರ್ಯಕ್ರಮವು ಯಶಸ್ವಿಯಾಗಿ ನಡೆದು, ಬರುವ ರೋಗಿಗಳು ಹಾಗೂ ಅವರ ಕುಟುಂಬದವರು ಮುಖದಲ್ಲಿ ನಗುವಿನೊಂದಿಗೆ ಮನೆಗೆ ಮರಳುವಂತಾಗಲಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಿಷನ್ ಸ್ಮೈಲ್ ಟ್ರಸ್ಟಿ ಹಾಗೂ ಹಿರಿಯ ಅರಿವಳಿಕೆ ತಜ್ಞರಾದ ಡಾ. ರಾಮಕುಮಾರ್ ವೆಂಕಟೇಶ್ವರನ್, ಜಿಮ್ಸ್ ನಿರ್ದೇಶಕರಾದ ಡಾ. ಉಮೇಶ್ ಎಸ್.ಆರ್, ಸಾಮಾನ್ಯ ಶಸ್ತ್ರಚಿಕಿತ್ಸಾ ವಿಭಾಗದ ವೈದ್ಯಕೀಯ ಅಧೀಕ್ಷಕರು ಹಾಗೂ ಮುಖ್ಯಸ್ಥರಾದ ಡಾ. ಶಿವಕುಮಾರ್ ಸಿ.ಆರ್, ಮಕ್ಕಳ ವಿಭಾಗದ ಉಪ ವೈದ್ಯಕೀಯ ಅಧೀಕ್ಷಕರು ಹಾಗೂ ಮುಖ್ಯಸ್ಥರಾದ ಡಾ. ರೇವನಸಿದ್ದಪ್ಪ ಭೋಸಗಿ, ಅರಿವಳಿಕೆ ವಿಭಾಗದ ಉಪ ವೈದ್ಯಕೀಯ ಅಧೀಕ್ಷಕರು, ಜನಕ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಹಾಗೂ ಮುಖ್ಯಸ್ಥರಾದ ಡಾ. ಜಗದೀಶ್ ಎಂ.ಬಿ, ಮುಂತಾದವರು ಉಪಸ್ಥಿತರಿದ್ದರು.

## ಉದ್ಯೋಗ ಮೇಳ: ನೋಂದಣಿಗೆ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ರಾಜ್ಯದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ್ ಇವರ ಮುಂದಾಳತ್ವದಲ್ಲಿ 2026–27ನೇ ಸಾಲಿನ ಕಲಬುರಗಿ ಜಿಲ್ಲೆಯ ಉದ್ಯೋಗ ಮೇಳವನ್ನು ಜುಲೈ 29 ರಂದು ಬುಧವಾರದಂದು ಕಲಬುರಗಿ ನಗರದ ಪಿಡಿಎ ಇಂಜಿನಿಯರಿಂಗ್ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಈ ಉದ್ಯೋಗ ಮೇಳದಲ್ಲಿ ಭಾಗವಹಿಸುವ ಕಂಪನಿಗಳ ವಿವರ ಇಂತಿವೆ:** ಷ್ನೇಯ್ಡರ್ ಎಲೆಕ್ಟ್ರಿಕ್, ಮರ್ಸಿಡಿಸ್–ಬೆನ್ಜ್ ಇಂಡಿಯಾ, ಮಹೀಂದ್ರಾ ಮತ್ತು ಮಹೀಂದ್ರಾ ಡೀಲರ್ ಶಿಪ್‌ಗಳು, ಬಜಾಜ್ ಆಟೋ ಲಿಮಿಟೆಡ್, ಜೆಸಿಬಿ ಇಂಡಿಯಾ ಲಿಮಿಟೆಡ್, ಬ್ರಿಡ್ಜ್ ಸ್ಟೋನ್ ಇಂಡಿಯಾ ಪ್ರೈ.ಲಿ. ಲಿಮಿಟೆಡ್, ವರ್ಲ್‌ಪೂಲ್ ಆಫ್ ಇಂಡಿಯಾ ಲಿಮಿಟೆಡ್, ಡಿಕ್ಸನ್ ಟೆಕ್ನಾಲಜೀಸ್ (ಇಂಡಿಯಾ) ಲಿಮಿಟೆಡ್, ಹ್ಯಾವೆಲ್ಸ್ ಇಂಡಿಯಾ ಲಿಮಿಟೆಡ್, ಡಿ–ಮಾರ್ಟ್ (ಅವೆನ್ಯೂ ಸೂಪರ್ ಮಾರ್ಟ್ ಲಿಮಿಟೆಡ್), ಟೇಸ್ಟಿ ಬೈಟ್, ಬ್ಲೂ ಎನರ್ಜಿ ಮೋಟಾರ್ಸ್, ಆರ್ ಎಂ ಸರ್ವೀಸಸ್, ಫ್ರೀಟಸ್ ಫೋಕ್ಸ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಹಾಗೂ ಕ್ವೆಸ್ ಕಾರ್ಪ್.

ಈ ಉದ್ಯೋಗ ಮೇಳವು ದಿನಾಂಕ 29–07–2026ರಂದು ನಡೆಯಲಿದ್ದು ಅಲ್ಲಿಯವರೆಗೆ ನೋಂದಣಿಗೆ ಅವಕಾಶವಿರುತ್ತದೆ. 10ನೇ ಮತ್ತು 12ನೇ ತರಗತಿ ತೇರ್ಗಡೆ, ಐಟಿಐ/ಡಿಪ್ಲೋಮಾ/ಪದವಿ ವಿದ್ಯಾರ್ಥಿಗಳು https://forms.gle/8XCtqKmTmd7KZrW77 ಲಿಂಕ್ ಮೂಲಕ ಹಾಗೂ ಬಿ.ಇ/ಬಿ.ಟೆಕ್ ವಿದ್ಯಾರ್ಥಿಗಳು https://forms.gle/ikTzHpfLRN8KqJUg8 ಲಿಂಕ್ ಮೂಲಕ ತಮ್ಮ ಹೆಸರನ್ನು ನೋಂದಣಿ ಮಾಡಿಕೊಳ್ಳಬೇಕು.

## ಶಾಲೆಯ ಅಭಿವೃದ್ಧಿಗೆ ಸಹಕಾರ ಅಗತ್ಯ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ



ಕರ್ನಾಟಕ ಸರಕಾರಿ ಕಿರಿಯ ಪ್ರಾಥಮಿಕ ಶಾಲೆ, ಗುಂಡಮ್ಮ ಕ್ಯಾಂಪ್, ಗಂಗಾವತಿಯಲ್ಲಿ ಶಾಲೆಯ ಅಭಿವೃದ್ಧಿ ಹಾಗೂ ವಿದ್ಯಾರ್ಥಿಗಳ ಸರ್ವಾಂಗೀಣ ಬೆಳವಣಿಗೆಗೆ ಸಂಬಂಧಿಸಿದ ಸಭೆ ನಡೆಯಿತು.

ಸಭೆಯಲ್ಲಿ ವಿದ್ಯಾರ್ಥಿಗಳಲ್ಲಿ ಸೃಜನಶೀಲತೆ, ಕಲಾತ್ಮಕ ಪ್ರತಿಭೆ ಹಾಗೂ ಸಾಮಾಜಿಕ ಜಾಗೃತಿ ಬೆಳೆಸುವ ಉದ್ದೇಶದಿಂದ ವಿವಿಧ ಶೈಕ್ಷಣಿಕ ಹಾಗೂ ಸಹಪಠ್ಯ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಹಮ್ಮಿಕೊಳ್ಳುವ ಕುರಿತು ಚರ್ಚಿಸಲಾಯಿತು. ವಿದ್ಯಾರ್ಥಿಗಳು ತಮ್ಮಲ್ಲಿರುವ ಪ್ರತಿಭೆಯನ್ನು ಗುರುತಿಸಿ ಅನಾವರಣಗೊಳಿಸಿ ಉತ್ತಮ ಸಾಧನೆ ಮಾಡುವಂತೆ ಪ್ರೋತ್ಸಾಹಿಸಲಾಯಿತು.


ಈ ಸಂದರ್ಭದಲ್ಲಿ ಶಾಲೆಯ ಮುಖ್ಯೋಪಾಧ್ಯಾಯರು ಮಾತನಾಡಿ, ಶಾಲೆಯ ಅಭಿವೃದ್ಧಿಗೆ ಎಲ್ಲರ ಸಹಕಾರ ಮತ್ತು ಪ್ರೋತ್ಸಾಹ ಅತ್ಯಗತ್ಯವಾಗಿದೆ. ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಿ, ಶಾಲೆಯ ಪ್ರಗತಿಗೆ ಕೈಜೋಡಿಸಿದ ಎಲ್ಲರಿಗೂ ಹೃತ್ಪೂರ್ವಕ ಧನ್ಯವಾದಗಳನ್ನು ಸಲ್ಲಿಸಿದರು.

ಬಳಿಕ ರಾಷ್ಟ್ರೀಯ ಸಂಪನ್ಮೂಲ ವ್ಯಕ್ತಿ ಧನರಾಜ್ ಮಾತನಾಡಿ, ಶಿಕ್ಷಣದ ಜೊತೆಗೆ ಕಲೆ, ಸಂಸ್ಕೃತಿ ಹಾಗೂ ಸಾಮಾಜಿಕ ಮೌಲ್ಯಗಳ ಬೆಳವಣಿಗೆಯೂ ವಿದ್ಯಾರ್ಥಿಗಳ ವ್ಯಕ್ತಿತ್ವ ನಿರ್ಮಾಣದಲ್ಲಿ ಮಹತ್ವದ ಪಾತ್ರವಹಿಸುತ್ತದೆ. ಶಾಲೆಯ ಅಭಿವೃದ್ಧಿಗೆ ನಮ್ಮಿಂದ ಸಾಧ್ಯವಾದ ಎಲ್ಲ ರೀತಿಯ ಸಹಕಾರವನ್ನು ನೀಡಲು ಸದಾ ಸಿದ್ಧರಾಗಿದ್ದೇವೆ ಎಂದು ತಿಳಿಸಿದರು.

ಸಭೆಯಲ್ಲಿ ಶಾಲೆಯ ಮುಖ್ಯೋಪಾಧ್ಯಾಯರು, ಶಿಕ್ಷಕರು, ರಾಷ್ಟ್ರೀಯ ಸಂಪನ್ಮೂಲ ವ್ಯಕ್ತಿಗಳಾದ ಧನರಾಜ್, ಹೆಚ್. ಮಲ್ಲಿಕಾರ್ಜುನ, ಸಾನಿಕ್, ವೀರೇಶ್ ನಾಯಕ್ ಹಾಗೂ ಇತರ ಗಣ್ಯರು ಉಪಸ್ಥಿತರಿದ್ದರು.

# ತಿರುವು ರಸ್ತೆ ಅಗಲೀಕರಣಕ್ಕೆ ಉಮೇಶ ಕೆ. ಮುದ್ನಾಳ್ ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್





ಯಾದಗಿರಿ–ಗುರುಮಠಕಲ್ ಸಂಪರ್ಕ ಕಲ್ಪಿಸುವ ಪ್ರಮುಖ ರಾಜ್ಯ ಹೆದ್ದಾರಿಯ ಧರ್ಮಪುರ–ಬೋರಬಂಡ ಮಧ್ಯದ ಬೆಟ್ಟದ ತಿರುವು ರಸ್ತೆ ಅಪಘಾತಗಳ ತಾಣವಾಗಿ ಮಾರ್ಪಟ್ಟಿದ್ದು, ಇನ್ನೆಷ್ಟು ಅಮಾಯಕ ಜೀವಗಳು ಬಲಿಯಾಗಬೇಕು ಎಂದು ಸಾಮಾಜಿಕ ಹೋರಾಟಗಾರ ಉಮೇಶ ಕೆ. ಮುದ್ನಾಳ್ ಜಿಲ್ಲಾಡಳಿತವನ್ನು ತೀವ್ರ ತರಾಟೆಗೆ ತೆಗೆದುಕೊಂಡಿದ್ದಾರೆ.

ಸ್ಥಳಕ್ಕೆ ಭೇಟಿ ನೀಡಿ ರಸ್ತೆ ಪರಿಶೀಲನೆ ನಡೆಸಿದ ಬಳಿಕ ವಾಹನ ಸವಾರರೊಂದಿಗೆ ಚರ್ಚಿಸಿದ ಅವರು, ಈ ಮಾರ್ಗದಲ್ಲಿ ಪ್ರತಿದಿನ ಭಾರಿ ವಾಹನಗಳ ಸಂಚಾರ ಹೆಚ್ಚಾಗುತ್ತಿದ್ದರೂ ರಸ್ತೆ ಅಗಲೀಕರಣ ಹಾಗೂ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳದಿರುವುದು ಗಂಭೀರ ನಿರ್ಲಕ್ಷ್ಯವಾಗಿದೆ ಎಂದು ಆರೋಪಿಸಿದರು. ಬೆಟ್ಟದ ಇಳಿಜಾರಿನ ಅಪಾಯಕಾರಿ ತಿರುವಿನಿಂದ ಹಲವು ಬಾರಿ ವಾಹನಗಳು ನಿಯಂತ್ರಣ ತಪ್ಪಿ ತಡೆಗೋಡೆಗೆ ಡಿಕ್ಕಿಹೊಡೆದು ಕಂದಕಕ್ಕೆ ಉರುಳಿರುವ ಘಟನೆಗಳು ನಡೆದಿದ್ದರೂ ಸಂಬಂಧಪಟ್ಟ ಇಲಾಖೆ ಎಚ್ಚೆತ್ತುಕೊಂಡಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಅಪಘಾತಗಳನ್ನು ತಡೆಗಟ್ಟಲು ತಕ್ಷಣ ರಸ್ತೆ ಅಗಲೀಕರಣ, ಬಲಿಷ್ಠ ತಡೆಗೋಡೆ, ಪ್ರತಿಫಲಕಗಳು, ಎಚ್ಚರಿಕೆ ಸೂಚನಾ ಫಲಕಗಳು ಹಾಗೂ ಸಮರ್ಪಕ ಬೀದಿ ದೀಪಗಳ ವ್ಯವಸ್ಥೆ ಕಲ್ಪಿಸಬೇಕು ಎಂದು ಅವರು ಆಗ್ರಹಿಸಿದರು. ವರ್ಷಗಳಿಂದ ಜೀವಕ್ಕೆ ಅಪಾಯಕಾರಿಯಾಗಿರುವ ಈ ತಿರುವು ರಸ್ತೆ ಬಗ್ಗೆ ಸಾರ್ವಜನಿಕರು ಹಲವು ಬಾರಿ ಮನವಿ ಸಲ್ಲಿಸಿದ್ದರೂ ಯಾವುದೇ ಶಾಶ್ವತ ಕ್ರಮ ಕೈಗೊಳ್ಳದಿರುವುದು ಜನರ ಆಕ್ರೋಶಕ್ಕೆ ಕಾರಣವಾಗಿದೆ ಎಂದು ಹೇಳಿದರು.

ಒಂದು ವಾರದೊಳಗೆ ಕಾಮಗಾರಿ ಆರಂಭಿಸದಿದ್ದರೆ ಧರ್ಮಪುರ–ಬೋರಬಂಡ ಬೆಟ್ಟದ ತಿರುವಿನಲ್ಲೇ ರಾಜ್ಯ ಹೆದ್ದಾರಿ ತಡೆದು ಉಗ್ರ ಪ್ರತಿಭಟನೆ ನಡೆಸಲಾಗುವುದು. ಅದರ ಸಂಪೂರ್ಣ ಹೊಣೆ ಜಿಲ್ಲಾಡಳಿತ, ಲೋಕೋಪಯೋಗಿ ಇಲಾಖೆ ಹಾಗೂ ರಾಜ್ಯ ಹೆದ್ದಾರಿ ಪ್ರಾಧಿಕಾರದ್ದೇ ಆಗಿರುತ್ತದೆ ಎಂದು ಉಮೇಶ ಕೆ. ಮುದ್ನಾಳ್ ಖಡಕ್ ಎಚ್ಚರಿಕೆ ನೀಡಿದರು.

# ಪರೀಕ್ಷಾ ಅಕ್ರಮಗಳ ವಿರುದ್ಧ ಡಿಎಸ್‌ಎಸ್ ಧರಣಿ ಸತ್ಯಾಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬೀದರ್





ನೀಟ್ ಪರೀಕ್ಷೆ ಪ್ರಶ್ನೆಪತ್ರಿಕೆ ಸೋರಿಕೆ ಸೇರಿದಂತೆ ದೇಶದ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿನ ಅವ್ಯವಸ್ಥೆಯನ್ನು ಖಂಡಿಸಿ ಹಾಗೂ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ ಅವರು ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್‌ವಾದ) ವತಿಯಿಂದ ಗುರುವಾರ ನಗರದ ಅಂಬೇಡ್ಕರ್ ವೃತ್ತದಲ್ಲಿ ಧರಣಿ ಸತ್ಯಾಗ್ರಹ ನಡೆಸಲಾಯಿತು. ಬಳಿಕ ಜಿಲ್ಲಾಧಿಕಾರಿಗಳ ಮೂಲಕ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಗೆ ಮನವಿ ಸಲ್ಲಿಸಲಾಯಿತು.

ಪ್ರತಿಭಟನಾಕಾರರು ಮಾತನಾಡಿ, ದೇಶದ ಪರೀಕ್ಷಾ ವ್ಯವಸ್ಥೆಯಲ್ಲಿ ಹೆಚ್ಚುತ್ತಿರುವ ಅವ್ಯವಸ್ಥೆಗಳು ವಿದ್ಯಾರ್ಥಿಗಳ ಭವಿಷ್ಯವನ್ನು ಆತಂಕಕ್ಕೆ ದೂಡುತ್ತಿವೆ. ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಸೇರಿದಂತೆ ವಿವಿಧ ಪರೀಕ್ಷಾ ಅಕ್ರಮಗಳಿಗೆ ಕೇಂದ್ರ ಸರ್ಕಾರ ನೈತಿಕ ಹೊಣೆ ಹೊತ್ತು ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ದೇಶದ ಪರೀಕ್ಷಾ ವ್ಯವಸ್ಥೆಯನ್ನು ಸಂಪೂರ್ಣವಾಗಿ ಸುಧಾರಿಸಬೇಕು. ನೀಟ್ ಸೇರಿದಂತೆ ವಿವಿಧ ಪರೀಕ್ಷೆಗಳಲ್ಲಿನ ಅಕ್ರಮಗಳಿಗೆ ನೈತಿಕ ಹೊಣೆ ಹೊತ್ತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ ಅವರು ರಾಜೀನಾಮೆ ನೀಡಬೇಕು. ಇಲ್ಲವಾದಲ್ಲಿ ಅವರನ್ನು ಸಚಿವ ಸಂಪುಟದಿಂದ ವಜಾಗೊಳಿಸಬೇಕು ಎಂದು ಆಗ್ರಹಿಸಿದರು.

ದೆಹಲಿ ಜಂತರ್–ಮಂತರ್‌ನಲ್ಲಿ ಸೋನಮ್ ವಾಂಗ್ಚುಕ್ ಅವರ ನೇತೃತ್ವದಲ್ಲಿ ನಡೆಯುತ್ತಿರುವ ಉಪವಾಸ ಸತ್ಯಾಗ್ರಹಕ್ಕೆ ಬೆಂಬಲ ವ್ಯಕ್ತಪಡಿಸಿದ ಪ್ರತಿಭಟನಾಕಾರರು, ಶಾಂತಿಯುತವಾಗಿ ಪ್ರತಿಭಟನೆ ನಡೆಸುತ್ತಿದ್ದ ವಿದ್ಯಾರ್ಥಿಗಳ ಮೇಲೆ ಲಾಠಿಚಾರ್ಜ್ ಹಾಗೂ ಟಿಯರ್ ಗ್ಯಾಸ್ ಪ್ರಯೋಗಿಸಿರುವುದನ್ನು ತೀವ್ರವಾಗಿ ಖಂಡಿಸಿದರು. ಪರೀಕ್ಷಾ ಅಕ್ರಮಗಳಿಂದ ಸಂಕಷ್ಟಕ್ಕೊಳಗಾದ ವಿದ್ಯಾರ್ಥಿಗಳಿಗೆ ನ್ಯಾಯ ದೊರಕಿಸಿಕೊಡಬೇಕು ಹಾಗೂ ಜೀವ ಕಳೆದುಕೊಂಡ ವಿದ್ಯಾರ್ಥಿಗಳ ಕುಟುಂಬಗಳಿಗೆ ಸೂಕ್ತ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ಶಾಂತಿಯುತ ಪ್ರತಿಭಟನಾಕಾರರ ವಿರುದ್ಧ ಪ್ರಕರಣ ದಾಖಲಿಸಿರುವುದು ಪ್ರಜಾಪ್ರಭುತ್ವದ ಮೌಲ್ಯಗಳಿಗೆ ವಿರುದ್ಧವಾಗಿದೆ ಎಂದು ಆರೋಪಿಸಿದ ಅವರು, ನ್ಯಾಯ ಸಿಗುವವರೆಗೆ ಶಾಂತಿಯುತ ಹೋರಾಟವನ್ನು ಮುಂದುವರಿಸುವುದಾಗಿ ತಿಳಿಸಿದರು. ಜನರ ಹಕ್ಕುಗಳಿಗೆ ಗೌರವ ಸಿಗಬೇಕು ಹಾಗೂ ಜನಪ್ರತಿನಿಧಿಗಳು ಜನರ ಆಶಯಗಳಿಗೆ ಉತ್ತರದಾಯಕರಾಗಿರಬೇಕು ಎಂದು ಅಭಿಪ್ರಾಯಪಟ್ಟರು.

**ಬೇಡಿಕೆಗಳು**

- ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ ಅವರು ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು.
- ದೇಶದ ಪರೀಕ್ಷಾ ವ್ಯವಸ್ಥೆಯಲ್ಲಿನ ಅವ್ಯವಸ್ಥೆಯನ್ನು ಸಂಪೂರ್ಣವಾಗಿ ಸರಿಪಡಿಸಬೇಕು.
- ವಿದ್ಯಾರ್ಥಿಗಳ ಮೇಲಿನ ಲಾಠಿಚಾರ್ಜ್ ಹಾಗೂ ಟಿಯರ್ ಗ್ಯಾಸ್ ಪ್ರಯೋಗ ನಡೆಸಿದವರ ವಿರುದ್ಧ ಕ್ರಮ ಕೈಗೊಳ್ಳಬೇಕು.
- ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದಿಂದ ಹಾನಿಗೊಳಗಾದ ಹಾಗೂ ಜೀವ ಕಳೆದುಕೊಂಡ ವಿದ್ಯಾರ್ಥಿಗಳ ಕುಟುಂಬಗಳಿಗೆ ಸೂಕ್ತ ಪರಿಹಾರ ನೀಡಬೇಕು.

ಪ್ರತಿಭಟನೆಯಲ್ಲಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿಯ ರಾಜ್ಯ ಸಂಚಾಲಕ ಮಾರುತಿ ಬೌದ್ಧೆ, ಜಿಲ್ಲಾ ಸಂಚಾಲಕರಾದ ರಾಜಕುಮಾರ ವಾಘಮಾರೆ ಹಾಗೂ ಅರುಣ ಪಟೇಲ್, ತಾಲ್ಲೂಕು ಸಂಚಾಲಕರಾದ ಝುರೆಪ್ಪಾ ವರ್ಮಾ (ಔರಾದ) ಮತ್ತು ವಾಮನರಾವ್ ಮೈಸಲಗೆ (ಬಸವಕಲ್ಯಾಣ), ದಲಿತ ಕಲಾ ಮಂಡಳಿ ಜಿಲ್ಲಾ ಸಂಚಾಲಕ ಶಿವರಾಜ ತಡಪಳ್ಳಿ, ಶಿರೋಮಣಿ ಹಲಗೆ, ಸತೀಶ್ ರತ್ನಾಕರ್, ರಮೇಶ್ ಬೆಲ್ದಾರ್, ಉದಯ ನಾಯಕ್, ವಿಜಯಕುಮಾರ್ ಭಾವಿಕಟ್ಟಿ, ರಾಹುಲ್ ಹಾಳಹಿಪ್ಪರಗಾ, ಮಹೇಶ್ ಗೋರನಾಳ್ಕರ್, ಬಾಬುರಾವ ಹೊನ್ನಾ, ಮುಕೇಶ್ ರಾಯ್, ವಿನೋದ್ ಭಂಗೆ, ಬಸವರಾಜ್ ಭಾವಿದೊಡ್ಡಿ, ಗೌತಮ್ ಉತ್ತಂಗಿಕರ್, ರಾಜು ಕಾಂಬಳೆ, ಜಯಭೀಮ್ ಚೀಮನಾಯಕ್, ಶ್ರೀನಿವಾಸ್ ದಯಾಳ್, ವಿನಯ್ ಮಾಳಗೆ, ಬಾಬು ಟೈಗರ್, ಓಂಪ್ರಕಾಶ್ ರೊಟ್ಟೆ, ಜಗದೀಶ್ ಬಿರಾದಾರ್, ವಿಠ್ಠಲದಾಸ್ ಪ್ಯಾಗೆ, ದಶರಥ್ ಗುರು, ರಮೇಶ್ ಜಿ. ಉಮಾಪುರೆ, ಉತ್ತಮ್ ಮಾಂಜರೆಕರ್, ಮಲ್ಲಿಕಾರ್ಜುನ ಮಾಲೆ, ಸಚಿನ್ ಭೀಮನಗರ, ನರ್ಸಿಂಗ್ ನವದಗೇರಿ, ಸುಧಾಮಣಿ, ಮಾಯಾವತಿ, ಆಕಾಂಕ್ಷಿ, ಭಾಗ್ಯಜ್ಯೋತಿ ಸೇರಿದಂತೆ ಅನೇಕ ಮುಖಂಡರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಎನ್‌ಟಿಎ ರದ್ದತಿಗೆ ಆಗ್ರಹಿಸಿ ಬೃಹತ್ ಪ್ರತಿಭಟನೆ



ಎನ್‌ಟಿಎಯನ್ನು ರದ್ದುಗೊಳಿಸಿ ಪಾರದರ್ಶಕ ಹೊಸ ಪರೀಕ್ಷಾ ವ್ಯವಸ್ಥೆ ಜಾರಿಗೆ ತರಬೇಕು. ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು. ವಿದ್ಯಾರ್ಥಿಗಳ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸದಿದ್ದರೆ ರಾಜ್ಯಾದ್ಯಂತ ಹೋರಾಟವನ್ನು ತೀವ್ರಗೊಳಿಸಲಾಗುವುದು.

– ಶಂಕರಗೌಡ ಬಿರಾದಾರ, ಸಂಸ್ಥಾಪಕ ಅಧ್ಯಕ್ಷ, ರಾಷ್ಟ್ರೀಯ ಬಸವಸೈನ್ಯ

• ಮಲ್ಲಮ್ಮ ನುಡಿ ವಾರ್ತೆಬಸವನಬಾಗೇವಾಡಿ

ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (ಎನ್‌ಟಿಎ)ಯನ್ನು ರದ್ದುಗೊಳಿಸಬೇಕು ಹಾಗೂ ಪರೀಕ್ಷಾ ಅಕ್ರಮಗಳ ನೈತಿಕ ಹೊಣೆ ಹೊತ್ತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿ ರಾಷ್ಟ್ರೀಯ ಬಸವಸೈನ್ಯದ ನೇತೃತ್ವದಲ್ಲಿ ಗುರುವಾರ ಪಟ್ಟಣದಲ್ಲಿ ಬೃಹತ್ ಪ್ರತಿಭಟನೆ ನಡೆಯಿತು.ಪಟ್ಟಣದ ಕಿತ್ತೂರ ಚನ್ನಮ್ಮ ವೃತ್ತದಿಂದ ಬಸವೇಶ್ವರ ವೃತ್ತದವರೆಗೆ ನೂರಾರು ವಿದ್ಯಾರ್ಥಿಗಳು ಹಾಗೂ ಸಂಘಟನೆಯ ಪದಾಧಿಕಾರಿಗಳು ಮೆರವಣಿಗೆ ನಡೆಸಿ ಕೇಂದ್ರ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು. ಬಳಿಕ ಬಸವೇಶ್ವರ ವೃತ್ತದಲ್ಲಿ ನಡೆದ ಪ್ರತಿಭಟನಾ ಸಭೆಯಲ್ಲಿ ಕೇಂದ್ರ ಸರ್ಕಾರದ ಪರೀಕ್ಷಾ ವ್ಯವಸ್ಥೆಯ ವೈಫಲ್ಯವನ್ನು ಖಂಡಿಸಲಾಯಿತು.ಸಭೆಯನ್ನು ಉದ್ದೇಶಿಸಿ ಮಾತನಾಡಿದ ರಾಷ್ಟ್ರೀಯ ಬಸವಸೈನ್ಯದ ಸಂಸ್ಥಾಪಕ ಅಧ್ಯಕ್ಷ ಶಂಕರಗೌಡ ಬಿರಾದಾರ, ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ಪರೀಕ್ಷಾ ಅಕ್ರಮಗಳಿಂದ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯಕ್ಕೆ ಧಕ್ಕೆಯಾಗುತ್ತಿದೆ. ಪರೀಕ್ಷಾ ವ್ಯವಸ್ಥೆಯಲ್ಲಿ ವಿಶ್ವಾಸ ಮತ್ತು ಪಾರದರ್ಶಕತೆ ಕಾಪಾಡುವಲ್ಲಿ ಎನ್‌ಟಿಎ ಹಾಗೂ ಕೇಂದ್ರ ಸರ್ಕಾರ ವಿಫಲವಾಗಿವೆ ಎಂದು ಆರೋಪಿಸಿದರು.ಪ್ರತಿಭಟನೆಯ ಬಳಿಕ ಶಿರಸ್ತೇಧಾರ ರಾಜು ಹಾದಿಮನಿ ಅವರಿಗೆ ವಿದ್ಯಾರ್ಥಿನಿ ಕುಮಾರಿ ರೇಣುಕಾ ಹಟ್ಟಿ ಅವರು ಓದಿ ನೀಡಿದರುಈ ಸಂದರ್ಭದಲ್ಲಿ ಎಪಿಎಂಸಿ ಮಾಜಿ ಅಧ್ಯಕ್ಷ ಶೇಖರ ಗೊಳಸಂಗಿ, ನ್ಯಾಯವಾದಿ ರವಿ ರಾಠೋಡ, ಟಿಎ ಪಿಸಿ ಎಮ್ ಸಿ ಅಧ್ಯಕ್ಷ ಚಂದ್ರಶೇಖರಗೌಡ ಪಾಟೀಲ, ಪ್ರಶಾಂತ ಮುಂಜಾನೆ, ಜಟ್ಟಿಂಗರಾಯ ಮಾಲಗಾರ, ಭದ್ರಣ್ಣ ಮಣ್ಣೂರ, ಪ್ರವೀಣ ಪೂಜಾರಿ, ಆನಂದ ವನರೊಟ್ಟಿ, ಸಂಗಮೇಶ ಜಾಲಗೇರಿ, ದ್ಯಾವನಗೌಡ ಪಾಟೀಲ, ಬಸವರಾಜ ಲಮಾಣಿ, ರೇಣುಕಾ ಹಟ್ಟಿ, ಸಾನಿಯಾ ನದಾಫ್, ಸಂಜನಾ ಪಾಟೀಲ್, ಐಶ್ವರ್ಯ ಬಡಿಗೇರ್, ಲಕ್ಷ್ಮಿ ಜಾಲಗೇರಿ ಸೇರಿದಂತೆ ರಾಷ್ಟ್ರೀಯ ಬಸವಸೈನ್ಯದ ಪದಾಧಿಕಾರಿಗಳು, ನೂರಾರು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

# ವಚನಗಳ ಅಳವಡಿಕೆಯಿಂದ ಮನಸ್ಸು ಶುದ್ಧ



• ಮಲ್ಲಮ್ಮ ನುಡಿ ವಾರ್ತೆ ಇಂಡಿ

ಇಂದಿನ ಸಮಾಜಕ್ಕೆ ಶರಣ ಸಾಹಿತ್ಯ ಪರಿಷತ್ತು ಅನನ್ಯ ಕೊಡುಗೆ ನೀಡುತ್ತಿದೆ. ಎಂದು

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಇಂಡಿ ಘಟಕದ ಅಧ್ಯಕ್ಷ ಪಿ.ಬಿ.ಕತ್ತಿ ಹೇಳಿದರು.

ನಗರದ ಡಾ. ಬಿ.ಆರ್.ಅಂಬೇಡಕರ ವಸತಿ ನಿಲಯದ ಸಭಾ ಭವನದಲ್ಲಿ ಕದಳಿ ವೇದಿಕೆ ಹಾಗೂ ಕರ್ನಾಟಕ ಚುಟುಕು ಸಾಹಿತ್ಯ ಪರಿಷತ್ತು ಸಹಯೋಗದಲ್ಲಿ ಆಯೋಜಿಸಿದ ಪದ ಗ್ರಹಣ ಹಾಗೂ ಚುಟುಕು ಕವಿಗೋಷ್ಠಿ ಉದ್ಘಾಟಿಸಿ ಮಾತನಾಡಿದರು.

ನಿತ್ಯ ಜೀವಮದಲ್ಲಿ ವಚನಗಳ ಮೌಲ್ಯಗಳನ್ನು ಅಳವಡಿಸಿಕೊಂಡರೆ ಮನಸ್ಸು ಶುದ್ದವಾಗುತ್ತದೆ. ಮನಸ್ಸು ಶುದ್ದವಾದರೆ ವ್ಯಕ್ತಿತ್ವ ವಿಕಸನವಾಗುತ್ತದೆ. ಶ್ರವಣ ಮನನ ಮಹತ್ವವನ್ನು ಅರಿಯಬೇಕು. ಮಾತು ಮನುಷ್ಯನಿಗೆ ಭಗವಂತ ಕರುಣಿಸಿರುವ ಶ್ರೇಷ್ಠವಾದ ಕಲೆ ಒಳ್ಳೆಯ ಮಾತುಗಳು ಸ್ನೇಹ ಸಂಬಂಧಗಳನ್ನು ಬೆಳೆಸುತ್ತವೆ ಎಂದರು.

ಸಾಹಿತಿ ಗೀತಯೋಗಿ ಮಾತನಾಡಿ ಚುಟುಕು ಸಾಹಿತ್ಯದ ಮೂಲ ಬೇರುಗಳು ಇವುಗಳು ಚಿಕ್ಕರಚನೆ ಆಗಿದ್ದರೂ ವಿಶಾಲವಾದ ಅರ್ಥ ಒಳಗೊಂಡಿವೆ. ಕನ್ನಡ ಸಾಹಿತ್ಯ ಲೋಕದಲ್ಲಿ ಚುಟುಕು ಸಾಹಿತ್ಯದ ಪಾತ್ರ ಪ್ರಮುಖವಾದುದು ಎಂದರು.

ಶಿಕ್ಷಣದೊಂದಿಗೆ ಜೀವನ ಮೌಲ್ಯಗಳನ್ನು ಮಕ್ಕಳಿಗೆ ಬೆಳೆಸಬೇಕು ಎಂಬ ಉದ್ದೇಶದೊಂದಿಗೆ ಶರಣ ಸಾಹಿತ್ಯ ಪರಿಷತ್ತು ಸ್ಥಾಪಿಸಲಾಗಿದೆ. ಅದರ ಭಾಗವೇ ಯುವ ಘಟಕ, ಮಕ್ಕಳಿಗೆ ವಚನಗಳಲ್ಲಿರುವ ಉದ್ದೇಶಗಳು ಆಶಯಗಳನ್ನು ಪರಿಚಯಿಸಿ ಸ್ವಸ್ಥ್ಯ ಸಮಾಜವನ್ನು ನಿರ್ಮಿಸುವದು ಯುವ ಘಟಕದ ಮುಖ್ಯ ಗುರಿಯಾಗಬೇಕು ಶರಣರ ವಚನಗಳು ಬಹಳ ಮುಖ್ಯವಾಗಿವೆ. ಅದನ್ನು ಓದಿ ಅರ್ಥ ಮಾಡಿಕೊಂಡು ಯುವ ಜನರು ಜೀವನವನ್ನು ಸಾರ್ಥಕ ಮಾಡಿಕೊಳ್ಳಬೇಕು ಎಂದರು.

ಅತಿಥಿಗಳಾಗಿ ಮಾತನಾಡಿದ ಪುಂಡಲೀಕ ಗೊಂದಳಿ ಯುವ ಜನರಿಗೆ ಭಾಷೆಯು ಬಹಳ ಮುಖ್ಯ. ಜಗತ್ತಿನ ಎಲ್ಲಾ ಭಾಷೆಗಳ ಮೂಲ ವಚನ ಸಾಹಿತ್ಯ, ಸರಳ ಬಾಷೆ ಎಲ್ಲರಿಗೂ ಅರ್ಥವಾಗುವ ಭಾಷೆಯಾಗಿದೆ. ಸಂಸ್ಕೃತಿಯ ತಳಹದಿಯನ್ನು ಕಟ್ಟಿದವರು ವಚನಕಾರರು ಅವರು ಕಾಯಕ ದಾಸೋಹ ಮೌಢ್ಯತೆಯ ನಿರ್ಮೂಲನೆಯ ಸಂಸ್ಕೃತಿಯನ್ನು ಹುಟ್ಟು ಹಾಕಿದರು. ವಚನ ಎಂದರೆ ನುಡಿ ಭಾಷೆಕೊಡುವದು ಸ್ನೇಹ ಸಂಬಂಧ ಗೌರವ ಪ್ರೀತಿ ಸಹಬಾಳ್ವೆಯಿಂದ ಬದುಕುವದನ್ನು ಕಲಿಸುತ್ತದೆ ಎಂದರು..

ಭವಾನಿ ಗುಳೆದಗುಡ್ಡ ಮತ್ತು ದಾನಮ್ಮ ಹಿರೇಮಠ ದತ್ತಿ ಸ್ಮರಣೆಯನ್ನು ನೆರವೇರಿಸಿದರು. ಅಂಬಣ್ಣ ಬಡಚಿ,ಮಲ್ಲಿಕಾರ್ಜುನ ಪಾಟೀಲ ಮಾತನಾಡಿದರು..

ರಮಾಬಾಯಿ ಪ್ರೌಢಶಾಲೆಯ ಮುಖ್ಯಗುರು ನಿಜಣ್ಣ ಕಾಳೆ, ಶರಣ ಸಾಹಿತ್ಯ ಪರಿಷತ್ತ ಅಧ್ಯಕ್ಷ ಬಿ.ಎಸ್.ಪಾಟೀಲ, ಗಂಗಾ ಗಲಗಲಿ, ಸತೀಶ ವಾಲಿ, ರಿಯಾನ ಸುತಾರ, ಸುಧಾ ಸುಣಗಾರ, ಬಿ.ಇ ಹಿರೇಮಠ, ಪೂಜಾ ಕನ್ನೊಳ್ಳಿ, ಸಂಗೀತ ಕರಕಟ್ಟಿ, ಪ್ರೇಮ ದಶವಂತ, ಗೀತಾ ಬಿರಾದಾರ ಮತ್ತಿತರಿದ್ದರು.

ನೂತನ ಅಧ್ಯಕ್ಷರಿಗೆ ಪರಿಷತ್ತ ದ್ವಜ ನೀಡಿ ಅಧಿಕಾರ ಗೌಪ್ಯತೆ ಪದಾಧಿಕಾರಿಗಳಿಗೆ ಪ್ರಮಾಣ ಪತ್ರ ನೀಡಲಾಯಿತು.

# ಪೊಲೀಸ್ ತ್ವರಿತ ಕಾರ್ಯಾಚರಣೆಗೆ ಬಳ್ಳಾರಿ ವಲಯ ಪೊಲೀಸ್ ಮಹಾ ನಿರೀಕ್ಷಕರಿಂದ ಶ್ಲಾಘನೆ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಕೊಪ್ಪಳ ಜಿಲ್ಲಾ ಪೊಲೀಸ್ ವತಿಯಿಂದ ಸೋಮವಾರ (ಜು.20ರಂದು) ಕೊಪ್ಪಳ ನಗರದ ಪೊಲೀಸ್ ಕವಾಯತು ಮೈದಾನದಲ್ಲಿ ವಿಶೇಷ ಕಾರ್ಯಕ್ರಮ ನಡೆಯಿತು.

ಸನ್ 2025 ಮತ್ತು 2026 ನೇ ಸಾಲಿನಲ್ಲಿ ಸ್ವತ್ತಿನ ಅಪರಾಧ ಪ್ರಕರಣಗಳಲ್ಲಿ ವಶಪಡಿಸಿಕೊಂಡ ಮುದ್ದೆಮಾಲನ್ನು ವಾರಸುದಾರರಿಗೆ ಹಿಂದಿರುಗಿಸುವ ಮತ್ತು ಪೊಲೀಸ್ ಕುಟುಂಬದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ ಬಳ್ಳಾರಿ ವಲಯ ಪೊಲೀಸ್ ಮಹಾ ನಿರೀಕ್ಷಕರಾದ ಡಾ. ಪಿ.ಎಸ್. ಹರ್ಷ ಅವರು ಸಂಬಂಧಿಸಿದ ವಾರಸುದಾರರಿಗೆ ವಾಹನಗಳು, ಬಂಗಾರ ಮತ್ತು ಬೆಳ್ಳಿಯ ಒಡವೆಗಳು, ಮೊಬೈಲ್ ಫೋನ್ ಹಾಗೂ ನಗದು ಹಣ ಸೇರಿದಂತೆ ಮುದ್ದೆಮಾಲನ್ನು ಹಿಂದಿರುಗಿಸಿ, 2025 ಮತ್ತು 2026ನೇ ಸಾಲಿನಲ್ಲಿ ಜಿಲ್ಲೆಯಾದ್ಯಂತ ದಾಖಲಾಗಿದ್ದ ಕಳ್ಳತನ, ದರೋಡೆಯಂತಹ ಸ್ವತ್ತಿನ ಅಪರಾಧ ಪ್ರಕರಣಗಳನ್ನು ಭೇದಿಸುವಲ್ಲಿ ಕೊಪ್ಪಳ ಜಿಲ್ಲಾ ಪೊಲೀಸ್ ತಂಡ ತೆ–ೂರಿದ ದಕ್ಷತೆ ಮತ್ತು ತಾಂತ್ರಿಕ ಕೌಶಲ್ಯವನ್ನು ಅವರು ಶ್ಲಾಘಿಸಿದರು.

ಬಳಿಕ ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ. 90 ಕ್ಕೂ ಅಧಿಕ ಅಂಕಗಳನ್ನು ಪಡೆದ ಪೊಲೀಸ್ ಕುಟುಂಬದ ಸುಮಾರು 53 ವಿದ್ಯಾರ್ಥಿಗಳಿಗೆ ಐಜಿಯವರು ಪ್ರತಿಭಾ ಪುರಸ್ಕಾರ ನೀಡಿ, ಪ್ರೋತ್ಸಾಹಿಸಿದರು.

ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಬಳ್ಳಾರಿ ವಲಯ ಪೊಲೀಸ್ ಮಹಾ ನಿರೀಕ್ಷಕರಾದ ಡಾ. ಪಿ.ಎಸ್. ಹರ್ಷ ಅವರು, ಕೊಪ್ಪಳ ಜಿಲ್ಲೆಯಲ್ಲಿ ಸ್ವತ್ತು ಕಳುವಾದ 252 ಪ್ರಕರಣಗಳು ವರದಿಯಾಗಿದ್ದು, ಅವುಗಳಲ್ಲಿ 104 ಪ್ರಕರಣಗಳನ್ನು ಪತ್ತೆ ಮಾಡಿ ಕಳುವಾದ ಮಾಲಿನ ಪೈಕಿ ಒಟ್ಟು ರೂ.1,82,45,960 ಮೌಲ್ಯದ ಮಾಲನ್ನು ವಶಪಡಿಸಿಕೊಳ್ಳುವಲ್ಲಿ ಜಿಲ್ಲಾ ಪೊಲೀಸ್ ಯಶಸ್ವಿಯಾಗಿದೆ ಎಂದರು.

ಈ ಪ್ರಕರಣಗಳಲ್ಲಿ ವಶಪಡಿಸಿಕೊಂಡಿರುವ ಸೈಬರ್ ಅಪರಾಧಗಳಲ್ಲಿ ಪತ್ತೆಯಾದ ರೂ. 33,49,662 ಗಳು, ಸಿ.ಇ.ಐ.ಆರ್. ಪೋರ್ಟಲ್ ಮೂಲಕ ಪತ್ತೆಹಚ್ಚಲಾದ 1905 ಮೊಬೈಲ್ ಗಳು, 988.960 ಗ್ರಾಂ ಚಿನ್ನದ ಆಭರಣಗಳು, 10 ಕೆಜಿ ಬೆಳ್ಳಿ ಆಭರಣಗಳು, ರೂ. 43,33,830 ನಗದು ಹಣ, 6 ನಾಲ್ಕು ಚಕ್ರ ವಾಹನಗಳು, 3 ತ್ರಿಚಕ್ರ ವಾಹನಗಳು ಹಾಗೂ 34 ದ್ವಿಚಕ್ರ ವಾಹನಗಳು (ಮೋಟಾರ್ ಸೈಕಲ್‌ಗಳು), ಈ ಎಲ್ಲಾ ಮಾಲನ್ನು ಫಿರ್ಯಾದಿದಾರರಿಗೆ, ವಾರಸುದಾರರಿಗೆ ತ್ವರಿತವಾಗಿ ಹಿಂತಿರುಗಿಸಲಾಗಿದ್ದು, ಸಂತೋಷದ ವಿಚಾರವಾಗಿದೆ. ಕಳೆದುಹೋದ ಸಾರ್ವಜನಿಕರ ಬೆಲೆಬಾಳುವ ಆಸ್ತಿಯನ್ನು ಪತ್ತೆಹಚ್ಚಿ, ಕಾನೂನು ಪ್ರಕ್ರಿಯೆಗಳ ಮೂಲಕ ಇಷ್ಟೊಂದು ಬೃಹತ್ ಪ್ರಮಾಣದಲ್ಲಿ ವಾರಸುದಾರರಿಗೆ ಮರಳಿ ನೀಡುತ್ತಿರುವುದು ಸಾರ್ವಜನಿಕರಲ್ಲಿ ಪೊಲೀಸ್ ಇಲಾಖೆಯ ಮೇಲಿನ ಗೌರವ ಮತ್ತು ವಿಶ್ವಾಸವನ್ನು ಮತ್ತಷ್ಟು ಹೆಚ್ಚಿಸುತ್ತದೆ ಎಂದು ಅವರು ಅಭಿಪ್ರಾಯಪಟ್ಟರು.



*ಅಪರಾಧ ತಡೆಗೆ ಕಟ್ಟುನಿಟ್ಟಿನ ಕ್ರಮ:* ಮುಂಬರುವ ದಿನಗಳಲ್ಲಿ ಜಿಲ್ಲೆಯಲ್ಲಿ ಅಪರಾಧ ಪ್ರಕರಣಗಳಿಗೆ ಕಡಿವಾಣ ಹಾಕಲು ರಾತ್ರಿ ಗಸ್ತು ಚುರುಕುಗೊಳಿಸುವುದು, ಸಿಸಿಟಿವಿ ಕ್ಯಾಮೆರಾಗಳ ಅಳವಡಿಕೆ ಹಾಗೂ ಹಳೇ ಅಪರಾಧಿಗಳ ಮೇಲೆ ತೀವ್ರನಿಗಾ ಇಡುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಪೊಲೀಸ್ ಇಲಾಖೆಯು ದಕ್ಷತೆಗೆ ಸಾಕ್ಷಿಯಾಗಿದೆ ಎಂದು ಹೇಳಿದರು.

ಮಾದಕ ವಸ್ತುಗಳ ವಿರುದ್ಧ ಸಮರ "ಆಪರೇಷನ್ ರೈಸ್ ಮತ್ತು ಬೇಡ ಬ್ರೋ" ಎಂಬ ಧ್ಯೇಯ ವಾಕ್ಯದೊಂದಿಗೆ ಕರ್ನಾಟಕ ರಾಜ್ಯ ಸರ್ಕಾರದ ಆದೇಶದಂತೆ ನಶೆ ಮುಕ್ತ ಕರ್ನಾಟಕದ ಅಭಿಯಾನವನ್ನು ರಾಜ್ಯದ ಪೊಲೀಸ್ ಇಲಾಖೆಯಿಂದ ಹಮ್ಮಿಕೊಂಡಿದ್ದು, ಯುವ ಜನತೆಗೆ ಮಾದಕ ವ್ಯಸನದ ದುಷ್ಪರಿಣಾಮದ ಅರಿವು ಮೂಡಿಸಲಾಗುತ್ತಿದೆ ಎಂದರು.

*ವಾರಸುದಾರರ ಹರ್ಷ:* ತಾವೇ ಆಸೆಪಟ್ಟು ಕೊಂಡು–ಕೊಂಡಿದ್ದ, ಕಳ್ಳರ ಪಾಲಾಗಿದ್ದ ಒಡವೆ ಹಾಗೂ ವಾಹನಗಳು ಬಹು ದಿನಗಳ ನಂತರ ಕೈಸೇರುತ್ತಿದ್ದಂತೆ ಸಾರ್ವಜನಿಕರ ಮುಖದಲ್ಲಿ ನೆಮ್ಮದಿಯ ನಗು ಕಂಡುಬಂದಿತು. ಪೊಲೀಸ್ ಇಲಾಖೆಯ ಈ ಪ್ರಾಮಾಣಿಕ ಹಾಗೂ ತ್ವರಿತ ಪ್ರಯತ್ನಕ್ಕೆ ಸಾರ್ವಜನಿಕರು ತುಂಬು ಹೃದಯದ ಕೃತಜ್ಞತೆ ಸಲ್ಲಿಸಿದರು.

*ಮೊಬೈಲ್ ಫೋರೆನ್ಸಿಕ್ ಲ್ಯಾಬ್ ವಾಹನಕ್ಕೆ ಚಾಲನೆ:* ಮೊಬೈಲ್ ಫೋರೆನ್ಸಿಕ್ ಲ್ಯಾಬ್ ಕೊಪ್ಪಳ ಜಿಲ್ಲಾ ಪೊಲೀಸ್ ವಾಹನಕ್ಕೆ ಬಳ್ಳಾರಿ ವಲಯ ಪೊಲೀಸ್ ಮಹಾ ನಿರೀಕ್ಷಕರು ಹಸಿರು ನಿಶಾನೆ ತೋರಿಸುವುದರ ಮೂಲಕ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಕೊಪ್ಪಳ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ. ರಾಮ್ ಎಲ್. ಅರಸಿದ್ದಿ ಅವರು ಮಾತನಾಡಿ, ದಿನಾಂಕ:01–01–2025 ರಿಂದ 30–06–2026ರ ವರೆಗೆ ಡಕಾಯಿತಿ, ದರೋಡೆ, ಸರಗಳ್ಳತನ, ಮನೆ ಕಳ್ಳತನ, ಜಾನುವಾರು ಕಳ್ಳತನ, ಇತರೆ ಕಳ್ಳತನ ಸೇರಿದಂತೆ ಕೊಪ್ಪಳ ಜಿಲ್ಲೆಯಲ್ಲಿ ಸ್ವತ್ತು ಕಳುವಾದ 252 ಪ್ರಕರಣಗಳು ವರದಿಯಾಗಿದ್ದು, ಅವುಗಳಲ್ಲಿ 104 ಪ್ರಕರಣಗಳನ್ನು ಪತ್ತೆ ಮಾಡಿ ಕಳುವಾದ ಮಾಲಿನ ಪೈಕಿ ಒಟ್ಟು ರೂ.1,82,45,960 ಮೌಲ್ಯದ ಮಾಲನ್ನು ವಶಪಡಿಸಿಕೊಳ್ಳುವಲ್ಲಿ ನಮ್ಮ ಜಿಲ್ಲೆಯ ವಿವಿಧ ಪೊಲೀಸ್ ಠಾಣೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಯಶಸ್ವಿಯಾಗಿದ್ದಾರೆ. ಸ್ವತ್ತಿನ ಅಪರಾಧ ಪ್ರಕರಣಗಳಲ್ಲಿ ವಶಪಡಿಸಿಕೊಂಡ ಈ ಎಲ್ಲಾ ಮುದ್ದೆಮಾಲನ್ನು ಐಜಿ ಡಾ. ಪಿ.ಎಸ್. ಹರ್ಷ ರವರ ನೇತೃತ್ವದಲ್ಲಿ ಇಂದು ಸಂಬಂಧಿಸಿದ ವಾರಸುದಾರರಿಗೆ ಹಸ್ತಾಂತರಿಸಲಾಗಿದೆ. ಐಜಿಯವರು ಯಾವಾಗಲೂ ಪೊಲೀಸರ ಕಲ್ಯಾಣವನ್ನು ಗಮನದಲ್ಲಿಟ್ಟುಕೊಂಡು ನಮಗೆ ಮಾರ್ಗದರ್ಶನವನ್ನು ಮಾಡುತ್ತಿರುತ್ತಾರೆ. ಹಾಗಾಗಿ ನಮ್ಮ ಜಿಲ್ಲೆಯ ಪೊಲೀಸ್ ಸಿಬ್ಬಂದಿಯ ಮಕ್ಕಳಲ್ಲಿ ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ. 90 ಕ್ಕೂ ಅಧಿಕ ಅಂಕಗಳನ್ನು ಪಡೆದಿರುವ 53 ವಿದ್ಯಾರ್ಥಿಗಳಿದ್ದು, ಅವರಿಗೆ ನೆನಪಿನ ಕಾಣಿಕೆ ಮತ್ತು ಪ್ರಶಂಸನಾ ಪತ್ರ ನೀಡುವ ಮೂಲಕ ಪ್ರೋತ್ಸಾಹಿಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಆರ್.ಹೇಮಂತ್ ಕುಮಾರ್, ಕೊಪ್ಪಳ ಡಿವೈಎಸ್ಪಿ ಮುತ್ತಣ್ಣ ಸವರಗೋಳ, ಗಂಗಾವತಿ ಡಿವೈಎಸ್ಪಿ ಜೆ.ನ್ಯಾಮನಗೌಡರ, ಸೈಬರ್ ವಿಭಾಗದ ಡಿವೈಎಸ್ಪಿ ಸಿದ್ದಲಿಂಗಪ್ಪಗೌಡ, ಡಿಎಆರ್ ಡಿವೈಎಸ್ಪಿ ಶಶಿಧರಯ್ಯ ಹಿರೇಮಠ, ಸೇರಿದಂತೆ ಜಿಲ್ಲೆಯ ಇತರೆ ಪೊಲೀಸ್ ಇಲಾಖೆಯ ಅಧಿಕಾರಿಗಳು, ವಿವಿಧ ಪೊಲೀಸ್ ಠಾಣೆಗಳ ಅಧಿಕಾರಿಗಳು, ಸಿಬ್ಬಂದಿ, ಪೊಲೀಸ್ ಕುಟುಂಬಸ್ಥರು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

# ಜೂಟ್ ಉತ್ಪನ್ನ ತಯಾರಿಕೆ ತರಬೇತಿಗೆ ಚಾಲನೆ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಎಸ್‌ಬಿಐ ಆರ್‌ಸೆಟಿ, ಕೊಪ್ಪಳ ವತಿಯಿಂದ ಹಿಟ್ನಾಳ್ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಂದ ಸಂಜೀವಿನಿ ಕೌಶಲ್ಯ ಕೇಂದ್ರದಲ್ಲಿ 35 ಮಹಿಳೆಯರಿಗೆ 16 ದಿನಗಳ ಜೂಟ್ ಉತ್ಪನ್ನ ತಯಾರಿಕೆ ಉದ್ಯಮಶೀಲತಾ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಎಸ್‌ಬಿಐ ಆರ್‌ಸೆಟಿ, ಕೊಪ್ಪಳದ ನಿರ್ದೇಶಕ ಶ್ರೀ ರಾಯೇಶ್ವರ ಪೈ ಅವರು, ಸಂಸ್ಥೆಯ ಉದ್ದೇಶ ಹಾಗೂ ಸ್ವಯಂ ಉದ್ಯೋಗದ ಮಹತ್ವ ಮತ್ತು ಪ್ರಯೋಜನಗಳ ಕುರಿತು ವಿವರಿಸಿದರು. ಮಹಿಳೆಯರು ತರಬೇತಿಯ ಸದುಪಯೋಗ ಪಡೆದುಕೊಂಡು ಸ್ವಯಂ ಉದ್ಯೋಗ ಕೈಗೊಂಡು ಆರ್ಥಿಕವಾಗಿ ಸ್ವಾವಲಂಬಿಗಳಾಗಬೇಕು ಎಂದು ತಿಳಿಸಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಪ್ರಿಯದರ್ಶಿನಿ ಅವರು ಮಹಿಳೆಯರ ಸ್ವಾವಲಂಬನೆ ಹಾಗೂ ಸಬಲೀಕರಣದ ಕುರಿತು ಮಾತನಾಡಿದರು. ಸಂಜೀವಿನಿ ಒಕ್ಕೂಟದ ಅಧ್ಯಕ್ಷೆ ಶ್ರೀಮತಿ ಪುಷ್ಪವತಿ ಅವರು ಮಾತನಾಡಿ, ದಿನಗೂಲಿ ಕೆಲಸಕ್ಕಿಂತ ಸ್ವಯಂ ಉದ್ಯೋಗ ಉತ್ತಮವಾಗಿದ್ದು, ಮಹಿಳೆಯರು ಸ್ವಯಂ ಉದ್ಯೋಗದ ಮೂಲಕ ಆರ್ಥಿಕವಾಗಿ ಸಬಲರಾಗಬೇಕು ಎಂದು ಹೇಳಿದರು.

ಕಾರ್ಯಕ್ರಮದ ನಿರೂಪಣೆಯನ್ನು ಉಪನ್ಯಾಸಕಿ ಗೀತಾ ಅವರು ನಡೆಸಿಕೊಟ್ಟರು.

ಈ ಸಂದರ್ಭದಲ್ಲಿ ಸಂಸ್ಥೆಯ ಸಿಬ್ಬಂದಿ ಪ್ರಸಾದ ಲಕ್ಷ್ಮಣ, ಸಂಜೀವಿನಿ ಒಕ್ಕೂಟದ ಕಾರ್ಯದರ್ಶಿ ಶಿಲ್ಪಾ,ಎಂ.ಬಿ.ಕೆ. ಪಾರ್ವತಿ, ರೇಣುಕಾ, ಮಂಜುಳಾ, ದೀಪಾ, ಪವಿತ್ರ, ಸಿಂಧು ಸೇರಿದಂತೆ ತರಬೇತಿ ಶಿಬಿರಾರ್ಥಿಗಳು ಉಪಸ್ಥಿತರಿದ್ದರು.

# ನಿವೃತ್ತ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷರಾಗಿ ಹಲಗೇರಿ ಆಯ್ಕೆ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಕನಾ9ಟಕ ರಾಜ್ಯ ಸಕಾ9ರಿ ನಿವೃತ್ತ ನೌಕರರ ಸಂಘದ ಅಧ್ಯಕ್ಷ ಎಲ್. ಬೈರಪ್ಪನವರು, ರಾಜ್ಯ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನಿಕಟಪೂರ್ವ ಅಧ್ಯಕ್ಷ ಶಂಭುಲಿಂಗನಗೌಡ ಪಾಟೀಲ ಹಲಗೇರಿ ಇವರನ್ನು ಕನಾ9ಟಕ ರಾಜ್ಯ ಸರ್ಕಾರಿ ನಿವೃತ್ತ ನೌಕರರ ಕೇಂದ್ರ ಸಂಘದ ರಾಜ್ಯ ಹಿರಿಯ ಉಪಾಧ್ಯಕ್ಷರನ್ನಾಗಿ ನೇಮಕಗೂಳಿಸಿ ಆದೇಶ ಪ್ರಮಾಣಪತ್ರವನ್ನು ನೀಡಿದರು.



ನೇಮಕಗೊಂಡ ಬಳಿಕ ಮಾತನಾಡಿದ ಶಂಭುಲಿಂಗಗೌಡ ಪಾಟೀಲ ಹಲಗೇರಿ ಅವರು, ರಾಜ್ಯದ ಎಲ್ಲಾ ನಿವೃತ್ತ ಸರ್ಕಾರಿ ನೌಕರರ ಹಿತಾಸಕ್ತಿಯನ್ನು ಕಾಪಾಡುವುದು ತಮ್ಮ ಮೊದಲ ಆದ್ಯತೆಯಾಗಿದ್ದು, ನಿವೃತ್ತ ನೌಕರರು ಎದುರಿಸುತ್ತಿರುವ ಪಿಂಚಣಿ, ವೈದ್ಯಕೀಯ ಸೌಲಭ್ಯ, ಆರ್ಥಿಕ ಭದ್ರತೆ ಸೇರಿದಂತೆ ವಿವಿಧ ಸಮಸ್ಯೆಗಳ ಪರಿಹಾರಕ್ಕಾಗಿ ಸರ್ಕಾರದ ಗಮನ ಸೆಳೆಯುವ ನಿಟ್ಟಿನಲ್ಲಿ ಸಂಘವನ್ನು ಇನ್ನಷ್ಟು ಬಲಪಡಿಸಲಾಗುವುದು ಎಂದು ತಿಳಿಸಿದರು.ಸಂಘದ ರಾಜ್ಯ ಹಾಗೂ ಜಿಲ್ಲಾ ಘಟಕಗಳೊಂದಿಗೆ ಸಮನ್ವಯ ಸಾಧಿಸಿ, ನಿವೃತ್ತ ನೌಕರರ ಧ್ವನಿಯನ್ನು ಸರ್ಕಾರದ ಮಟ್ಟದಲ್ಲಿ ಪರಿಣಾಮಕಾರಿಯಾಗಿ ಪ್ರತಿನಿಧಿಸುವ ಕೆಲಸಕ್ಕೆ ಹೆಚ್ಚಿನ ಒತ್ತು ನೀಡಲಾಗುವುದು. ರಾಜ್ಯದ ಎಲ್ಲ ಜಿಲ್ಲೆಗಳ ನಿವೃತ್ತ ನೌಕರರನ್ನು ಒಗ್ಗೂಡಿಸಿ, ಅವರ ಹಕ್ಕುಗಳ ರಕ್ಷಣೆ ಹಾಗೂ ಕಲ್ಯಾಣಕ್ಕಾಗಿ ನಿರಂತರ ಹೋರಾಟ ನಡೆಸುವುದಾಗಿ ಅವರು ಹೇಳಿದರು.ನಿವೃತ್ತ ನೌಕರರು ಮಾತನಾಡಿ ಶಂಭುಲಿಂಗಗೌಡ ಪಾಟೀಲ ಸಂಘಟನಾ ಅನುಭವ, ಸೇವಾ ಮನೋಭಾವ ಹಾಗೂ ನಾಯಕತ್ವದ ಗುಣಗಳು ಸಂಘದ ಬೆಳವಣಿಗೆಗೆ ಮತ್ತಷ್ಟು ಬಲ ತುಂಬಲಿವೆ ಎಂಬ ವಿಶ್ವಾಸವನ್ನು ಸಂಘದ ಮುಖಂಡರು ವ್ಯಕ್ತಪಡಿಸಿದರು.ಈ ಸಂದರ್ಭದಲ್ಲಿ ಸಂಘದ ಪದಾಧಿಕಾರಿಗಳು, ನಿವೃತ್ತ ಸರ್ಕಾರಿ ನೌಕರರು ಹಾಗೂ ಗಣ್ಯರು ಶಂಭುಲಿಂಗಗೌಡ ಪಾಟೀಲ ಹಲಗೇರಿ ಅವರಿಗೆ ಅಭಿನಂದನೆ ಸಲ್ಲಿಸಿ, ಅವರ ಅವಧಿಯಲ್ಲಿ ಸಂಘವು ಇನ್ನಷ್ಟು ಅಭಿವೃದ್ಧಿ ಹೊಂದಲಿ ಎಂದು ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಅಧ್ಯಕ್ಷರಾದ ಎಲ್ ಬೈರಪ್ಪನವರು ಹಾಗೂ ಪ್ರಧಾನ ಕಾರ್ಯದರ್ಶಿ ರಂಗೇಗೌಡರು ಹಿರಿಯ ಉಪಾಧ್ಯಕ್ಷರಾದ ಎನ್ ನಂಜಪ್ಪನವರು ಹಾಗೂ ಉಪಾಧ್ಯಕ್ಷರಾದ ಮುನಿದೇವಕುಮಾರ ಹಾಗೂ ಪ್ರಭಾರವರು,ಕಾಯ9ದಶಿ9ಯಾದ ನಾರಾಯಣಸ್ವಾಮಿರವರು ಹಾಗೂ ಪುಟ್ಟಸ್ವಾಮಿರವರು ಜಂಟಿ ಕಾಯ9ದಶಿ9ಯಾದ ನಾಗೇಂದ್ರರವರು ಹಾಗೂ ಕನಾ9ಟಕ ರಾಜ್ಯ ಸಕಾ9ರಿ ನೌಕರರ ಸಂಘ ರಾಜ್ಯ ಉಪಾಧ್ಯಕ್ಷರಾದ ಸದಾನಂದ ನೆಲಕುದ್ರಿ ಅವರು ಬೆಂಗಳೂರಿನ ಕೆ ಆರ್ ಪುರಂ ಕ್ಷೇತ್ರದ ಸಮಾಜ ಸೇವಕರಾದ ದ್ಯಾಮಣ್ಣ ಬಡಿಗೇರ ಹಾಗೂ ಕಳಕನಗೌಡ ಪಾಟೀಲ ಹಲಗೇರಿ ಅವರು ಮಂಜುನಾಥ ಕುರಿ ಅವರು ಉಪಸ್ಥಿತರಿದ್ದರು.

# ಪ್ರಧಾನ ಮಂತ್ರಿ ಮಾತೃ ವಂದನ ಯೋಜನೆಯಲ್ಲಿ ಎಲ್ಲಾ ಗರ್ಭಿಣಿ ಹೆಣ್ಣು ಮಕ್ಕಳು ನೊಂದಣಿ ಮಾಡಿಕೊಳ್ಳಿ : ಮಂಜುನಾಥ್

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಜಿಲ್ಲೆಯಲ್ಲಿ ಯಾವುದೇ ಮಹಿಳೆಯು ಅಪೌಷ್ಟಿಕತೆಯಿಂದ ಬಳಲಬಾರದು. ಪೌಷ್ಟಿಕ ಆಹಾರದ ಕೊರತೆಯು ಮಹಿಳೆಯರ ಆರೋಗ್ಯದ ಮೇಲೆ, ವಿಶೇಷವಾಗಿ ಗರ್ಭಿಣಿಯರು ಮತ್ತು ಬಾಣಂತಿಯರ ಮೇಲೆ ಗಂಭೀರ ಪರಿಣಾಮ ಬೀರುತ್ತದೆ. ಇದನ್ನು ತಡೆಯಲು ಸರ್ಕಾರ ಈ ಯೋಜನೆ ಜಾರಿಗೊಳಿಸಿದೆ ಎಲ್ಲರೂ ಅನುಷ್ಠಾನ ಪ್ರತಯೊಬ್ಬರ ಕರ್ತವ್ಯ ವಾಗಿದೆಂದು

ಜಿಲ್ಲಾ ಪಂಚಾಯತ ಮುಖ್ಯ ಯೋಜನೆ ಅಧಿಕಾರಿ ಮಂಜುನಾಥ ಹೇಳಿದರು

ಅವರು ಇಂದು ಕೊಪ್ಪಳ ಜಿಲ್ಲಾ ಸಂಪನ್ಮೂಲ ತರಬೇತಿ ಕೇಂದ್ರಲ್ಲಿ ಜುರುಗಿದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಐಪಿಇ ಗ್ಲೋಬಲ ಸಂಸ್ಥೆ ಹಾಗೂ ಜಿಲ್ಲಾ ಮಹಿಳಾ ಸಬಲಿಕರಣ ಘಟಕ ಕೊಪ್ಪಳ ಇವರ ಸಂಯುಕ್ತ ಆಶ್ರಯದಲ್ಲಿ ಜರುಗಿದ ಪ್ರಧಾನ ಮಂತ್ರಿ ಮಾತೃ ವಂಧನಾ ಯೋಜನೆ ಹಾಗೂ ಗರ್ಭಿಣಿಯರ ಪೌಷ್ಟಿಕ ತೆ ಕುರಿತು ಅದಿಕಾರಿಗಳು ಸಿಬ್ಬಂದಿಗಳಿಗೆ ಒಂದು ದಿನದ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು

ಗ್ರಾಮೀಣ ಪ್ರದೇಶದ ಅಂಗನವಾಡಿಗಳಲ್ಲಿ ಮೂಲಬೂತ ಸೌಕರ್ಯ ಗಳನ್ನು ಒದಗಿಸಲಾಗುವದು ಮಕ್ಕಳಲ್ಲಿ ಪೂರ್ವ ಪ್ರಾಥಮಿಕ ಶಾಲೆಗಳಲ್ಲಿ ಮಕ್ಕಳಿಗೆ ಚೆನ್ನಾಗಿ ಶಿಕ್ಷಣ ಹಾಗೂ ಬೌದ್ಧಿಕ ಹಾಗೂ ದೈಹಿಕ ಬೆಳವಣಿಗೆಗೆ ಪ್ರಮುಖ ಪಾತ್ರ ವಹಿಸಬೇಕು ಪ್ರಧಾನ ಮಂತ್ರಿ ಮಾತೃ ವಂದನ ಯೋಜನೆಯಲ್ಲಿ ಎಲ್ಲಾ ಗರ್ಬಿಣಿ ಹೆಣ್ಣು ಮಕ್ಕಳು ನೊಂದಣೆಯಾಗಿಬೇಕು ಯಾರು ಹೊರಗೆ ಉಳಿಯಬಾರದು ಯಾವುದೇ ಹೆಣ್ಣು ಮಗಳು ಹಾಗೂ ಮಗು ಅಪೌಷ್ಟಿಕತೆ ಯಿಂದ ಒಳಗಾಗದಂತೆ ಜಾಗ್ರತೆ ವಹಿಸಬೇಕು ಅಪೌಷ್ಟಿಕ ಹೆಚ್ಚಾಗಬಾರದೆಂದು ಮಾತೃ ವಂಧನಾ ಯೋಜನೆಯಡಿಯಲ್ಲಿ ಮಹಿಳೆಯರಿಗೆ ಹೆಣ್ಣು ಮಗುವಿಗೆ 6000 ಸಾವಿರ ಗಂಡು ಮಗುವಿಗೆ 5000 ಸಾವಿರ ಆರ್ಥಿಕ ನೇರವು ನೀಡಲಾಗುತ್ತದೆ ಅಧಿಕಾರಿಗಳು ಸಮರ್ಪಕವಾಗಿ ಅನುಷ್ಠಾನ ಗೋಳಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಅಮರೇಶ ಹಾವಿನ್ ಪ್ರಾಸ್ತಾವಿಕ ನುಡಿದರು , ಮುಖ್ಯ ಅತಿತಿಗಳಾಗಿ ಜಿಲ್ಲಾ ನಿರೂಪಣಾಧಿಕಾರಿ ನಟರಾಜ , ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಅನ್ನಪೂರ್ಣ ಕಂಬಕಡ್ಡಿ ಸಿಡಿಪಿಓಗಳಾದ ರೋಹಿಣಿ ಕೊಟಗಟರ,ವಿಜಯಲಕ್ಷ್ಮಿ ಹಿರೇಮಠ, ಶಿವಶರಣಪ್ಪ ಗದ್ದಿ, ಜಿಲ್ಲಾ ಸಂಪನ್ಮೂಲ ವ್ಯಕ್ತಿ ಯಲ್ಲಪ್ಪ ಕೆ ಜಿಲ್ಲಾ ಸಂಪನ್ಮೂಲ ಕೇಂದ್ರ ಸಹಾಯಕ ಆಡಳಿತಾಧಿಕಾರಿ ಬಸವರಾಜ ಮುಂಡರಗಿ, ಹಾಗೂ ಸಿಬ್ಬಂದಿಗಳು ವಲಯ ಮೇಲ್ವಿಚಾರಕರು ಜಿಲ್ಲಾ ಮಹಿಳಾ ಸಬಲಿಕರಣ ಘಟಕದ ಸಂಯೋಜಕಿ ಶ್ರೀದೇವಿ, ಕಾರ್ಯಕ್ರಮ ನಿರೂಪಿಸಿದರು

## ಇಂದಿನಿಂದ ಬಾಡಿಯಾಲದ ಚನ್ನವೀರೇಶ್ವರ ಮಠದಲ್ಲಿ ಪ್ರವಚನ ಪ್ರಾರಂಭ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಸೈದಾಪುರ ಸಮೀಪದ ಸುಕ್ಷೇತ್ರ ಬಾಡಿಯಾಲದಲ್ಲಿ ಪೂಜ್ಯ ಶ್ರೀ ಷ.ಬ್ರ. ಚನ್ನವೀರ ಶಿವಾಚಾರ್ಯರು ಸಂಸ್ಥಾನ ಮೂಲಮಠದ 8ನೇ ಜಾತ್ರಾ ಮಹೋತ್ಸವ ಹಾಗೂ ಗುರು ವಂದನ ಸಮಾರಂಭ ಆಯೋಜನೆ ಮಾಡಲಾಗಿದೆ. ದಿನಾಂಕ: 24-07-2026 ಶುಕ್ರವಾರದಿಂದ ದಿನಾಂಕ : 28-07-2026 ಮಂಗಳವಾರ ವರೆಗೆ ಮಹಾಪುರಾಣ ಜರಗುವುದು. ದಿನಾಂಕ : 29-07-2026 ರಂದು ಬುಧವಾರ ಬೆಳಿಗ್ಗೆ 6.00 ಗಂಟೆಗೆ ಕರ್ತು ಗದ್ದುಗೆ ರುದ್ರಾಭಿಷೇಕ, ಪೂಜೆ ಹಾಗೂ 11.00 ಗಂಟೆಗೆ ಗುರು ಪುರ್ಣಿಮೆ ನಿಮಿತ್ಯ ಪರಮ ಪೂಜ್ಯ ಷ.ಬ್ರ. ಶ್ರೀ ಚನ್ನವೀರ ಶಿವಾಚಾರ್ಯರ ಗುರುವಂದನಾ ಕಾರ್ಯಕ್ರಮ ನೇರವೇರುವುದು ಮತ್ತು ಸಾಯಂಕಾಲ 6.00 ಗಂಟೆಗೆ ಮಹಾ ರಥೋತ್ಸವ ಜರುಗುವದು, ಪುರಾಣಿಕರು: ಪ.ಪೂ.ಪ್ರೋ.ಬ್ರ. ಮಾತೋಶ್ರೀ ವಿದ್ಯಾದೇವಿ ತಾಯಿಯವರು, ಶ್ರೀ ಸಿದ್ದರೂಢ ಮಠ, ಸೈದಾಪುರ, ಸಂಗೀತಾ ಕಾರ್ಯಕ್ರಮ : ಸೋಮಯ್ಯ ಹಿರೇಮಠ, ಕಲಬುರಗಿ, ತಬಲಾ ಸೇವೆ : ಮಲ್ಲಿಕಾರ್ಜುನ ವರನಾಳ, ಕಲಬುರಗಿ ಇವರಿಂದ ಪ್ರವಚನ ಕಾರ್ಯಕ್ರಮ ಜರಗುವುದು ಆದ್ದರಿಂದ ಬಾಡಿಯಾಲ ಹಾಗೂ ಸುತ್ತಮುತ್ತಲಿನ ಗ್ರಾಮದ ಸದ್ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಗುರುವಿನ ಆಶೀರ್ವಾದ ಪಡೆಯಿರಿ ಎಂದು ಶ್ರೀ ಮಠದ ಪೂಜ್ಯ ಶ್ರೀ ಷ.ಬ್ರ. ಚನ್ನವೀರ ಶಿವಾಚಾರ್ಯರು ಪತ್ರಿಕೆ ಪ್ರಕಟಣೆಗೆ ತಿಳಿಸಿದ್ದಾರೆ.

## ಗುರುಬಸವ ಜ್ಯೋತಿ ಯಾತ್ರೆಗೆ ಭವ್ಯ ಸ್ವಾಗತ



• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಮೂರನೇ ಬಸವ ಉತ್ಸವದ ಪ್ರಚಾರಾರ್ಥ ಹಮ್ಮಿಕೊಳ್ಳಲಾಗಿರುವ ಗುರುಬಸವ ಜ್ಯೋತಿ ಯಾತ್ರೆ ಇಂದು ಗುರುಮಠಕಲ್ ಖಾಸಾ ಮಠಕ್ಕೆ ಆಗಮಿಸಿತು. ಚನ್ನಬಸವ ಜ್ಞಾನಪೀಠ, ಬಸವ ಗಂಗೋತ್ರಿ, ಬೆಂಗಳೂರಿನ ಪೀಠಾಧ್ಯಕ್ಷರಾದ ಶ್ರೀ ಪೂಜ್ಯ ಡಾ. ಚನ್ನಬಸವಾನಂದ ಸ್ವಾಮೀಜಿ ಅವರ ನೇತೃತ್ವದಲ್ಲಿ ನಡೆದ ಯಾತ್ರೆಗೆ ಖಾಸಾ ಮಠದ ಪೀಠಾಧ್ಯಕ್ಷರಾದ ಶ್ರೀ ಪೂಜ್ಯ ಶಾಂತವೀರ ಗುರುಮುರರಾಜೇಂದ್ರ ಸ್ವಾಮೀಜಿ ಭವ್ಯ ಸ್ವಾಗತ ಕೋರಿದರು.ಸ್ವಾಗತ ಸಮಾರಂಭದಲ್ಲಿ ಮಾತನಾಡಿದ ಶಾಂತವೀರ ಗುರುಮುರರಾಜೇಂದ್ರ ಸ್ವಾಮೀಜಿ, ಡಾ. ಚನ್ನಬಸವಾನಂದ ಸ್ವಾಮೀಜಿಗಳು ದೇಶಾದ್ಯಂತ ಬಸವ ತತ್ವಗಳ ಪ್ರಚಾರ ಮಾಡುತ್ತಿರುವುದು ಶ್ಲಾಘನೀಯ ಕಾರ್ಯವಾಗಿದ್ದು, ಅವರ ಆಗಮನ ಖಾಸಾ ಮಠಕ್ಕೆ ಸಂತಸ ತಂದಿದೆ ಎಂದು ಹೇಳಿದರು. ಇದೇ ವೇಳೆ ಖಾಸಮಠದ ಭಕ್ತರಾದ ಶ್ರೀ ನರಸರೆಡ್ಡಿ ಪೊ ಪಾಟೀಲ್ ಗಡ್ಡೆಸೂಗೂರು ವರು ಗುರುಬಸವ ಜ್ಯೋತಿ ಯಾತ್ರೆಗೆ ?5,001 ಕಾಣಿಕೆ ನೀಡಿದರು.ಬಳಿಕ ಮಾತನಾಡಿದ ಡಾ. ಚನ್ನಬಸವಾನಂದ ಸ್ವಾಮೀಜಿ, ಬೀದರಿನಿಂದ ಬಸವಕಲ್ಯಾಣದವರೆಗೆ ಸಾಗುತ್ತಿರುವ ಈ ಜ್ಯೋತಿ ಯಾತ್ರೆಯ ಉದ್ದೇಶ ಬಸವ ತತ್ವಗಳನ್ನು ಜನರಿಗೆ ತಲುಪಿಸುವುದಾಗಿದೆ. ಇಂದಿನ ಸಮಾಜಕ್ಕೆ ಬಸವಾದಿ ಶರಣರ ತತ್ವಗಳು ಅತ್ಯಂತ ಅಗತ್ಯವಾಗಿದ್ದು, ಜುಲೈ 25ರಿಂದ ನಡೆಯಲಿರುವ ಮೂರನೇ ಬಸವ ಉತ್ಸವದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಕರೆ ನೀಡಿದರು.ಈ ಸಂದರ್ಭದಲ್ಲಿ, ಗುರುಬಸವ ಜ್ಯೋತಿ ಯಾತ್ರೆ ತಂಡದ ಸದಸ್ಯರಾದ ಶ್ರೀಮತಿ ಗಿರಿಜಮ್ಮ ಶ್ರೀಮತಿ ಸರಸ್ವತಿ ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷರಾದ ಶಿವಾನಂದ ಬೂದಿ, ಸಮಾಜದ ನಾಗಭೂಷಣ ಅವಂಟಿ, ಮಲ್ಲಿಕಾರ್ಜುನ್ ಹಿರೇಮಠ, ಬಸವರಾಜ್ ದಳಪತಿ, ಧರ್ಮವೀರ್ ವಾರದ್, ಅಖಂಡೇಶ್ವರಯ್ಯ ಸ್ವಾಮಿ ಹಿರೇಮಠ, ಆನಂದಶೇಖರ ಹಿರೇಮಠ, ಮುರಳಿಧರ ಸ್ವಾಮಿ, ವೀರಣ್ಣ ಬೇಲಿ ,ಶಂಕ್ರಯ್ಯ ಸ್ವಾಮಿ ಗದ್ವಾಲ್ ,ರಘನಾಥ ರೆಡ್ಡಿ ನಜರಾಪುರ, ಮಲ್ಲಿಕಾರ್ಜುನ್ ವಸ್ತ್ರದ್, ಮಲ್ಲಿಕಾರ್ಜುನ್ ಬೆನಕನಹಳ್ಳಿ ,ಖಾಸಮಠದ ಭಕ್ತರು ಹಾಗೂ ಖಾಸಾಮಠದ ಶಾಲಾ ಮಕ್ಕಳು ಶಾಲಾ ಶಿಕ್ಷಕರು ಇದ್ದರು.

## ಜಿಲ್ಲಾಧಿಕಾರಿಗಳಿಂದ ಕೊಟ್ಟೂರು ತಾಲೂಕಿನಲ್ಲಿ ಬೆಳೆಗಳ ವೀಕ್ಷಣೆ



• ಮಲ್ಲಮ್ಮ ನುಡಿ ವಾರ್ತೆ ಕೊಟ್ಟೂರು

: ವಿಜಯನಗರ ಜಿಲ್ಲಾಧಿಕಾರಿಗಳು ಕೊಟ್ಟೂರು ತಾಲೂಕಿನ ಗಜಾಪುರ ಕಂದಾಯ ಗ್ರಾಮದಲ್ಲಿ ಸ ನಂ.541ಂ, 541ಃ ಹಾಗೂ 564ಅ ಜಮೀನುಗಳಲ್ಲಿ ಬೆಳೆದ ಬೆಳೆಗಳ ವೀಕ್ಷಣೆ ಮಾಡಿದರು. ಸ್ಥಳದಲ್ಲಿದ್ದ ರೈತರಿಂದ ಹಾಲಿ ಬೆಳೆಗಳ ಸ್ಥಿತಿ ಕುರಿತು ಚರ್ಚಿಸಿ ಮಾಹಿತಿ ಪಡೆದರು. ಈ ಸಮಯದಲ್ಲಿ ಜಿ.ಪಂ. ಸಿ.ಇ.ಒ., ಕೃಷಿ, ತೋಟಗಾರಿಕೆ ಹಾಗು ಇತರೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಹಾಯಕ ಆಯುಕ್ತರು, ಹರಪನಹಳ್ಳಿ, ತಹಶೀಲ್ದಾರರು, ಕಾರ್ಯನಿರ್ವಾಹಕ ಅಧಿಕಾರಿಗಳು, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರು, ಕಂದಾಯ ನಿರೀಕ್ಷಕರು, ಗ್ರಾಮ ಆಡಳಿತ ಅಧಿಕಾರಿ ಇತರೆ ಅಧಿಕಾರಿಗಳು ಹಾಜರಿದ್ದರು.

## ದಾನಿ ಶ್ರೀಮತಿ ಶಾಲಿನಿ ದೋಶಿ ನಿಧನ

• ಮಲ್ಲಮ್ಮ ನುಡಿ ವಾರ್ತೆ ಇಂಡಿ

ನಗರದ ನಿವಾಸಿ ಶ್ರೀಮತಿ ಶಾಲಿನಿ ಮಾಣಿಕಚಂದ ದೋಶಿ ( 91) ವಯೋಸಹಜ ನಿಧನರಾದರು. ಅವರು ಪುತ್ರ ವೈದ್ಯನನ್ನು ಬಿಟ್ಟು ಅಗಲಿದ್ದಾರೆ. ಇಂಡಿ ಶ್ರೀ ಶಾಂತೇಶ್ವರ ವಿದ್ಯಾವರ್ಧಕ ಸಂಸ್ಥೆಯ ಅಡಿಯಲ್ಲಿ ಶ್ರೀಮತಿ ಶಾಲಿನಿ ಮಾಣಿಕಚಂದ ದೋಶಿ ಮಹಿಳಾ ಪದವಿಪೂರ್ವ ಮಹಾವಿದ್ಯಾಲಯ ಇದೆ.ಸಂತಾಪ : ಮೃತರ ಗೌರವಾರ್ಥ ಶ್ರೀ ಶಾಂತೇಶ್ವರ ವಿಧ್ಯಾವರ್ಧಕ ಸಂಸ್ಥೆಯ ಎಲ್ಲ ಶಾಲಾ ಕಾಲೇಜುಗಳಿಗೆ ರಜೆ ಘೋಷಿಸಲಾಗಿತ್ತು. ಇಂದು ಪದವಿಪೂರ್ವ ಮಹಾವಿದ್ಯಾಲಯದ ಆವರಣದಲ್ಲಿ ಸಂತಾಪ ಸೂಚಕ ಸಭೆ ನಡೆಯಿತು.ಸಂಸ್ಥೆಯ ಅಧ್ಯಕ್ಷ ನೀಲಕಂಠಗೌಡ ಪಾಟೀಲ, ಆದರ್ಶ ಬಗಲಿ ವಿಜಯಕುಮಾರ ರಾಠೋಡ, ರಾಘವೇಂದ್ರ ಕುಲಕರ್ಣಿ




ಮಾತನಾಡಿದರು .ಸಂಸ್ಥೆಯ ರಮೇಶ ಗಾಂಧಿ, ಭೀಮನಗೌಡ ಪಾಟೀಲ ಶಾಂತು ಬಿರಾದಾರ, ಬಸವರಾಜ ತಾಂಬೆ, ರಾಜುಗೌಡ ಪಾಟೀಲ, ಸಾತು ತೆನೆಹಳ್ಳಿ ಸೇರಿದಂತೆ ಸಂಸ್ಥೆಯ ಎಲ್ಲ ಅಂಗ ಸಂಸ್ಥೆಯ ಮುಖ್ಯಸ್ಥರು ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿ ವಿದ್ಯಾರ್ಥಿನಿಯರು ಪಾಲ್ಗೊಂಡಿದ್ದರು.

ಮೃತರ ಅಂತ್ಯಕ್ರಿಯೆ ಇಂಡಿಯಲ್ಲಿ ಮಧ್ಯಾಹ್ನ ನಡೆಯಿತು..

## ನಗರದ ಸೌಂದರ್ಯಕ್ಕೆ ಶ್ರಮಿಸುವ ಪೌರಕಾರ್ಮಿಕರು ತಮ್ಮ ಆರೋಗ್ಯಕ್ಕೂ ಆದ್ಯತೆ ನೀಡಲಿ: ಪೌರಾಯುಕ್ತ ಚವ್ಹಾಣ್

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಜು:23:ನಗರದ ಸೌಂದರ್ಯೀಕರಣಕ್ಕಾಗಿ ಬೆಳಿಗ್ಗೆ ಎದ್ದು ಚರಂಡಿ ಸ್ವಚ್ಛತೆ ಹಾಗೂ ಕಸ ವಿಲೇವಾರಿಯಲ್ಲಿ ತೊಡಗಿಸಿಕೊಳ್ಳುವ ಪೌರಕಾರ್ಮಿಕರು, ತಮ್ಮ ಸ್ವಂತ ಆರೋಗ್ಯದ ಕಡೆಗೂ ಹೆಚ್ಚಿನ ಗಮನ ಹರಿಸುವುದು ಅತ್ಯಗತ್ಯ ಎಂದು ನಗರಸಭೆ ಪೌರಾಯುಕ್ತ ಉಮೇಶ ಚವ್ಹಾಣ್ ಹೇಳಿದರು.

ನಗರಸಭೆ ಆವರಣದಲ್ಲಿ ಗುರುವಾರ ಆರೋಗ್ಯ ಇಲಾಖೆಯ ಸಹಯೋಗದೊಂದಿಗೆ ಹಮ್ಮಿಕೊಳ್ಳಲಾಗಿದ್ದ ಪೌರಕಾರ್ಮಿಕರ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಸ್ವಚ್ಛತಾ ಕಾರ್ಯ ಕೈಗೊಳ್ಳುವಾಗ ಆರೋಗ್ಯದ ದೃಷ್ಟಿಯಿಂದ ಪೌರಕಾರ್ಮಿಕರು ಕಡ್ಡಾಯವಾಗಿ ಸಮವಸ್ತ್ರ ಹಾಗೂ ಸುರಕ್ಷಾ ಕವಚಗಳನ್ನು ಧರಿಸಬೇಕು ಎಂದರು.

ನಗರದ ಸ್ವಚ್ಛತೆಯನ್ನು ಕಾಪಾಡುವ ಜೊತೆಗೆ ಪೌರಕಾರ್ಮಿಕರು ತಮ್ಮ ವೈಯಕ್ತಿಕ ನೈರ್ಮಲ್ಯ ಮತ್ತು ಸ್ವಚ್ಛತೆಗೂ ಪ್ರಾಮುಖ್ಯತೆ ನೀಡಬೇಕು. ಎಲ್ಲಕ್ಕೂ ಹೆಚ್ಚಾಗಿ ಕೆಲಸ ಮಾಡುವಾಗ ಆರೋಗ್ಯ ಬಗ್ಗೆ ಹೆಚ್ಚಿನ ಗಮನ ಹರಿಸಬೇಕು. ನಿಮ್ಮ ಆರೋಗ್ಯ ಕಾಳಜಿಗಾಗಿಯೇ ನಗರಸಭೆ ಇಂದು ಆರೋಗ್ಯ ಶಿಬಿರ ಹಮ್ಮಿಕೊಂಡಿದೆ. ಇದರ ಸದುಪಯೋಗ ಪ್ರತಿಯೊಬ್ಬರು ಪಡೆದುಕೊಳ್ಳಬೇಕು ಎಂದರು.

"ನಿಮ್ಮ ಯಾವುದೇ ಸಮಸ್ಯೆಗಳಿದ್ದರೂ ನಾನು ನಿಮ್ಮೊಂದಿಗಿರುತ್ತೇನೆ. ಪ್ರತಿಯೊಬ್ಬರೂ ಪ್ರಾಮಾಣಿಕವಾಗಿ ಕೆಲಸ ಮಾಡಿ ನಗರದ ಸೌಂದರ್ಯೀಕರಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದರು.

ಆರೋಗ್ಯ ಇಲಾಖೆಯಿಂದ ಯಶಸ್ವಿಯಾಗಿ ನೆರವೇರಿದ ಈ ಉಚಿತ ಶಿಬಿರದಲ್ಲಿ ನೂರಾರು ಪೌರಕಾರ್ಮಿಕರು ಭಾಗವಹಿಸಿ ತಮ್ಮ ಆರೋಗ್ಯ ತಪಾಸಣೆ ಮಾಡಿಸಿಕೊಂಡರು.

ಈ ಸಂದರ್ಭದಲ್ಲಿ ಡಾ. ವಿನಿತಾ, ಆರೋಗ್ಯ ಸಿಬ್ಬಂದಿಗಳಾದ ಶ್ರೀಧರ್ಮ, ಶೇಖ್ ಮೊಯಿನುದ್ದೀನ್, ಪದ್ಮಾವತಿ, ಕಾಂಚನಾ, ಮಾಲಿಂಗಾ, ಬಸಪ್ಪ, ನಗರಸಭೆ ಸಿಬ್ಬಂದಿಗಳಾದ ಕಿರಿಯ ಆರೋಗ್ಯ ನಿರೀಕ್ಷಕರಾದ ಸಿದ್ಧಾರ್ಥ, ಕಿರಿಯ ಆರೋಗ್ಯ ನಿರೀಕ್ಷಕರಾದ ಶರಣಮ್ಮ ಮಂಜುನಾಥ್ ಚವ್ಹಾಣ, ನಿರೀಕ್ಷಕರಾದ ಮಂಜುನಾಥ ಚವ್ಹಾಣ ಇದ್ದರು.

## ಲಕ್ಷ್ಮೀನಗರ ಬಡಾವಣೆಯಲ್ಲಿ ಮೂಲಸೌಕರ್ಯಗಳ ಕೊರತೆ: ನಿವಾಸಿಗಳ ಆಕ್ರೋಶ





• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

:ಜು 23: ಪಟ್ಟಣದ ವಾರ್ಡ್ ನಂ. 1ರ ಲಕ್ಷ್ಮೀನಗರ ಬಡಾವಣೆಯ ಜನರು ಮೂಲಸೌಕರ್ಯಗಳ ಕೊರತೆಯಿಂದ ನರಕಯಾತನೆ ಅನುಭವಿಸುತ್ತಿದ್ದಾರೆ. ಚರಂಡಿ ನಿರ್ಮಾಣವಾಗದ ಕಾರಣ ಕೊಳಚೆ ನೀರು ರಸ್ತೆ ಮೇಲೆಯೇ ಹರಿಯುತ್ತಿದ್ದು, ದುರ್ವಾಸನೆ, ಸೊಳ್ಳೆಗಳ ಕಾಟ ಹಾಗೂ ಸಾಂಕ್ರಾಮಿಕ ರೋಗಗಳ ಭೀತಿ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ ಎಂದು ನಿವಾಸಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ರಸ್ತೆ ಮೇಲೆ ನಿಂತಿರುವ ಚರಂಡಿ ನೀರಿನಿಂದ ಪಾಚಿ ಆವರಿಸಿದ್ದು, ಮಕ್ಕಳು, ಮಹಿಳೆಯರು ಹಾಗೂ ಹಿರಿಯ ನಾಗರಿಕರು ಜಾರಿ ಬಿದ್ದು ಗಾಯಗೊಳ್ಳುವ ಘಟನೆಗಳು ಸಾಮಾನ್ಯವಾಗಿವೆ. ಬಡಾವಣೆಯ ಸಮೀಪವೇ ಕಸದ ರಾಶಿ ಹಾಕುತ್ತಿರುವುದರಿಂದ ಪರಿಸರ ಹದಗೆಟ್ಟಿದ್ದು, ಸೊಳ್ಳೆಗಳ ಕಾಟದಿಂದ ರಾತ್ರಿ ನೆಮ್ಮದಿಯ ನಿದ್ದೆಯೂ ಇಲ್ಲದಂತಾಗಿದೆ ಎಂದು ಸ್ಥಳೀಯರು ಅಳಲು ತೋಡಿಕೊಂಡಿದ್ದಾರೆ.

ಇನ್ನೊಂದೆಡೆ, ಹಲವು ಕುಟುಂಬಗಳಿಗೆ ಕೇವಲ ಒಂದೇ ಸಾರ್ವಜನಿಕ ನಳದ ಮೂಲಕ ಕುಡಿಯುವ ನೀರು ಪೂರೈಕೆ ನಡೆಯುತ್ತಿದ್ದು, ನೀರಿಗಾಗಿ ನಿವಾಸಿಗಳು ಪರದಾಡುವ ಸ್ಥಿತಿ ನಿರ್ಮಾಣವಾಗಿದೆ. ಮಳೆ ಬಂದರೆ ರಸ್ತೆ ಕೆಸರಿನ ಕೆರೆಯಾಗುತ್ತಿದ್ದು, ಶಾಲಾ ಮಕ್ಕಳು ಹಾಗೂ ಸಾರ್ವಜನಿಕರು ಜೀವಭಯದಲ್ಲೇ ಸಂಚರಿಸಬೇಕಾದ ಪರಿಸ್ಥಿತಿ ಎದುರಾಗಿದೆ.

ಪುರಸಭೆಯಿಂದ ಅನುದಾನ ಮಂಜೂರಾಗಿದ್ದರೂ ಕಾಮಗಾರಿ ವಿಳಂಬವಾಗುತ್ತಿದೆ ಎಂಬ ಆರೋಪ ಕೇಳಿಬಂದಿದೆ. ಕೂಡಲೇ ಚರಂಡಿ, ರಸ್ತೆ, ಕುಡಿಯುವ ನೀರು ಹಾಗೂ ಸ್ವಚ್ಛತಾ ವ್ಯವಸ್ಥೆ ಕಲ್ಪಿಸಿ ಲಕ್ಷ್ಮೀನಗರ ನಿವಾಸಿಗಳ ಸಂಕಷ್ಟಕ್ಕೆ ಶಾಶ್ವತ ಪರಿಹಾರ ಒದಗಿಸಬೇಕು ಎಂದು ಸ್ಥಳೀಯರು ಪುರಸಭೆ ಆಡಳಿತವನ್ನು ಆಗ್ರಹಿಸಿದ್ದಾರೆ.

## ಕರಪತ್ರ ವಿತರಿಸುವ ಮೂಲಕ ವಲಸೆ ತಡೆಗೆ ಜಾಗೃತಿ

• ಮಲ್ಲಮ್ಮ ನುಡಿ ವಾರ್ತೆ ಕೊಟ್ಟೂರು

ತಾಂಡಾ ಜನರು ಕೆಲಸ ಹರಸಿ ಬೇರೆಡೆಗೆ ವಲಸೆ ಹೋಗದಂತೆ ಮನೆ ಮನೆ ಭೇಟಿ ಕೈಗೊಳ್ಳುವ ಮೂಲಕ ಜಾಗೃತಿ ಮೂಡಿಸಲಾಗುತ್ತಿದೆ.



ಕೊಟ್ಟೂರು ತಾಲೂಕು ವ್ಯಾಪ್ತಿಯಲ್ಲಿ ದೂಪದಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ದೂಪದಹಳ್ಳಿ ತಾಂಡಾ, ಹ್ಯಾಳ್ಯಾ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮೋತಿಕಲ್ ತಾಂಡಾ ಹಾಗೂ ಕಂದಗಲ್ಲು ಗ್ರಾಮ ಪಂಚಾಯಿತಿ ವ್ಯಾಪ್ತಿಯ ತಿಮ್ಮಲಾಪುರ ತಾಂಡಾದಲ್ಲಿ ಜಿಪಂನ ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಸೂಚನೆಯಂತೆ ಕಾರ್ಯನಿರ್ವಾಹಕ ಅಧಿಕಾರಿಗಳು ಶ್ರೀ ಡಾ.ಬಿ.ಆನಂದಕುಮಾರ, ಸಹಾಯಕ ನಿರ್ದೇಶಕರು (ಗ್ರಾ.ಉ) ಹೆಚ್.ವಿಜಯಕುಮಾರ್ ಅವರ ನಿರ್ದೇಶನ ಹಾಗೂ ಸಲಹೆಯಂತೆ "ವಲಸೆ ಯಾಕೆ? ನಿಮ್ಮೂರಲ್ಲೇ ಕೆಲಸ" ಅಭಿಯಾನವನ್ನು ಕೈಗೊಳ್ಳಲಾಗಿದೆ.

ದೂಪದಹಳ್ಳಿ ತಾಂಡಾದಲ್ಲಿ ಅಭಿಯಾನದಲ್ಲಿ ಪಾಲ್ಗೊಂಡ ಬಳಿಕ ಪಿಡಿಒ ಎನ್. ಕೆಂಚಪ್ಪ ಮಾತನಾಡಿ, ವಿಬಿ ಜಿ ರಾಮ್ ಜಿ ಯೋಜನೆಯಡಿ ಕೂಲಿ ಮೊತ್ತವನ್ನು 370 ರೂ.ಗಳಿಂದ 382 ರೂ.ಗಳಿಗೆ ಹೆಚ್ಚಳ ಮಾಡಲಾಗಿದೆ. ಹಾಗೆಯೇ ಮಾನವ ದಿನಗಳನ್ನು 100 ರಿಂದ 125 ದಿನಗಳಿಗೆ ಹೆಚ್ಚಿಸಲಾಗಿದೆ. ಯೋಜನೆಯಡಿ ಗ್ರಾಮದಲ್ಲಿಯೇ ಉದ್ಯೋಗ ಪಡೆದು ಜೀವನ ರೂಪಿಸಿಕೊಳ್ಳುವ ನಿಟ್ಟಿನಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ ಎಂದು ಹೇಳಿದರು.

ದೂಪದಹಳ್ಳಿ ತಾಂಡಾದ ಸೇವಾಲಾಲ್ ದೇವಸ್ಥಾನದಿಂದ ಆರಂಭವಾದ ಮನೆ ಭೇಟಿ ಅಭಿಯಾನ ಅಂಗಡಿ, ದೇವಸ್ಥಾನ, ಸಾರ್ವಜನಿಕ ಸ್ಥಳಗಳಲ್ಲಿ ಇದ್ದಂತಹ ಸಾರ್ವಜನಿಕರಿಗೆ ವಿಬಿ ಜಿ ರಾಮ್ ಜಿ ಯೋಜನೆಯ ಮಾಹಿತಿಯುಳ್ಳ ಕರ ಪತ್ರಗಳ ಮೂಲಕ ಜಾಗೃತಿ ಮೂಡಿಸಲಾಯಿತು.

ಐಇಸಿ ಸಂಯೋಜಕ ಪ್ರಭುಕುಮಾರ ಉಪ್ಪಾರ, ತಾಂತ್ರಿಕ ಸಹಾಯಕ ರವಿಕುಮಾರ ನಾಯ್ಕ್, ಕರವಸೂಲಿಗಾರ ಬಸಯ್ಯ, ಬಿಎಫ್ ಟಿ ಲತಾ, ಗ್ರಾಪಂ ಸಿಬ್ಬಂದಿ ಇದ್ದರು.

ಮೋತಿಕಲ್ ತಾಂಡಾ ಹಾಗೂ ತಿಮ್ಮಲಾಪುರ ತಾಂಡಾ: ಕಂದಗಲ್ಲು ಗ್ರಾಪಂನ ತಿಮ್ಮಲಾಪುರ ತಾಂಡಾ ಹಾಗೂ ಹ್ಯಾಳ್ಯಾ ಗ್ರಾಪಂ ವ್ಯಾಪ್ತಿಯ ಮೋತಿಕಲ್ ತಾಂಡಾದಲ್ಲಿ ಪಿಡಿಒರವರು, ತಾಂತ್ರಿಕ ಸಹಾಯಕರು, ಬಿಎಫ್ ಟಿ, ಗ್ರಾಮ ಕಾಯಕ ಮಿತ್ರರು ಹಾಗೂ ಗ್ರಾಪಂ ಸಿಬ್ಬಂದಿಗಳು ಜಾಗೃತಿ ಮೂಡಿಸುತ್ತಿದ್ದಾರೆ.

## ಸಬಲ ರಾಷ್ಟ್ರ ನಿರ್ಮಾಣವೇ ಗೃಹಲಕ್ಷ್ಮಿ ದಿನದ ಗುರಿ: ವೆಂಕಟೇಶ



ತಾಲೂಕಿನಲ್ಲಿ ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳು ಅದರಲ್ಲೂ ಗ್ರಾಮೀಣ ಮಹಿಳೆಯರ ಆರ್ಥಿಕ ಸ್ಥಿತಿ ಸುಧಾರಿಸಿದೆ. ಈ ಹಣವನ್ನು ಮಕ್ಕಳ ಶಿಕ್ಷಣ, ಆರೋಗ್ಯ ಮತ್ತು ಸಣ್ಣ ವ್ಯಾಪಾರಕ್ಕೆ ಮಹಿಳೆಯರು ಬಳಸುತ್ತಿದ್ದಾರೆ. ಈ ಯೋಜನೆಯಿಂದ ಮಹಿಳೆಯರಲ್ಲಿ ಆತ್ಮವಿಶ್ವಾಸ ಮತ್ತು ಸ್ವಾವಲಂಬನೆ ಹೆಚ್ಚಾಗಿದೆ.: ಮೈಬೂಬ ಲಾ. ನಾಯ್ಕೋಡಿ, ಅಧ್ಯಕ್ಷರು, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ.

• ಮಲ್ಲಮ್ಮ ನುಡಿ ವಾರ್ತೆ ಬಸವನಬಾಗೇವಾಡಿ

ಆರ್ಥಿಕವಾಗಿ ಸಬಲ ಮಹಿಳೆ, ಸಬಲ ಕುಟುಂಬ, ಸಬಲ ರಾಷ್ಟ್ರ ನಿರ್ಮಾಣವೇ ಗೃಹಲಕ್ಷ್ಮಿ ದಿನದ ಗುರಿಯಾಗಿದೆ. ಎಂದು ತಾಲೂಕು ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿ ವೆಂಕಟೇಶ ವಂದಾಲ ಅಭಿಪ್ರಾಯಪಟ್ಟರು. ತಾಲೂಕ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ವತಿಯಿಂದ ಗುರುವಾರ ಬೆಳಿಗ್ಗೆ ಪಟ್ಟಣದ ತಾಲೂಕ ಪಂಚಾಯತ ಆವರಣದಲ್ಲಿ "ಗೃಹಲಕ್ಷ್ಮಿ ದಿನಾಚರಣೆ ಅಂಗವಾಗಿ ಗಿಡ ನೆಡುವ ಕಾರ್ಯಕ್ರಮದಲ್ಲಿ ಮಾತನಾಡಿ, ಗ್ಯಾರಂಟಿ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ಪ್ರಾಮಾಣಿಕವಾಗಿ ಮುಟ್ಟಿಸುವಲ್ಲಿ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಕಾರ್ಯ ನಿರ್ವಹಿಸುತ್ತಿದೆ ಎಂದರು. ತಾಲೂಕು ಶಿಶು ಅಭಿವೃದ್ಧಿ ಅಧಿಕಾರಿ ಶಿಲ್ಪಾ ಹಿರೇಮಠ ಮಾತನಾಡಿ,ಈ ಯೋಜನೆಯ ಯಶಸ್ಸನ್ನು ಆಚರಿಸಲು ಗೃಹಲಕ್ಷ್ಮಿ ದಿನಾಚರಣೆ ಆಚರಿಸಲಾಗುತ್ತದೆ. ಮಹಿಳೆಯರ ಆರ್ಥಿಕ ಸ್ವಾತಂತ್ರ್ಯ ಮತ್ತು ಗೌರವವನ್ನು ಸ್ಮರಿಸಲಾಗುತ್ತದೆ.

ಮನೆಯ ಖರ್ಚು, ಮಕ್ಕಳ ಶಿಕ್ಷಣ, ಆರೋಗ್ಯಕ್ಕೆ ಈ ಹಣ ನೆರವಾಗುತ್ತಿದೆ ಎಂದರು.

ಯುವ ಮುಖಂಡರಾದ ಸಂಗಮೇಶ ಒಲೇಕಾರ ಮಾತನಾಡಿ, ಈ ಯೋಜನೆಯಿಂದ ಲಕ್ಷಾಂತರ ಮಹಿಳೆಯರ ಜೀವನದಲ್ಲಿ ಬದಲಾವಣೆ ಆಗಿದೆ.

ಮಹಿಳೆಯರು ಸಣ್ಣ ಉದ್ಯೋಗ, ಉಳಿತಾಯ ಮಾಡಲು ಈ ಹಣ ಉಪಯೋಗಿಸುತ್ತಿದ್ದಾರೆ ಎಂದರು. ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಮೈಬೂಬ. ಲಾ.ನಾಯ್ಕೋಡಿ, ಮಾತನಾಡಿ, ಈ ಯೋಜನೆ ಮಹಿಳೆಯರ ಆತ್ಮವಿಶ್ವಾಸವನ್ನು ಹೆಚ್ಚಿಸಿದೆ. ಅರ್ಹ ಮಹಿಳೆಯರು ಯಾರೂ ವಂಚಿತರಾಗಬಾರದು ಎಂಬುದು ಸರ್ಕಾರದ ಉದ್ದೇಶ ಎಂದರು. ಗೃಹಲಕ್ಷ್ಮಿ ಯೋಜನೆ ದೇಶಕ್ಕೇ ಮಾದರಿಯಾಗಿದೆ ಎಂದು ನ್ಯಾ. ರವಿ ರಾಠೋಡ ಹೇಳಿದರು. ಬ್ಲಾಕ್ ಕಾಂಗ್ರೆಸ್ ಮಹಿಳಾ ಘಟಕ ಅಧ್ಯಕ್ಷೆ ರುಕ್ಮಿಣಿ ರಾಠೋಡ ಮಾತಾನಾಡಿದರು. ಈ ಸಂದರ್ಭದಲ್ಲಿ ತಹಶೀಲ್ದಾರ್ ವಾಯ್. ಎಸ್ ಸೋಮನಕಟ್ಟಿ, ಪುರಸಭೆ ಅಧಿಕಾರಿ ಶಬ್ಬೀರ ರೇವೂರಕರ, ವೀರೇಶ ಸರಶೆಟ್ಟಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸುರೇಶ ಹಾರಿವಾಳ, ಜಿಲ್ಲಾ ಸಮಿತಿ ಉಪಾಧ್ಯಕ್ಷ ಆನಂದ ಜಾಧವ, ನಗರ ಘಟಕ ಅಧ್ಯಕ್ಷ ಸುರೇಶಗೌಡ ಪಾಟೀಲ, ಸಂಗಯ್ಯ ಕಾಳಹಸ್ತೇಶ್ವರಮಠ ತಾಲೂಕು ಗ್ಯಾರಂಟಿ ಯೋಜನೆಗಳ ಸಮಿತಿ ಸದಸ್ಯರು, ಅಧಿಕಾರಿಗಳು, ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು ಹಾಗೂ ಜನ ಪ್ರತಿನಿಧಿಗಳು ಹಾಜರಿದ್ದರು. ನಂತರ ಪರಸ್ಪರ ಸಿಹಿ ಹಂಚಿ ಸಂಭ್ರಮಿಸಿದರು.

ನಂತರ ಸಮಿತಿ ವತಿಯಿಂದ ಸಭೆ ಜರುಗಿತು.

# ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಬಸ್ ನೀಡಲು ಕರವೇ ಆಗ್ರಹ



• **ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ**

ತಾಲುಕೀನ ಮಾವಿನ ಬಾವಿ,ಭೂಪೂರ,ಕಳ್ಳಿ ಲಿಂಗಸುಗೂರು,ಹುನಕುಂಟಿ ವಿದ್ಯಾರ್ಥಿಗಳ ಶಾಲಾ ಸಮಯಕ್ಕೆ ಸರಿಯಾಗಿ ಬಸ್ ಗಳನ್ನು ಒದಗಿಸುವಂತೆ ಸಾರಿಗೆ ಘಟಕದ ವ್ಯವಸ್ಥಾಪಕ ಲಕ್ಷ್ಮಣ ರವರಿಗೆ ಹೆಚ್.ಶಿವರಾಮೇಗೌಡ ಕರ್ನಾಟಕ ರಕ್ಷಣಾ ವೇದಿಕೆ ಅಧ್ಯಕ್ಷ ಮಾದೇಶ ಸರ್ಜಾಪುರ ಹಾಗೂ ಕಾರ್ಯಕರ್ತರು ಒತ್ತಾಯಿಸಿದರು.ಈ ಸಂದರ್ಭದಲ್ಲಿ ಕರವೇ ಕಾರ್ಯಕರ್ತರಾದ ಶರಣಪ್ಪ ಭೂಪುರ,ದೇವಣ್ಣ ಹುನಕುಂಟಿ, ಶಿವಣ್ಣ, ಅಮರೇಶ ಹುನಕುಂಟಿ,ಪರಸನಗೌಡ ಕಳ್ಳಿ ಲಿಂಗಸುಗೂರು ಸೇರಿದಂತೆ ಶಾಲಾ ಕಾಲೇಜು ವಿದ್ಯಾರ್ಥಿಗಳು ಹಾಜರಿದ್ದರು.

# ಕಡ್ಡಾಯ ಹೆಲ್ಮೆಟ್ ಧರಿಸುವಂತೆ ಡಿವೈಎಸ್‌ಪಿ ಚಂದ್ರಶೇಖರ ಜಾಗೃತಿ ಅಭಿಯಾನ



• **ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು**

ಜು.23.ಬೈಕ್ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ ಪ್ರಯಾಣಿಸಬೇಕು ಎಂದು ಸಿಂಧನೂರು ಉಪ ವಿಭಾಗದ ಡಿವೈಎಸ್‌ಪಿ ಜಿ.ಚಂದ್ರಶೇಖರ ಅವರು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು. ಹೆಲ್ಮೆಟ್‌ಗಳು ಅಪಘಾತದ ಸಂದರ್ಭದಲ್ಲಿ ಜೀವರಕ್ಷಕಗಳಾಗಿ ಕಾರ್ಯನಿರ್ವಹಿಸುತ್ತವೆ ಎಂದು ಅವರು ತಿಳಿಸಿದರು. ಮಂಗಳವಾರದಂದು ನಗರ ಠಾಣೆಯಲ್ಲಿ ಮಾಧ್ಯಮ ಮಿತ್ರರಿಗೆ ಹಾಗೂ ಸಾರ್ವಜನಿಕರಿಗೆ ಹೆಲ್ಮೆಟ್‌ಗಳನ್ನು ವಿತರಿಸಲಾಯಿತು. ನಂತರ ಡಿವೈಎಸ್‌ಪಿ ನೇತೃತ್ವದಲ್ಲಿ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಬೈಕ್ ಮೂಲಕ ನಗರದ ಗಾಂಧಿ ವೃತ್ತ, ಬಸವ ಸರ್ಕಲ್ ಹಾಗೂ ಹಳೆ ಬಜಾರ್ ಪ್ರದೇಶಗಳಲ್ಲಿ ಸಂಚರಿಸಿ, ಹೆಲ್ಮೆಟ್ ಧರಿಸುವುದರ ಅನಿವಾರ್ಯತೆಯ ಕುರಿತು ಸಾರ್ವಜನಿಕರಿಗೆ ಕರಪತ್ರಗಳನ್ನು ಹಂಚಿ ಜಾಗೃತಿ ಮೂಡಿಸಿದರು.

ನಗರದಲ್ಲಿ ರಸ್ತೆ ಸುರಕ್ಷತೆ ಮತ್ತು ಪ್ರಾಣ ರಕ್ಷಣೆ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ನಿಟ್ಟಿನಲ್ಲಿ ಪೊಲೀಸ್ ಠಾಣೆಯ ಸಿಬ್ಬಂದಿಗಳು ವಿನೂತನ ಜಾಗೃತಿ ಅಭಿಯಾನ ನಡೆಸಿದರು. ತಾವು ಸ್ವತಃ ಹೆಲ್ಮೆಟ್ ಧರಿಸಿ ಬೈಕ್‌ಗಳಲ್ಲಿ ಸಂಚರಿಸುವ ಮೂಲಕ ಸವಾರರಿಗೆ ಮಾದರಿಯಾಗಿ ಕಂಡು ಬಂತು.

ಈ ಜಾಗೃತಿ ಅಭಿಯಾನದಲ್ಲಿ ನಗರ ಠಾಣೆಯ ವೃತ್ತ ನಿರೀಕ್ಷಕ (ಪಿಐ) ವೀರಾರೆಡ್ಡಿ, ಉಪನಿರೀಕ್ಷಕ (ಪಿಎಸ್‌ಐ) ಎರಿಯಪ್ಪ, ಪ್ರಭಾರಿ ಅಂಬಾದಾಸ್ ಹಾಗೂ ಇತರ ಪೊಲೀಸ್ ಸಿಬ್ಬಂದಿಗಳು ಸಕ್ರಿಯವಾಗಿ ಭಾಗವಹಿಸಿದ್ದರು.

# ನರೇಗಾ ಜಾರಿಗೆ ಒತ್ತಾಯಿಸಿ ಪ್ರತಿಭಟನೆ



• **ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು**

ಜು.23.ಬರಗಾಲದ ಈ ಸಂಕಷ್ಟದ ಪರಿಸ್ಥಿತಿಯಲ್ಲೂ ನರೇಗಾ (ಉದ್ಯೋಗ ಖಾತ್ರಿ) ಯೋಜನೆಯಡಿ ಕೆಲಸ ನೀಡದೆ ಸಾರ್ವಜನಿಕರನ್ನು ಗುಳೆ ಹೋಗುವಂತೆ ಪ್ರೇರೇಪಿಸುತ್ತಿರುವ ಅಧಿಕಾರಿಗಳ ನಿರ್ಲಕ್ಷ್ಯ ಧೋರಣೆಯನ್ನು ಖಂಡಿಸಿ, ಸಾಲಗುಂದ ಕೃಷಿಕೂಲಿಕಾರ ಸಂಘಟನೆ ಹಾಗೂ ಕರ್ನಾಟಕ ಪ್ರಾಂತ ರೈತ ಸಂಘದ (ಕೆಪಿಆರ್‌ಎಸ್) ನೇತೃತ್ವದಲ್ಲಿ ಸಾಲಗುಂದ ಗ್ರಾಮ ಪಂಚಾಯಿತ ಕಾರ್ಯಾಲಯದ ಮುಂದೆ ಸಾರ್ವಜನಿಕರು ತೀವ್ರ ಪ್ರತಿಭಟನೆ ನಡೆಸಿದರು.

ಈ ಕುರಿತು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮೂಲಕ ಜಿಲ್ಲಾ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದ್ದು, ಅಧಿಕಾರಿಗಳು ಜನರ ಸಮಸ್ಯೆಗಳಿಗೆ ಸ್ಪಂದಿಸದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಹಮ್ಮಿಕೊಳ್ಳುವುದಾಗಿ ಜಿಲ್ಲಾಧ್ಯಕ್ಷರಾದ ಬಸವಂತರಾಯ ಗೌಡ ಕಲ್ಲೂರು ತಿಳಿಸಿದರು.

ಜುಲೈ 1ರಿಂದಲೇ ವಿಬಿಜಿರಾಮಜಿ (ಯೋಜನೆ) ಜಾರಿಯಾಗುತ್ತದೆ ಎಂದು ಪುಟಗಟ್ಟಲೆ ಪ್ರಚಾರ ಮಾಡಲಾಗಿದೆ. ಆದರೆ 22 ದಿನಗಳು ಕಳೆದರೂ ಬರಗಾಲದ ಪರಿಸ್ಥಿತಿಯಲ್ಲಿ ಯಾವುದೇ ಉದ್ಯೋಗ ನೀಡದೆ ಇರುವುದರಿಂದ ತಾಲ್ಲೂಕಿನಲ್ಲಿ ಈಗಾಗಲೇ ಸಾವಿರಾರು ಜನರು ಗುಳೆ ಹೋಗಿದ್ದಾರೆ. ಇನ್ನೂ ಅನೇಕರು ಗುಳೆ ಹೋಗಲು ಸಿದ್ಧರಾಗಿದ್ದು,ಗ್ರಾಮ ಮಟ್ಟದ ಜನರ ಕಷ್ಟ–ಕಾರ್ಪಣ್ಯಗಳನ್ನು ಅರಿಯಲು ಪಂಚಾಯತ್ ರಾಜ್ ಅಧಿಕಾರಿಗಳು ಸಂಪೂರ್ಣ ವಿಫಲರಾಗಿದ್ದಾರೆ ಎಂದು ಸಂಘಟನೆಯ ಮುಖಂಡರು ಆಕ್ರೋಶ ವ್ಯಕ್ತಪಡಿಸಿದರು.

ಸಾಲಗುಂದ ಗ್ರಾಮದಲ್ಲಿ ತಕ್ಷಣವೇ ನರೇಗಾ ಕಾಮಗಾರಿಗಳನ್ನು ಜಾರಿಗೊಳಿಸಿ ಕೆಲಸ ನೀಡಬೇಕು. ಕೆಲಸ ನಿರ್ವಹಿಸುವ ಮೇಟಿಗಳಿಗೆ (ಕಾಯಕ ಬಂಧುಗಳಿಗೆ) ಕೂಡಲೇ ಭತ್ಯೆ ಪಾವತಿಸಬೇಕು. ಕೆಲಸ ನಡೆಯುವ ಸ್ಥಳದಲ್ಲೇ ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಬಿಸಿಲಿನ ತಾಪದಿಂದ ರಕ್ಷಣೆಗಾಗಿ ತಾತ್ಕಾಲಿಕ ಟೆಂಟ್‌ಗಳನ್ನು ಹಾಕಿಸಬೇಕು.ಬಾಣಂತಿಯರ ಕೆಲಸದ ಸಂದರ್ಭದಲ್ಲಿ ಮಕ್ಕಳ ಆರೈಕೆಗಾಗಿ ಶಿಶುಪಾಲನಾ ವ್ಯವಸ್ಥೆ ಕಲ್ಪಿಸಬೇಕು. ಸರ್ಕಾರಿ ಆಸ್ಪತ್ರೆಯಲ್ಲಿ ಹಗಲು–ರಾತ್ರಿ ವೈದ್ಯರು ಕಡ್ಡಾಯವಾಗಿ ಉಪಸ್ಥಿತರಿರುವಂತೆ ನೋಡಿಕೊಳ್ಳಬೇಕು. ಆಸ್ಪತ್ರೆಯಲ್ಲಿ ಸಾರ್ವಜನಿಕರಿಗೆ ಅಗತ್ಯವಿರುವ ಎಲ್ಲಾ ರೀತಿಯ ಔಷಧಗಳು ಲಭ್ಯವಿರುವಂತೆ (ಸ್ಟಾಕ್) ಇಡಬೇಕು. ಗ್ರಾಮದ ಐದು ಸರ್ಕಾರಿ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಸಂಪೂರ್ಣವಾಗಿ ಶಿಕ್ಷಕರನ್ನು ನೇಮಿಸಬೇಕು. ಗ್ರಾಮದಾದ್ಯಂತ ಸರಿಯಾದ ಚರಂಡಿ ವ್ಯವಸ್ಥೆಯನ್ನು ನಿರ್ಮಿಸಬೇಕು.ಗ್ರಾಮದ ಎಲ್ಲಾ ಓಣಿಗಳಲ್ಲಿ ಕುಡಿಯುವ ನೀರು ಮತ್ತು ನಳದ ವ್ಯವಸ್ಥೆಯನ್ನು ತಕ್ಷಣ ಒದಗಿಸಬೇಕು.

ಜೊತೆಗೆ ಇಡೀ ಸಿಂಧನೂರು ತಾಲ್ಲೂಕನ್ನು ಅಧಿಕೃತವಾಗಿ ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸಬೇಕು ಪ್ರಮುಖ ಬೇಡಿಕೆಗಳವುಳ್ಳ ಮನವಿ ಸಲ್ಲಿಸಲಾಗಿದೆ ಎಂದು ತಿಳಿಸಿದರು.

ಈ ವೇಳೆ ಅಧ್ಯಕ್ಷರಾದ ಹೆಚ್. ವಿರಾಪಕ್ಷಿ ಗೌಡ, ಕಾರ್ಯದರ್ಶಿ ಶ್ರೀನಿವಾಸ ರೆಡ್ಡಿ, ಯಂಕಪ್ಪ ಕೆಂಗಲ್, ಗೇಸುಧ ರಾಜ, ಗರೀಬ ಕೊಡ್ಲಿ, ಅಜಿಮಿರ ಚೌದ್ರಿ, ಹಳ್ಳಪ್ಪ, ಸಂಜಿವಪ್ಪ ಮತ್ತು ನರಸಣ್ಣ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕಳಪೆ ಕಾಮಗಾರಿಯಿಂದ ಕಂಗಾಲಾದ ಕೆ.ಕೆ.ಆರ್.ಟಿ.ಸಿ. ಬಸ್ ನಿಲ್ದಾಣ

• **ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು**



ಜು.23.ನಗರದ ಕೆ.ಕೆ.ಆರ್.ಟಿ.ಸಿ. ಬಸ್ ನಿಲ್ದಾಣದಲ್ಲಿ ಕಳಪೆ ಕಾಮಗಾರಿಯಿಂದಾಗಿ ಪ್ರತಿದಿನ ಓಡಾಡುವ ಸಾವಿರಾರು ಪ್ರಯಾಣಿಕರು, ವಿದ್ಯಾರ್ಥಿಗಳು ಮತ್ತು ವೃದ್ಧರು ತೀವ್ರ ಪರದಾಡುವಂತಾಗಿದೆ. ಈ ಕುರಿತು 'ಷಾ ಮಖಂದರ್ ಜನಪರ ಸೇವಾ ಸಮಿತಿ' ವತಿಯಿಂದ ಡಿಪೋ ವ್ಯವಸ್ಥಾಪಕರಿಗೆ ದೂರು ನೀಡಲಾಗಿದೆ ಎಂದು ಉಸ್ಮಾನ್ ಪಾಷಾ ಹೇಳಿದರು.ಪ್ರಮುಖ ಸಮಸ್ಯೆಗಳು ಕುರಿತು ಪತ್ರಿಕೆಯೊಂದಿಗೆ ಮಾತನಾಡಿದವರು, ಮಳೆಗಾಲದಲ್ಲಿ ನಿಲ್ದಾಣದ ಮೇಲ್ಛಾವಣಿ ಹಾಗೂ ಕಾಯುವ ಸಭಾಂಗಣದಲ್ಲಿ ನೀರು ಸೋರುತ್ತಿದ್ದು, ಕುಳಿತುಕೊಳ್ಳಲು ಸ್ಥಳವಿಲ್ಲದೆ ಪ್ರಯಾಣಿಕರು ಪರದಾಡುತ್ತಿದ್ದಾರೆ.ನಿಲ್ದಾಣದ ಆವರಣದ ನೆಲ ಅಸಮವಾಗಿದ್ದು, ಅಂಚುಗಳು ಮುರಿದಿರುವುದು ಹಿರಿಯ ನಾಗರಿಕರು ಮತ್ತು ವಿದ್ಯಾರ್ಥಿಗಳಿಗೆ ಅಪಾಯ ತಂದಿದೆ. ಆಸನ ಹಾಗೂ ಬೆಳಕಿನ ವ್ಯವಸ್ಥೆ ಸರಿಯಿಲ್ಲ. ಚರಂಡಿ ವ್ಯವಸ್ಥೆ ಹದಗೆಟ್ಟು ನೀರು ನಿಲ್ಲುವುದರಿಂದ ದುರ್ವಾಸನೆ ಬೀರುತ್ತಿದೆ. ಕಂಬಗಳು ಮತ್ತು ಬೆಂಚುಗಳು ಶಿಥಿಲಗೊಂಡಿವೆ. ನಿಲ್ದಾಣದ ನಂದಿನಿ ಹಾಲಿನ ಮಳಿಗೆಯ ಕಾಮಗಾರಿಯೂ ಕಳಪೆಯಾಗಿದ್ದು, ನೀರಿನ ಟ್ಯಾಂಕ್ ಸ್ವಚ್ಛತೆ ಕಾಪಾಡಿಲ್ಲ ಎಂದು ಆರೋಪಿಸಿದರು.

ಅಧಿಕಾರಿಗಳು ಕೂಡಲೇ ಸ್ಥಳ ಪರಿಶೀಲಿಸಿ ದೋಷಗಳನ್ನು ಸರಿಪಡಿಸಬೇಕು ಹಾಗೂ ಕಳಪೆ ಕಾಮಗಾರಿ ನಡೆಸಿದ ಗುತ್ತಿಗೆದಾರರ ವಿರುದ್ಧ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಹೇಳಿದರು.

# 11–ಎ ವಿತರಣಾ ಕಾಲುವೆವರೆಗೆ ನೀರು ಹರಿಸಲು ಜಿಲ್ಲಾಧಿಕಾರಿಗಳಿಗೆ ಮನವಿ

• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**




ವಿಜಯನಗರ ಎಡದಂಡೆ ಮುಖ್ಯ ಕಾಲುವೆ 11–ಎ ವಿತರಣಾ ಕಾಲುವೆವರೆಗೆ ತಕ್ಷಣ 1.5 ಟಿಎಂಸಿ ನೀರು ಹರಿಸಬೇಕು ಎಂದು ಒತ್ತಾಯಿಸಿ ರೈತರು ಮತ್ತು ಜನಪ್ರತಿನಿಧಿಗಳ ನಿಯೋಗ ಮಂಗಳವಾರ ಕೊಪ್ಪಳ ಜಿಲ್ಲಾಧಿಕಾರಿಗಳನ್ನು ಭೇಟಿ ಮಾಡಿ ಮನವಿ ಸಲ್ಲಿಸಿತು. ಮುನಿರಾಬಾದ್‌ನ ತುಂಗಭದ್ರಾ ಜಲಾಶಯದ ಕಚೇರಿ ಎದುರು ಸೋಮವಾರ ನಡೆದ ಪ್ರತಿಭಟನೆಯಲ್ಲಿ ಕೈಗೊಂಡ ತೀರ್ಮಾನದಂತೆ, ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ್, ಡಾ. ಬಸವರಾಜ್ ಕ್ಯಾವಟರ್, ಮಾಜಿ ಶಾಸಕ ಪರಣ್ಣ ಮುನವಳ್ಳಿ ಸೇರಿದಂತೆ ರೈತ ಮುಖಂಡರು ಜಿಲ್ಲಾಧಿಕಾರಿಗಳನ್ನು ಭೇಟಿಯಾದರು.

ಕೊರಗಲ್ ಅಣೆಕಟ್ಟಿನ ಕಾಲುವೆಗಳ ಹಕ್ಕಿನಡಿ ವಿಜಯನಗರ ಎಡದಂಡೆ ಮುಖ್ಯ ಕಾಲುವೆ ವ್ಯಾಪ್ತಿಯ ಸಾವಿರಾರು ಎಕರೆ ಕೃಷಿಭೂಮಿಗೆ ಶತಮಾನಗಳಿಂದ ನೀರು ಪೂರೈಕೆಯಾಗುತ್ತಿದೆ. ಈ ಭಾಗದ ರೈತರು, ಜನರು ಮತ್ತು ಜಾನುವಾರುಗಳು ಇದೇ ನೀರನ್ನು ಅವಲಂಬಿಸಿ ಬದುಕುತ್ತಿವೆ ಎಂದು ನಿಯೋಗ ಜಿಲ್ಲಾಧಿಕಾರಿಗಳಿಗೆ ವಿವರಿಸಿತು. ಕೃಷ್ಣಾ ಜಲವಿವಾದ ನ್ಯಾಯಮಂಡಳಿಯು ವಿಜಯನಗರ ಕಾಲುವೆಗಳ ವಾರ್ಷಿಕ 5.71 ಟಿಎಂಸಿ ಐತಿಹಾಸಿಕ ನೀರಿನ ಬಳಕೆಯನ್ನು ಅಧಿಕೃತವಾಗಿ ಗುರುತಿಸಿದೆ. ಹೊಸ ಯೋಜನೆಗಳಿಗಿಂತ ಈ ಐತಿಹಾಸಿಕ ಬಳಕೆಗೆ ಆದ್ಯತೆ ನೀಡಬೇಕೆಂದೂ ನ್ಯಾಯಮಂಡಳಿ ತಿಳಿಸಿದೆ ಎಂದು ನಿಯೋಗ ಮನವಿಯಲ್ಲಿ ಉಲ್ಲೇಖಿಸಿತು. ಹೀಗಾಗಿ ವಿಜಯನಗರ ಎಡದಂಡೆಯ 11–ಎ ಉಪ ಕಾಲುವೆವರೆಗೆ 1.5 TMC ನೀರು ಬಿಡುಗಡೆ ಮಾಡುವುದು ಈ ಭಾಗದ ರೈತರ ಐತಿಹಾಸಿಕ ಮತ್ತು ಕಾನೂನುಬದ್ಧ ಹಕ್ಕು ಎಂದು ನಿಯೋಗ ಪ್ರತಿಪಾದಿಸಿತು. ರೈತರ ಹಕ್ಕಿಗೆ ಧಕ್ಕೆಯಾಗದಂತೆ ತಕ್ಷಣ 11–ಎ ವಿತರಣಾ ಕಾಲುವೆಯ ಕೊನೆಯ ಭಾಗದವರೆಗೂ ನೀರು ತಲುಪಿಸಲು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ನಿಯೋಗದ ಪ್ರಮುಖ ಬೇಡಿಕೆಗಳು:

* ವಿಜಯನಗರ ಎಡದಂಡೆಯ 11–ಎ ಕಾಲುವೆಗೆ ತಕ್ಷಣ ನೀರು ಬಿಡುಗಡೆ ಮಾಡಬೇಕು.

* 11–ಎ ವಿತರಣಾ ಕಾಲುವೆವರೆಗೆ ಕೊನೆಯ ಭಾಗದವರೆಗೂ ನೀರು ತಲುಪಿಸಬೇಕು.

* ಕೊರಗಲ್ ಅಣೆಕಟ್ಟು ಕಾಲುವೆಗಳ ಐತಿಹಾಸಿಕ ನೀರಿನ ಹಕ್ಕನ್ನು ರಕ್ಷಿಸಬೇಕು.

* ಕೃಷ್ಣಾ ನ್ಯಾಯಮಂಡಳಿ ಗುರುತಿಸಿರುವ 5.71 TMC ನೀರಿನ ಬಳಕೆಗೆ ಆದ್ಯತೆ ನೀಡಬೇಕು.

*ಮೊದಲ ಹಂತದಲ್ಲಿ 11–ಎ ಕಾಲುವೆವರೆಗೆ 1.5TMC ನೀರು ಹರಿಸಬೇಕು.

ನಿಯೋಗದಲ್ಲಿ ನವೀನ ಗುಳಗಣ್ಣವರ್, ಪ್ರಭುರಾಜ ಪಾಟೀಲ್, ಪ್ರದೀಪ್ ಹಿಟ್ನಾಳ, ಸುನಿಲ್ ಹೆಸರೂರು, ಅಶೋಕ ಗುಲದಳ್ಳಿ, ಬಸವರಾಜ್ ಉಳ್ಳಾಗಡ್ಡಿ , ಖಾಜಾ ಹುಸೇನ್ ಹೊಸಳ್ಳಿ ಹಾಗೂ ವಿವಿಧ ಗ್ರಾಮಗಳ ರೈತ ಮುಖಂಡರು ಉಪಸ್ಥಿತರಿದ್ದರು.

# ಸರ್ಕಾರಿ ಶಾಲೆಗಳ ಸಬಲೀಕರಣ ಪರಿಸರ ಜಾಗೃತಿ ಮೂಡಲಿ: ಸೋಮಶೇಖರ



• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**

ಸರ್ಕಾರಿ ಶಾಲೆಗಳ ಸಬಲೀಕರಣ ಹಾಗೂ ಪರಿಸರ ಸಂರಕ್ಷಣೆ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಸಾಮಾಜಿಕ ಕಾರ್ಯಕರ್ತ ರೂಪೇಶ್ ಪುತ್ತೂರು ಅವರು ಬೀದರ್‌ನಿಂದ ಬೆಂಗಳೂರಿನವರೆಗೆ ಕೈಗೊಂಡಿರುವ ಪಾದಯಾತ್ರೆ ಕೊಪ್ಪಳ ನಗರಕ್ಕೆ ಆಗಮಿಸಿದ ಸಂದರ್ಭದಲ್ಲಿ ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ಕೊಪ್ಪಳ ಜಿಲ್ಲಾ ಘಟಕ ಮತ್ತು ಹೈಬ್ರೀಡ್ ನ್ಯೂಸ್ ವತಿಯಿಂದ ಆತ್ಮೀಯವಾಗಿ ಬರಮಾಡಿಕೊಂಡು ಸನ್ಮಾನಿಸಿ ಗೌರವಿಸಲಾಯಿತು.ನಗರದ ಗವಿಸಿದ್ದೇಶ್ವರ ಮಠದ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ಕೊಪ್ಪಳ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ ಹರ್ತಿ ಅವರು, ಸರ್ಕಾರಿ ಕನ್ನಡ ಶಾಲೆಗಳಲ್ಲಿ ಮೂಲಭೂತ ಸೌಕರ್ಯ ಹಾಗೂ ಶಿಕ್ಷಕರ ಕೊರತೆಯಿಂದ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆಯಾಗುತ್ತಿದ್ದು, ಹಲವು ಶಾಲೆಗಳು ಮುಚ್ಚುವ ಹಂತಕ್ಕೆ ತಲುಪಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಸರ್ಕಾರಿ ಶಾಲೆಗಳನ್ನು ಬಲಪಡಿಸುವ ಮೂಲಕ ಕನ್ನಡ ಭಾಷೆ ಮತ್ತು ಶಿಕ್ಷಣದ ಉಳಿವಿಗೆ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಪರಿಸರ ಮಾಲಿನ್ಯದಿಂದ ವಿವಿಧ ರೋಗರುಜಿನಗಳು ಹೆಚ್ಚಾಗುತ್ತಿದ್ದು, ಪರಿಸರ ಸಂರಕ್ಷಣೆಯ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಅಗತ್ಯವಿದೆ. ಈ ನಿಟ್ಟಿನಲ್ಲಿ ರೂಪೇಶ್ ಪುತ್ತೂರು ಅವರು ಕೈಗೊಂಡಿರುವ ಪಾದಯಾತ್ರೆ ಯಶಸ್ವಿಯಾಗಲಿ. ಸರ್ಕಾರ ಕೂಡಲೇ ಎಚ್ಚೆತ್ತುಕೊಂಡು ಕನ್ನಡ ನಾಡು, ನುಡಿ, ನೆಲ, ಜಲ ಹಾಗೂ ಪರಿಸರ ಸಂರಕ್ಷಣೆಗೆ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.ಸಾಮಾಜಿಕ ಕಾರ್ಯಕರ್ತ ಹಾಗೂ ಪಾದಯಾತ್ರೆಯ ರೂವಾರಿ ರೂಪೇಶ್ ಪುತ್ತೂರು ಮಾತನಾಡಿ, ಕರ್ನಾಟಕದಲ್ಲಿ ಕನ್ನಡಿಗರಿಗೆ ಉದ್ಯೋಗ ಹಾಗೂ ಅವಕಾಶಗಳಲ್ಲಿ ಆದ್ಯತೆ ದೊರೆಯಬೇಕು. ಅನ್ಯಭಾಷಿಕರಿಗೆ ಹೆಚ್ಚಿನ ಆದ್ಯತೆ ನೀಡುತ್ತಿರುವುದು ನೋವಿನ ಸಂಗತಿಯಾಗಿದೆ. ಪರಿಸರ ನಾಶದಿಂದ ಮಾನವಕುಲದ ಭವಿಷ್ಯಕ್ಕೆ ಅಪಾಯ ಎದುರಾಗುತ್ತಿದೆ. ಈ ಕುರಿತು ಸರ್ಕಾರದ ಗಮನ ಸೆಳೆಯಲು ಹಾಗೂ ಜನರಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ಬೀದರ್‌ನಿಂದ ಬೆಂಗಳೂರಿನವರೆಗೆ ಪಾದಯಾತ್ರೆ ಕೈಗೊಂಡಿದ್ದೇನೆ. ಕನ್ನಡ ಅಸ್ಮಿತೆ ಹಾಗೂ ಪರಿಸರ ಸಂರಕ್ಷಣೆಗಾಗಿ ನಾವೆಲ್ಲರೂ ಒಂದಾಗಿ ಹೋರಾಡಬೇಕಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ರೂಪೇಶ್ ಪುತ್ತೂರು ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಕನ್ನಡ ಜಯಘೋಷಗಳೊಂದಿಗೆ ಅವರಿಗೆ ಶುಭಹಾರೈಸಲಾಯಿತು. ಕಾರ್ಯಕ್ರಮದಲ್ಲಿ ಬಿ.ಎನ್. ಹೊರಪೇಟಿ, ರಘುನಾಥ್ ಸಂಗಳದ, ಯಲ್ಲಾಲಿಂಗ ಕತ್ತಿ, ಅಮರೇಶ್ ಕಮ್ಮಾರ, ವಿಜಯಕುಮಾರ್ ಬೊಂದಾಡೆ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಮುಖ್ಯ ಗುರುಗಳಿಗೆ ಬೀಳ್ಕೊಡುಗೆ



• **ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ**

ಹುಲಸೂರು ತಾಲೂಕಿನ ಆನಂದ ವಾಡಿ (ಎಚ್) ಗ್ರಾಮದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 2013 ರಿಂದ ಸೇವೆ ಸಲ್ಲಿಸುತ್ತಿದ್ದ ಹಾಗೂ ಕಳೆದ 13 ವರ್ಷಗಳಿಂದ ಪ್ರಭಾರಿ ಮುಖ್ಯ ಶಿಕ್ಷಕರಾಗಿ ಕಾರ್ಯನಿರ್ವಾಹಿಸಿದ ರಾಜೇಂದ್ರ ಗುಗೆ ಅವರು ಮುಖ್ಯ ಶಿಕ್ಷಕರಾಗಿ ಬಡಿತ ಹೊಂದಿ ಬೇರೆ ಶಾಲೆಗೆ ವರ್ಗಾವಣೆಯಾಗಿರುವ ಹಿನ್ನೆಲೆಯಲ್ಲಿ ಗ್ರಾಮಸ್ಥರು ಬೀಳ್ಕೊಟರು. ಗ್ರಾಮದೇವರಾದ ಪಂಚಪಾಂಡವರ ಅಭಿಷೇಕ ನೇರೆವೇರಿಸಿ ಗ್ರಾಮಸ್ಥರಿಗೆ ಸಾಮೂಹಿಕ ಊಟದ ವ್ಯವಸ್ಥೆ ಮಾಡಲಾಗಿತ್ತು. ಬಳಿಕ ರಾಜೇಂದ್ರ ಗುಗೆ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಶಿಕ್ಷಣ ಪ್ರೇಮಿ ಷಣುಮುಖ ಪಾಟೀಲ. ರಾಜೇಂದ್ರ ಗುಗೆ ಅವರು ಶಾಲೆಯ ಶೈಕ್ಷಣಿಕ ಹಾಗೂ ಭೌತಿಕ ಅಭಿವೃದ್ಧಿಗೆ ಶ್ರಮವಹಿಸಿದ್ದು ಮಕ್ಕಳಲ್ಲಿ ಸಮಯಪ್ರಜ್ಞೆ, ನೈತಿಕ ಮೌಲ್ಯಗಳು ಮತ್ತು ಉತ್ತಮ ಶಿಕ್ಷಣ ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸಿದ್ದಾರೆ. ಅವರ ಸೇವೆಯನ್ನು ಗ್ರಾಮ ಎಂದಿಗೂ ಮರೆಯುವುದಿಲ್ಲ ಎಂದು ಹೇಳಿದರು. ಈ ಸಂದರ್ಭದಲ್ಲಿ ಪ್ರಕಾಶ ಪಾಟೀಲ, ಅನೀಲ, ಸಂಗಮೇಶ, ರಾಜಕುಮಾರ ಕಡಾದೆ, ಶಿವಪುತ್ರ ಹಲಿಂಗೆ, ದೇವಿಂದ್ರ, ಸಿದ್ರಾಮ ಹಲಿಂಗೆ, ಮಡೋಳಪ್ಪ ಆಗ್ರೆ, ಅಶೋಕ, ಶಿವಾನಂದ, ಸುನೀಲ ಸ್ವಾಮಿ, ಗುಂಡಪ್ಪ, ಉಮಾಕಾಂತ, ತಿರಮೂಖಪ್ಪಾ ಪಾಟೀಲ,ರಾಜಕುಮಾರ ಪಾಟೀಲ, ನರೇಂದ್ರ ಮಲ್ಲಿಕಾರ್ಜುನ, ದಯಾನಂದ, ಬಾಬುರಾವ ಮಾಜಿ ಗ್ರಾಮ ಪಂಚಾಯಿತಿ ಸದಸ್ಯರಾದ ಅರ್ಚನಾ ಪಾಟೀಲ, ವನೀತಾ ನರಹರಿ ಹಾಗೂ ಶಾಲಾ ಮುಖ್ಯಗುರುಗಳಾದ ನಾಗರಾಜ ಹಾವಣ್ಣಾ, ಸಹ ಶಿಕ್ಷಕರಾದ ಆಕಾಶ ಮಠಪತಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಬಸವಾದಿ ಶರಣರ ವಿಚಾರಧಾರೆ ಇಂದಿನ ಆಧುನಿಕ ಯುಗಕ್ಕೆ ದಾರಿದೀಪ




• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ಕುಂಬಾರ ಗುಂಡಯ್ಯ ಮತ್ತು ಕುರುಬ ಗೊಲ್ಲಾಳ ಉಭಯಶರಣರು ಕಾಯಕದ ಮೂಲಕ ಕೈಲಾಸವೇ ಧರೆಗೆ ತಂದ ಮಹಾನ್ ಶರಣರು. ಉಭಯ ಶರಣರ ಚಿಂತನೆಗಳು ಇಂದಿನ ಆಧುನಿಕ ಸಮಾಜಕ್ಕೆ ದಾರಿದೀಪವಾಗಿವೆ ಎಂದು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಹೇಳಿದರು.ನಗರದ ಚನ್ನಬಸವಾಶ್ರಮ ಪರಿಸರದ ಕುಂಬಾರ ಗುಂಡಯ್ಯ ಕಲ್ಯಾಣ ಮಂಟಪದಲ್ಲಿ ಹಿರೇಮಠ ಸಂಸ್ಥಾನದ ವತಿಯಿಂದ ಬುಧವಾರ ಆಯೋಜಿಸಿದ್ದ ಕುಂಬಾರ ಗುಂಡಯ್ಯ, ಕುರುಬ ಗೊಲ್ಲಾಳ ಶರಣರ ಜಯಂತಿ ಮತ್ತು 324ನೆಯ ಶರಣ ಸಂಗಮ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.ಶರಣರು ಅಂತರಂಗ ಮತ್ತು ಬಹಿರಂಗ ಶುದ್ಧಿಯ ಮಾರ್ಗ ತೋರಿಸಿದರು. ಹಣ, ಅಧಿಕಾರ, ಸಂಪತ್ತು ಇವುಗಳಿಂದ ನಿಜವಾದ ಸಮಾಧಾನ ದೊರೆಯಲು ಸಾಧ್ಯವಿಲ್ಲ. ಆದರೆ ಶರಣರ ಸಂಗದಿಂದ ವಚನಗಳ ಅಧ್ಯಯನದಿಂದ ಸಮಾಧಾನ ದೊರೆಯಲು ಸಾಧ್ಯ ಇದೆ ಎಂದು ತಿಳಿಸಿದರು.ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಶಂಭುಲಿಂಗ ಕಾಮಣ್ಣ ಅನುಭಾವ ನೀಡಿ, ಕುಂಬಾರ ಗುಂಡಯ್ಯ ಹಾಗೂ ಕುರುಬ ಗೊಲ್ಲಾಳೇಶ್ವರ 12ನೆಯ ಶತಮಾನದ ಮಹಾನ್ ಶರಣರು. ಅವರ ಜೀವನ ಸಂದೇಶ ಬೆಳಕಿನ ಕಿರಣಗಳು. ಶರೀರದ ಗಾಯಕ್ಕೆ ಔಷಧ ಇದ್ದಂತೆ. ಮನಸ್ಸಿನ ಗಾಯಕ್ಕೆ ಶರಣರ ವಚನಗಳೇ ದಿವ್ಯ ಔಷಧಿ. ಗುಂಡಯ್ಯ ಜನಿಸಿದ್ದು ಭಾಲ್ಕಿಯಲ್ಲಿ ಗುಂಡಯ್ಯ ಹಾಗೂ ಧರ್ಮಪತ್ನಿ ಕೇತಲದೇವಿ ಗಡುಗೆ ತಯಾರಿಸುವ ಕಾಯಕ ಮಾಡುತ್ತಿದ್ದರು. ತಮ್ಮ ಕಾಯಕದಿಂದ ಶಿವನ ಒಲುಮೆ ಪಡೆದ ಮಹಾನುಭಾವರು. ಕಾಯಕ ಆದಾಯಕ್ಕೆ ಸೀಮಿತವಾಗಿರದೇ ಆನಂದಕ್ಕಾಗಿ ಮಾಡುತ್ತಿದ್ದರು. ಕುರುಬ ಗೊಲ್ಲಾಳ ಅವರು ವಿಜಯಪುರ ಜಿಲ್ಲೆಯಲ್ಲಿ ಜನಿಸಿ, ಕಲ್ಯಾಣಕ್ಕೆ ಆಗಮಿಸಿ, ಶರಣ ಸಂಕುಲದಲ್ಲಿ ಭಾಗಿಯಾದರು. ಅವರು 10 ವಚನಗಳು ಬರೆಯುವ ಮೂಲಕ ಕನ್ನಡ ಸಾಹಿತ್ಯ ಶ್ರೀಮತಗೊಳಿಸಿದ್ದಾರೆ ಎಂದು ತಿಳಿಸಿದರು.ತಾಲೂಕು ರೋಟರಿ ಸಂಸ್ಥೆಯ ಅಧ್ಯಕ್ಷೆ ಡಾ.ಶೈಲಜಾ ತಳವಾಡೆ ಕಾರ್ಯಕ್ರಮ ದೀಪ ಬೆಳಗಿಸಿ ಉದ್ಘಾಟಿಸಿದರು.

ತಾಲೂಕು ರೋಟರಿ ಕ್ಲಬ್ ಅಧ್ಯಕ್ಷೆ ಡಾ.ಶೈಲಜಾ ಡಾ.ಅನೀಲಕುಮಾರ ತಳವಾಡೆ, ಪ್ರಥಮ ಶೈಕ್ಷಣಿಕ ಸಾಹಿತ್ಯ ಸಮ್ಮೇಳದ ಸರ್ವಾಧ್ಯಕ್ಷೆ ವಿಜಯಕುಮಾರ ಪಾಟೀಲ ಯರನಳ್ಳಿ, ಜಿಲ್ಲಾ ಕನ್ನಡ ಮಹಿಳಾ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷೆಯಾಗಿ ಆಯ್ಕೆಯಾದ ಮಲ್ಲಮ್ಮ ಆರ್.ಪಾಟೀಲ, ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜೈರಾಜ ಪಾತ್ರೆ, ರೋಟರಿ ಕ್ಲಬ್ ಕಾರ್ಯದರ್ಶಿ ಪ್ರೊ.ಅಶೋಕ ರಾಜೋಳೆ, ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಸಂತೋಷ ಬಿ.ಜಿ.ಪಾಟೀಲ ಮತ್ತು ರೋಟರಿ ಕ್ಲಬ್ ಖಜಾಂಜಿ ಅವಿನಾಶ ಮಲ್ಗೆ ಅವರನ್ನು ಪರಮ ಪೂಜ್ಯರು ಶ್ರೀಮಠದ ಪರವಾಗಿ ಸನ್ಮಾನಿಸಿ, ಆಶೀರ್ವದಿಸಿದರು.

ರೋಟರಿ ಕ್ಲಬ್ ಅಂತರ್‌ರಾಷ್ಟ್ರೀಯ ಸಂಸ್ಥೆ. 125 ವರ್ಷಗಳಿಂದ ಕಾರ್ಯ ಮಾಡುತ್ತಿದೆ. ಇದು ಕೇವಲ ಸೇವಾ ಸಂಸ್ಥೆಯಾಗದೆ, ಶಿಕ್ಷಣ, ಸಮಾಜ, ಆರೋಗ್ಯ ಸೇವೆಗೆ ಆದ್ಯತೆ ನೀಡುತ್ತದೆ. ಅಂತಹ ಸಂಸ್ಥೆಯ ತಾಲೂಕಿನ ಅಧ್ಯಕ್ಷೆ ಸೇವೆ ಸಲ್ಲಿಸಲು ಅವಕಾಶ ದೊರೆತಿರುವುದು ನನ್ನ ಪುಣ್ಯ

– **ಡಾ.ಶೈಲಜಾ ತಳವಾಡೆ ಅಧ್ಯಕ್ಷರು ರೋಟರಿ ಸಂಸ್ಥೆ ಭಾಲ್ಕಿ**

# ರೈತರು ತಪ್ಪದೇ ಬೆಳೆ ವಿಮೆ ಮಾಡಿಸಿಕೊಳ್ಳಿ: ಮಂಜುನಾಥ್ ಸಲಹೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಪ್ರಸ್ತುತ ಬೆಳೆ ವಿಮೆಯನ್ನು ಗ್ರಾಮ ಪಂಚಾಯತಿ ಮಟ್ಟದಲ್ಲೇ ಜಾರಿಗೊಳಿಸಲಾಗಿದ್ದು, ಪಹಣಿ ಹೊಂದಿರುವ ಪ್ರತಿಯೊಬ್ಬ ರೈತರೂ ಈ ಯೋಜನೆಗೆ ಅರ್ಹರಾಗಿರುತ್ತಾರೆ. ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಉಪ ಕೃಷಿ ನಿರ್ದೇಶಕ ಎಸ್.ಎನ್. ಮಂಜುನಾಥ್ ಅವರು ಹೇಳಿದರು.ತಾಲ್ಲೂಕು ಆಡಳಿತ, ಕೃಷಿ ಇಲಾಖೆ ಬಳ್ಳಾರಿ ಹಾಗೂ ಹಗರಿಯ ಕೃಷಿ ವಿಜ್ಞಾನ ಕೇಂದ್ರದ ಸಹಯೋಗದೊಂದಿಗೆ ಹಗರಿಯ ಕೆವಿಕೆಯಲ್ಲಿ 'ಪಿಎಂಎಫ್‌ಬಿವೈ ಬೆಳೆ ವಿಮೆ, ಪರ್ಯಾಯ ಬೆಳೆ ಪದ್ಧತಿಗಳು ಹಾಗೂ ಬರಗಾಲ ನಿರ್ವಹಣಾ ಕ್ರಮಗಳು' ಕುರಿತು ಬುಧವಾರ ಆಯೋಜಿಸಿದ್ದ ರೈತರಿಗೆ ಅರಿವು ಮೂಡಿಸುವ ವಿಶೇಷ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.ಬ್ಯಾಂಕ್‌ಗಳಲ್ಲಿ ಸಾಲ ಪಡೆದವರಿಗೆ ವಿಮೆ ಕಡ್ಡಾಯವಾಗಿದ್ದು, ರೈತರು ಬಿತ್ತನೆಗೆ ಮುಂಚಿತವಾಗಿಯೇ ವಿಮೆ ಮಾಡಿಸುವುದು ಸೂಕ್ತ. ಹತ್ತಿರದ 'ಗ್ರಾಮ ಒನ್' ಅಥವಾ 'ಗ್ರಾಹಕ ಸೇವಾ ಕೇಂದ್ರ'ಗಳಿಗೆ ಭೇಟಿ ನೀಡಿ ಕಂತಿನ ಮೊತ್ತ ಪಾವತಿಸಬೇಕು, ಎಂದು ತಿಳಿಸಿದರು.ಬಳ್ಳಾರಿ ಭಾಗದ ರೈತರು ಹತ್ತಿ, ಮೆಕ್ಕೆಜೋಳ, ಸಜ್ಜೆ ಹಾಗೂ ಬರ ನಿರೋಧಕ ಬೆಳೆಯಾದ ನವಣೆ ಮತ್ತು ಸಾಮೆಗೆ ಕಡ್ಡಾಯವಾಗಿ ವಿಮೆ ಮಾಡಿಸಬೇಕೆಂದು ಕರೆ ನೀಡಿದರು.

ಬಳ್ಳಾರಿ ಸಹಾಯಕ ಕೃಷಿ ನಿರ್ದೇಶಕ ಗರ್ಜಪ್ಪ ಅವರು ಮಾತನಾಡಿ, ಜುಲೈ 31ರ ಒಳಗಾಗಿ ಮಳೆಯಾಶ್ರಿತ ಮತ್ತು ನೀರಾವರಿ ವ್ಯಾಪ್ತಿಯ ಸೂರ್ಯಕಾಂತಿ, ಹತ್ತಿ, ಮುಸುಕಿನ ಜೋಳ ಹಾಗೂ ಜೋಳದ ಬೆಳೆಗೆ ವಿಮೆ ಮಾಡಿಸಲು ಕೊನೆಯ ದಿನವಾಗಿದೆ. ರೈತರು ಈ ತಕ್ಷಣವೇ ವಿಮೆ ನೋಂದಾಯಿಸಿಕೊಳ್ಳಬೇಕು ಎಂದು ಹೇಳಿದರು.

ಇನ್ನೂ ಬಿತ್ತನೆಯಾಗದ ಪ್ರದೇಶಗಳಲ್ಲಿ 'ವಿಬಿಜಿ-ರಾಮ್-ಜಿ' ಮತ್ತು 'ಕೃಷಿ ಭಾಗ್ಯ' ಯೋಜನೆಯಡಿ ಕಂದಕ ಬದು ಹಾಗೂ ಕೃಷಿ ಹೊಂಡಗಳನ್ನು ನಿರ್ಮಿಸಿಕೊಳ್ಳಬೇಕು. ಪ್ರಸಕ್ತ ಸಾಲಿನಲ್ಲಿ ಮಳೆ ಕೊರತೆಯಿರುವುದರಿಂದ ಪರ್ಯಾಯ ಬೆಳೆ ಬೆಳೆದು ರೈತರು ಲಾಭ ಕಂಡುಕೊಳ್ಳಬೇಕು ಎಂದು ಸಲಹೆ ನೀಡಿದರು.

ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರು ಹಾಗೂ ಮಣ್ಣು ವಿಜ್ಞಾನಿಗಳಾದ ಡಾ. ರವಿ ಎಸ್. ಅವರು ಮಾತನಾಡಿ, ರೈತರು ಜಮೀನನ್ನು ಸಮತಟ್ಟು ಮಾಡದೆ ಉಳುಮೆ ಮಾಡಿ ಹಾಗೆಯೇ ಬಿಡುವುದರಿಂದ ಮಳೆಯಾದಾಗ ನೀರು ಮಣ್ಣಿನಲ್ಲಿ ಇಂಗಲು ನೆರವಾಗುತ್ತದೆ. ಆಗಸ್ಟ್ ಕೊನೆಯಲ್ಲಿ ಮಳೆಯಾದರೂ ಗೋಧಿ, ನವಣೆ, ರಾಗಿಯನ್ನು ಬೆಳೆಯಬಹುದು. ಮಣ್ಣಿನ ಫಲವತ್ತತೆ ಹೆಚ್ಚಿಸಲು ಹಸಿರೆಲೆ ಗೊಬ್ಬರಗಳನ್ನು ಬೆಳೆಸಬೇಕು ಎಂದು ಮಾಹಿತಿ ನೀಡಿದರು.

ಹವಮಾನ ಮುನ್ಸೂಚನೆ ಕುರಿತು ಮಾತನಾಡಿದ ಬೇಸಾಯ ತಜ್ಞರಾದ ಡಾ. ಕೃಷ್ಣಮೂರ್ತಿ ಅವರು, ಈ ಬಾರಿ ದೇಶದ ಶೇ.70 ರಷ್ಟು ಪ್ರದೇಶದಲ್ಲಿ ಮಳೆ ಅಭಾವವಾಗುವ ಸಾಧ್ಯತೆಯಿದ್ದು, ಕಡಿಮೆ ನೀರು ಬೇಡುವ ಕುಸುಬೆ, ಸಜ್ಜೆ, ಹುರುಳಿ, ಹಾಗೂ ಹಲಸಂದಿ ಬೆಳೆಗಳಿಗೆ ಆದ್ಯತೆ ನೀಡಬೇಕು ಎಂದು ರೈತರಿಗೆ ಮಾರ್ಗದರ್ಶನ ನೀಡಿದರು.

ಕಾರ್ಯಕ್ರಮದಲ್ಲಿ ಬಳ್ಳಾರಿ ತಾಲ್ಲೂಕಿನ ವಿವಿಧ ಗ್ರಾಮಗಳಿಂದ ಆಗಮಿಸಿದ್ದ ನೂರಾರು ಪ್ರಗತಿಪರ ರೈತರು ಭಾಗವಹಿಸಿ ಸಲಹೆ-ಸೂಚನೆಗಳ ಸದುಪಯೋಗ ಪಡೆದುಕೊಂಡರು.

ಈ ಸಂದರ್ಭದಲ್ಲಿ ಕೆವಿಕೆ ವಿಜ್ಞಾನಿ ಡಾ. ಪಾಲಯ್ಯ, ಡಾ. ನವೀನ್, ಸಹಾಯಕ ತೋಟಗಾರಿಕೆ ಅಧಿಕಾರಿ ಸುನಿಲ್, ತಾಲ್ಲೂಕು ಕೃಷಿಕ ಸಮಾಜದ ಸದಸ್ಯರಾದ ಗೋಪಾಲರೆಡ್ಡಿ, ರಾಮಣ್ಣ, ದೊಡ್ಡಬಸವರಾಜ, ಹೋಬಳಿ ಕೃಷಿ ಅಧಿಕಾರಿಗಳು, 'ಆತ್ಮ' ಯೋಜನೆಯ ಉಪಯೋಜನಾ ನಿರ್ದೇಶಕಿ ಕವಿತಾ ಕುಮಾರಿ ಹಾಗೂ 'ಕೃಷಿ ಸಂಜೀವಿನಿ' ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಮೊಬೈಲ್ ಹಾವಳಿಯಿಂದ ವಿದ್ಯಾರ್ಥಿಗಳಲ್ಲಿ ಓದು ಕ್ಷೀಣ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಇಂದಿನ ಆಧುನಿಕ ಕಾಲದಲ್ಲಿ ಮೊಬೈಲ್ ಹಾವಳಿಯಿಂದ ವಿದ್ಯಾರ್ಥಿಗಳಲ್ಲಿ ಓದುವ ಹವ್ಯಾಸ ಕಡಿಮೆಯಾಗಿದೆ. ಮೊಬೈಲ್‌ನಲ್ಲಿ ಹೆಚ್ಚಿನ ಸಮಯ ಕಳೆಯುತ್ತಿರುವ ವಿದ್ಯಾರ್ಥಿಗಳು, ತಮ್ಮ ಜೀವನವನ್ನೂ ಹಾಳು ಮಾಡಿಕೊಳ್ಳುತ್ತಿದ್ದಾರೆ ಎಂದು ಕರ್ನಾಟಕ ಪತ್ರಕರ್ತರ ಸಂಘದ ಬಳ್ಳಾರಿ ಜಿಲ್ಲಾಧ್ಯಕ್ಷ ಯಾಳ್ಪಿ ವಲಿಭಾಷ ಹೇಳಿದರು.ಪಟ್ಟಣದ ಷಾಮಿಯಾಚಂದ್ ಸರಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಏರ್ಪಡಿಸಿದ್ದ ಪತ್ರಿಕಾ ದಿನಾಚರಣೆಯ ಕಾರ್ಯಕ್ರಮದ ಉದ್ಘಾಟನೆಯನ್ನು ನೆರವೇರಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಮೊಬೈಲ್ ಬಿಟ್ಟು, ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು. ಅಂದಾಗ ಮಾತ್ರ ಜೀವನದಲ್ಲಿ ಯಶಸ್ಸು ಸಾಧಿಸಬಹುದು.ವಿದ್ಯಾರ್ಥಿಗಳು ಜೀವನದಲ್ಲಿ ಉನ್ನತ ಗುರಿಯನ್ನು ಹೊಂದುವ ಸಂಕಲ್ಪ ಮಾಡಬೇಕು ಎಂದರು.

ಸಮಾಜ ಹಾಗೂ ದೇಶದ ಬಗ್ಗೆ ಕಾಳಜಿ ವಹಿಸುವ ಮನೋಭಾವ ಬೆಳೆಸಿಕೊಳ್ಳಬೇಕಾದರೆ, ಉತ್ತಮ ಚಿಂತನೆ ಮತ್ತು ವಿವೇಚನಾ ಶಕ್ತಿ ಅಗತ್ಯ. ಪ್ರತಿಯೊಂದು ವಿಷಯವನ್ನೂ ಮೌಲ್ಯಮಾಪನ ಮಾಡುವ ಗುಣವನ್ನು ವಿದ್ಯಾರ್ಥಿ ಜೀವನದಲ್ಲೇ ರೂಢಿಸಿಕೊಳ್ಳಬೇಕು ಅಲ್ಲದೇ, ಪತ್ರಿಕೆಗಳನ್ನು ಹೆಚ್ಚೆಚ್ಚು ಓದುವ ಹವ್ಯಾಸವನ್ನು ವಿದ್ಯಾರ್ಥಿಗಳು ಬೆಳೆಸಿಕೊಳ್ಳಬೇಕು ಎಂದು ಅವರು ಹೇಳಿದರು.

ಜನಪ್ರತಿನಿಧಿಗಳ ಮಾತುಗಳು ವೇದಿಕೆಗೆ ಸೀಮಿತವಾಗಿ ಅದು ಕಾರ್ಯರೂಪಕ್ಕೆ ಬಾರದಿದ್ದಾಗ ಅದನ್ನು ನೆನಪು ಮಾಡುವ ಕಾರ್ಯವನ್ನು ಪತ್ರಕರ್ತರು ಮಾಡುವ ಮೂಲಕ ಅಂಕುಶವಾಗಿ ಕೆಲಸ ಮಾಡುತ್ತಾರೆ. ತಪ್ಪು-ಸರಿಗಳನ್ನು ಸಮಾಜಕ್ಕೆ ತಿಳಿಸುವ ಕಾರ್ಯ ಅತಿ ಅಗತ್ಯವಾಗಿದೆ.ಪತ್ರಿಕೋದ್ಯಮದಲ್ಲಿ ಎಐ ಬಳಕೆ ಹೆಚ್ಚು ಪರಿಣಾಮಕಾರಿಯಾಗಲಿದ್ದು ಅದರ ಟೂಲ್ ಗಳನ್ನು ಬಳಸಿಕೊಂಡು ಲೇಖನಗಳನ್ನು ಹೆಚ್ಚು ಸ್ಪಷ್ಟಗೊಳಿಸುವ ಜತೆಗೆ ತಪ್ಪುಗಳನ್ನು ದೂರ ಮಾಡಬಹುದು. ನಮ್ಮ ಅನುಭವ, ಸೃಜನಶೀಲತೆಗಳ ಮೂಲಕ ಲೇಖನಗಳಿಗೆ ಶಕ್ತಿ ತುಂಬುವ ಕಾರ್ಯ ಮಾಡಬಹುದು ಎಂದರು.

ಕಾರ್ಯಕ್ರಮ ನಿರೂಪಣೆಯನ್ನ ಕರ್ನಾಟಕ ಪತ್ರಕರ್ತರ ಸಂಘದ ಕಂಪ್ಲಿ ತಾಲೂಕು ಘಟಕದ ಪ್ರಧಾನ ಕಾರ್ಯದರ್ಶಿ ಹೆಚ್.ಮರಿಯಪ್ಪ ಮಾಡಿದರು. ಪ್ರಾಸ್ತಾವಿಕವಾಗಿ ಕರ್ನಾಟಕ ಪತ್ರಕರ್ತರ ಸಂಘದ ಜಿಲ್ಲಾ ಉಪಾಧ್ಯಕ್ಷ ಡಾ.ಗಿರೀಶ್ ಕುಮಾರ್ ಗೌಡ ರವರು ಮಾತನಾಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ಪತ್ರಕರ್ತರ ಸಂಘದ ಜಿಲ್ಲಾ ಉಪಾಧ್ಯಕ್ಷರಾದ ಕೆ.ಬಜಾರಪ್ಪ, ಕುರುಗೋಡು ವೀರಭದ್ರಗೌಡ, ಗಿರೀಶ್ ಕುಮಾರ್ ಗೌಡ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ದುರ್ಗೇಶ್ ಯಾದವ್, ವೀರಶೈವ ಲಿಂಗಾಯತ ಮಹಾ ವೇದಿಕೆಯ ಜಿಲ್ಲಾಧ್ಯಕ್ಷರಾದ ಹೊಸಕೋಟೆ ಜಗದೀಶ್, ಕಾಲೇಜಿನ ಪ್ರಾಂಶುಪಾಲರಾದ ಸಿದ್ದಣ್ಣ ಪರಮೇಶ್ವರ, ತಾಲೂಕ ಪಂಚಾಯತ್ ಇಓ ಆರ್. ಕೆ.ಶ್ರೀಕುಮಾರ್, ದಲಿತ ಮುಖಂಡ ಕೆ.ಲಕ್ಷ್ಮಣ, ಹಿರಿಯ ಪತ್ರಕರ್ತರಾದ ಭಾವೈಕ್ಯ ವೆಂಕಟೇಶ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳು ಉನ್ನತ ಗುರಿ ಸಾಧಿಸಲಿ : ಅವ್ವಾರು ಮಂಜುನಾಥ್



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಬಳ್ಳಾರಿ ಸೇವಾ ಸಮಿತಿಯ ಸೌಹಾರ್ದತೆಯಲ್ಲಿ ಬಸವೇಶ್ವರ ಕ್ಯಾಂಪ್, ಕಪ್ಪಗಲ್ ಗ್ರಾಮದ ಸರ್ಕಾರಿ ಶಾಲೆಯಲ್ಲಿ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ಉಚಿತ ಕಲಿಕಾ ಸಾಮಗ್ರಿಗಳ ವಿತರಣೆ ಕಾರ್ಯಕ್ರಮವನ್ನು ಗುರುವಾರ ಹಮ್ಮಿಕೊಳ್ಳಲಾಯಿತು.ಕಾರ್ಯಕ್ರಮವನ್ನು ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ಶ್ರೀ ಅವ್ವಾರು ಮಂಜುನಾಥ್ ಅವರು ಉದ್ಘಾಟಿಸಿ ಮಾತನಾಡಿ, ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಬಳ್ಳಾರಿ ಸೇವಾ ಸಮಿತಿ ಉಚಿತವಾಗಿ ಕಲಿಕಾ ಸಾಮಗ್ರಿಗಳನ್ನು ವಿತರಿಸುತ್ತಿರುವುದು ಸಮಾಜಮುಖಿ ಹಾಗೂ ಶ್ಲಾಘನೀಯ ಕಾರ್ಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.ವಿದ್ಯಾರ್ಥಿಗಳು ಇಂತಹ ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಂಡು ಶ್ರದ್ಧೆಯಿಂದ ಅಭ್ಯಾಸ ಮಾಡಬೇಕು. ಶಿಕ್ಷಣದ ಮೂಲಕ ಜೀವನದಲ್ಲಿ ಉನ್ನತ ಸಾಧನೆ ಮಾಡಿ, ಐಎಎಸ್, ಐಪಿಎಸ್ ಸೇರಿದಂತೆ ಉನ್ನತ ಹುದ್ದೆಗಳನ್ನು ಅಲಂಕರಿಸಿ ಸಮಾಜಕ್ಕೆ ಮಾದರಿಯಾಗಬೇಕು ಎಂದು ಅವರು ಕರೆ ನೀಡಿದರು.ಕಾರ್ಯಕ್ರಮದಲ್ಲಿ ಮಾತನಾಡಿದ ಜಯಪ್ರಕಾಶ್ ಗುಪ್ತ, ಭಾರತದ ಮಾಜಿ ರಾಷ್ಟ್ರಪತಿ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಅವರ ಜೀವನ ಚರಿತ್ರೆ ಹಾಗೂ ಅವರ ಸಾಧನೆಗಳನ್ನು ಮಕ್ಕಳಿಗೆ ಪರಿಚಯಿಸಿ, ಕನಸು ಕಾಣುವ ಜೊತೆಗೆ ಅದನ್ನು ಸಾಕಾರಗೊಳಿಸಲು ನಿರಂತರ ಪರಿಶ್ರಮ ಅಗತ್ಯ ಎಂದು ತಿಳಿಸಿದರು.ಈ ಸಂದರ್ಭದಲ್ಲಿ ಸುಮಾರು 150 ವಿದ್ಯಾರ್ಥಿಗಳಿಗೆ ಪೆನ್ನು, ಪೆನ್ಸಿಲ್, ನೋಟ್ ಪುಸ್ತಕ, ಶಾಲಾ ಬ್ಯಾಗ್, ಕಂಪಾಸ್ ಬಾಕ್ಸ್ ಸೇರಿದಂತೆ ವಿವಿಧ ಕಲಿಕಾ ಸಾಮಗ್ರಿಗಳನ್ನು ಉಚಿತವಾಗಿ ವಿತರಿಸಲಾಯಿತು.ಕಾರ್ಯಕ್ರಮದಲ್ಲಿ ಬಳ್ಳಾರಿ ಸೇವಾ ಸಮಿತಿಯ ಅಧ್ಯಕ್ಷರಾದ ಬಿ. ಸುರೇಂದ್ರ ಕುಮಾರ್ ಭಾಫನ್, ಕಾರ್ಯದರ್ಶಿ ವಿ. ರಾಮಚಂದ್ರ, ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಮಾಜಿ ಅಧ್ಯಕ್ಷರಾದ ಬಿ. ಮಹಾರುದ್ರ ಗೌಡ, ಜಯಪ್ರಕಾಶ್ ಗುಪ್ತ, ಗ್ರಾಮ ಪಂಚಾಯಿತಿ ಸದಸ್ಯೆ ಶಾಂತಮ್ಮ, ಬಸವೇಶ್ವರ ಕ್ಯಾಂಪ್, ಕಪ್ಪಗಲ್ ಸರ್ಕಾರಿ ಶಾಲೆಯ ಮುಖ್ಯ ಶಿಕ್ಷಕರಾದ ಶಿವಕುಮಾರ್, ವಿಜಯಕುಮಾರ್, ಬಳ್ಳಾರಿ ಸೇವಾ ಸಮಿತಿಯ ಪದಾಧಿಕಾರಿಗಳು, ಸದಸ್ಯರು, ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.ಕಾರ್ಯಕ್ರಮವು ವಿದ್ಯಾರ್ಥಿಗಳಲ್ಲಿ ಶಿಕ್ಷಣದ ಬಗ್ಗೆ ಆಸಕ್ತಿ ಮತ್ತು ಆತ್ಮವಿಶ್ವಾಸವನ್ನು ಬೆಳೆಸುವ ನಿಟ್ಟಿನಲ್ಲಿ ಯಶಸ್ವಿಯಾಗಿ ನಡೆಯಿತು.

# ಶ್ರದ್ಧೆ-ಭಕ್ತಿಯಿಂದ ಸಾಧನೆ ಸಾಧ್ಯ : ಮೇಯರ್‌ಗಾದೆಪ್ಪ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಪ್ರತಿಯೊಬ್ಬರಲ್ಲೂ ಒಂದಲ್ಲ ಒಂದು ಕಲೆ ಮತ್ತು ಛಲ ಅಡಗಿರುತ್ತದೆ. ಈ ವಯಸ್ಸು ಮತ್ತೆ ತಿರುಗಿ ಬರುವುದಿಲ್ಲ. ಹಾಗಾಗಿ ಶಿಕ್ಷಣ, ಕ್ರೀಡೆ ಮತ್ತು ಕಲೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಶ್ರದ್ಧೆ, ಭಕ್ತಿ ಹಾಗೂ ಸ್ಪಷ್ಟ ಗುರಿಯನ್ನು ಇಟ್ಟುಕೊಂಡು ಮುನ್ನಡೆದರೆ ಯಶಸ್ಸು ಖಂಡಿತ ಸಿಗುತ್ತದೆ ಎಂದು ಮಹಾನಗರ ಪಾಲಿಕೆಯ ಮಹಾಪೌರರಾದ ಪಿ.ಗಾದೆಪ್ಪ ಅವರು ಹೇಳಿದರು.ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ನಗರದ ಡಾ. ರಾಜ್‌ಕುಮಾರ್ ರಸ್ತೆಯಲ್ಲಿರುವ ಬಿ.ಪಿ.ಎಸ್.ಸಿ. ಶಾಲಾ ಹಾಗೂ ಕಾಲೇಜಿನ ಶರಣ ಸಭಾಂಗಣದಲ್ಲಿ ಗುರುವಾರ ಆಯೋಜಿಸಿದ್ದ "ಯುವ ಸೌರಭ" ಸಾಂಸ್ಕೃತಿಕ ಕಾರ್ಯಕ್ರಮವನ್ನು ಸಮಾಳ ವಾದ್ಯ ಬಾರಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.ಹೆತ್ತ ತಂದೆ-ತಾಯಿಗಳು ಅಪಾರ ಕನಸುಗಳನ್ನು ಇಟ್ಟುಕೊಂಡಿರುತ್ತಾರೆ. ಅವರ ಆಸೆಗಳನ್ನು ಈಡೇರಿಸುವುದು ನಮ್ಮ ಕರ್ತವ್ಯ. ನಾನು ಸಹ 1988ರಿಂದ ಯುವಕ ಸಂಘವನ್ನು ಕಟ್ಟಿ, ಅದರ ಮೂಲಕ ಸಮಾಜ ಸೇವೆ ಮತ್ತು ಕಲಾ ಕ್ಷೇತ್ರದಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡು ಬಂದಿದ್ದೇನೆ ಎಂದು ತಮ್ಮ ಹಳೆಯ ದಿನಗಳನ್ನು ನೆನಪಿಸಿಕೊಂಡರು.ಸರ್ಕಾರವು ಯುವಜನರಲ್ಲಿರುವ ಕಲಾ ಪ್ರತಿಭೆ ಮತ್ತು ಕ್ರೀಡಾ ಕೌಶಲ್ಯವನ್ನು ಪ್ರೋತ್ಸಾಹಿಸಲು ವಿವಿಧ ಯೋಜನೆಗಳನ್ನು ಜಾರಿಗೆ ತಂದಿದೆ. ಕಲಾಪ್ರೇಮಿಗಳು ಮತ್ತು ಕ್ರೀಡಾಪಟುಗಳು ಒಂದೆಡೆ ಸೇರಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಸರ್ಕಾರ ವೇದಿಕೆ ಕಲ್ಪಿಸಿದ್ದು, ಇದನ್ನು ಪ್ರತಿಯೊಬ್ಬರೂ ಸರಿಯಾಗಿ ಸದುಪಯೋಗಪಡಿಸಿಕೊಳ್ಳಬೇಕು. ಯುವಜನತೆ ಇಂತಹ ವೇದಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ ಜಿಲ್ಲಾ, ರಾಜ್ಯ ಹಾಗೂ ರಾಷ್ಟ್ರ ಮಟ್ಟದಲ್ಲಿ ತಮ್ಮ ಕಲಾಪ್ರತಿಭೆಯನ್ನು ಪಸರಿಸಿ, ದೇಶಕ್ಕೆ ಕೀರ್ತಿ ತರಬೇಕು ಎಂದು ಆಶಿಸಿದರು.ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ. ನಾಗರಾಜ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಯುವ ಪೀಳಿಗೆಯಲ್ಲಿ ನಾಡಿನ ಕಲೆ, ಸಂಸ್ಕೃತಿ ಮತ್ತು ಜಾನಪದದ ಬಗ್ಗೆ ಆಸಕ್ತಿ ಬೆಳೆಸುವ ಉದ್ದೇಶದಿಂದ ರಾಜ್ಯಾದ್ಯಂತ ಕಾಲೇಜು ವಿದ್ಯಾರ್ಥಿಗಳಿಗಾಗಿ 'ಯುವ ಸೌರಭ' ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ವಿದ್ಯಾರ್ಥಿಗಳಿಗೆ ನಮ್ಮ ನಾಡಿನ ಹೆಮ್ಮೆಯ ಕಲೆ ಮತ್ತು ಸಂಸ್ಕೃತಿ, ಜಾನಪದ ಕಲೆ, ನಾಟಕ, ಸಂಗೀತ ಹಾಗೂ ನೃತ್ಯ ಮುಂತಾದ ಕಲಾ ಪ್ರಕಾರಗಳನ್ನು ಪರಿಚಯಿಸಿ, ಅವರಲ್ಲಿ ಕಲಾ ಆಸಕ್ತಿಯನ್ನು ಜಾಗೃತಗೊಳಿಸುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ ಎಂದು ಹೇಳಿದರು.ಕಾರ್ಯಕ್ರಮದಲ್ಲಿ ನಾಡಿನ ವೈವಿಧ್ಯಮಯ ಕಲೆ ಮತ್ತು ಸಂಸ್ಕೃತಿಯನ್ನು ಬಿಂಬಿಸುವ ಹಲವು ಪ್ರದರ್ಶನಗಳು ನೆರವೇರಿದವು.ಸುಗಮ ಸಂಗೀತ: ಬಳ್ಳಾರಿ ತಾಲ್ಲೂಕಿನ ಡಿ. ಕಗ್ಗಲ್ ಗ್ರಾಮದ ಕು. ಪುಟ್ಟರಾಜು .ಕೆ ಅವರು ಗಾಯನದ ಮೂಲಕ ನೆರೆದಿದ್ದ ಸಭಿಕರನ್ನು ಮಂತ್ರಮುಗ್ಧಗೊಳಿಸಿದರು.ಸಮೂಹ ನೃತ್ಯ: ಬಳ್ಳಾರಿಯ ಶಾರದ ನಾಟ್ಯ ಅಕಾಡೆಮಿ 'ಕಲಾವೃಕ್ಷ' ತಂಡದ ಪ್ರದರ್ಶಿಸಿದ ಅತ್ಯಾಕರ್ಷಕ ಸಮೂಹ ನೃತ್ಯವು ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿತು.ಜಾನಪದ ಗೀತೆಗಳು: ಕಂಪ್ಲಿ ತಾಲ್ಲೂಕಿನ ಮೆಟ್ರಿ ಗ್ರಾಮದ ಕು. ಮುದ್ದಮ್ಮ ಅವರು ತಮ್ಮ ಗಂಭೀರ ಧ್ವನಿಯಲ್ಲಿ ಜಾನಪದ ಸೊಗಡಿನ ಗೀತೆಗಳನ್ನು ಹಾಡಿ ಚಪ್ಪಾಳೆ ಗಿಟ್ಟಿಸಿಕೊಂಡರು.ಕಂಸಾಳೆ: ಕುರುಗೋಡು ತಾಲ್ಲೂಕಿನ ಗುತ್ತಿಗನೂರು ಗ್ರಾಮದ ಶಿವಪ್ಪ .ಸಿ ಮತ್ತು ಸಂಗಡಿಗರು ಕಂಸಾಳೆ ಕಲೆಯ ರೋಮಾಂಚನಕಾರಿ ಪ್ರದರ್ಶನ ನೀಡಿದರು.ವೀರಗಾಸೆ: ಸಂಡೂರು ತಾಲ್ಲೂಕಿನ ತಾರಾನಗರದ ಮಲ್ಲಿಕಾರ್ಜುನ ಸ್ವಾಮಿ ಮತ್ತು ಸಂಗಡಿಗರು ವೀರಗಾಸೆಯ ಶೌರ್ಯಪೂರ್ಣ ಕುಣಿತದ ಮೂಲಕ ನೆರೆದಿದ್ದವರಲ್ಲಿ ರೋಮಾಂಚನ ಮೂಡಿಸಿದರು.ಸ್ಥಳೀಯ ಕಲೆ ಮತ್ತು ಕಲಾವಿದರನ್ನು ಪ್ರೋತ್ಸಾಹಿಸುವ ಇಂತಹ ಕಾರ್ಯಕ್ರಮಗಳು ನಮ್ಮ ಜಾನಪದ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಉಳಿಸಿ ಬೆಳೆಸಲು ಪೂರಕವಾಗಿವೆ ಎಂದು ಪ್ರೇಕ್ಷಕರು ಹರ್ಷ ವ್ಯಕ್ತಪಡಿಸಿದರು.ಕಾರ್ಯಕ್ರಮದಲ್ಲಿ ಭಾಗವಹಿಸಿದ ಕಲಾತಂಡಗಳಿಗೆ ಗಣ್ಯರು ಪ್ರಮಾಣ ಪತ್ರ ವಿತರಿಸಿ ಗೌರವಿಸಿದರು.ಈ ಸಂದರ್ಭದಲ್ಲಿ ಟಿಇಹೆಚ್‌ಆರ್‌ಡಿ ಟ್ರಸ್ಟ್ ಹಾಗೂ ಬಿ.ಪಿ.ಎಸ್.ಸಿ. ಶಾಲಾ ಮತ್ತು ಕಾಲೇಜಿನ ಅಧ್ಯಕ್ಷ ಡಾ. ಎಸ್.ಜಿ.ವಿ.ಮಹಿಪಾಲ್, ನಿವೃತ್ತ ವರದಿಗಾರರು ಹಾಗೂ ತಬಲ ಕಲಾವಿದರಾದ ಅಹಿರಾಜ್.ಎಂ., ಹಿಂದೂಸ್ತಾನಿ ಗಾಯಕ ದೊಡ್ಡಬಸಪ್ಪ ಗವಾಯಿ, ಜಾನಪದ ಗಾಯಕ ಹುಲುಗಪ್ಪ ಎಸ್.ಎಂ., ನಿವೃತ್ತ ಪಿಎಸ್‌ಐ ಹುಸೇನ್ ಸಾಬ್ ಸೇರಿದಂತೆ ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಮಹಿಳೆ ಕಾಣೆ: ಪತ್ತೆಗೆ ಮನವಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಸಿರುಗುಪ್ಪ ತಾಲ್ಲೂಕಿನ 30 ನೇ ವಾರ್ಡ್ನ ಎಸ್.ಡಬ್ಲ್ಯೂ ಶಾಲೆ ಹತ್ತಿರ ನಿವಾಸಿಯಾದ ಎಂ.ಶೇಕಮ್ಮ ಎನ್ನುವ 25 ವರ್ಷದ ಮಹಿಳೆ ಮಾರ್ಚ್ 08 ರಂದು ಮನೆಯಿಂದ ಕಾಣೆಯಾಗಿರುವ ಕುರಿತು ಸಿರುಗುಪ್ಪ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

ಚಹರೆ ಗುರುತು: ಅಂದಾಜು 5.2 ಅಡಿ ಎತ್ತರ, ಸಾಧಾರಣ ಮೈಕಟ್ಟು, ಗೋಧಿ ಮೈಬಣ್ಣ, ದುಂಡು ಮುಖ ಹೊಂದಿದ್ದು, ಕಾಣೆಯಾದ ಸಂದರ್ಭದಲ್ಲಿ ಹರಿಶಿನ ಬಣ್ಣದ ಹೂ ಡಿಸೈನ್‌ವುಳ್ಳ ಚೂಡಿದಾರ ಟಾಪ್ ಹಾಗೂ ಬಿಳಿ ಬಣ್ಣದ ಲಗ್ಗಿನ್ಸ್ ಧರಿಸಿರುತ್ತಾಳೆ.

ಮಹಿಳೆ ಬಗ್ಗೆ ಸುಳಿವು ಸಿಕ್ಕಲ್ಲಿ ಸಿರುಗುಪ್ಪ ಪೊಲೀಸ್ ಠಾಣೆಯ ದೂ.08396-220333, ಸಿ.ಪಿ.ಐ ದೂ.08396-220003, ಡಿ.ಎಸ್.ಪಿ ದೂ.08396-276000 ಅಥವಾ ಬಳ್ಳಾರಿ ಕಂಟ್ರೋಲ್ ರೂಂ ದೂ.08392-258100 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾಣೆಯಾದ ವ್ಯಕ್ತಿಯ ಪತ್ತೆಗೆ ಮನವಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಸಿರುಗುಪ್ಪ ಪಟ್ಟಣದ 15 ನೇ ವಾರ್ಡ್ನ ಕೆ.ಎಸ್.ಆರ್.ಟಿ.ಸಿ. ಬಸ್ ಡಿಪೋ ಎದುರುಗಡೆ ಬಾಲಾಜೀ ಲೇ ಔಟ್ ನಿವಾಸಿಯಾದ ಅಂಬರೇಶ ಎಸ್. ಎನ್ನುವ 53 ವರ್ಷದ ವ್ಯಕ್ತಿಯು 2025 ರ ಆಗಸ್ಟ್ 01 ರಂದು ಕೆಲಸದ ನಿಮಿತ್ತ ಕುರುಗೋಡಿಗೆ ಹೋಗಿ ಬರುವುದಾಗಿ ತಿಳಿಸಿ ಪುನ: ಮನಗೆ ಬಾರದೇ ಕಾಣೆಯಾಗಿರುವ ಕುರಿತು ಸಿರುಗುಪ್ಪ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

ಚಹರೆ ಗುರುತು: ಅಂದಾಜು 5.10 ಅಡಿ ಎತ್ತರ, ಸಾಧಾರಣ ಮೈಕಟ್ಟು, ಗೋಧಿ ಮೈಬಣ್ಣ, ಕೋಲು ಮುಖ, ಮುಖದ ಎಡಭಾಗದಲ್ಲಿ ಕಪ್ಪು ಮಚ್ಚೆ ಹೊಂದಿದ್ದು, ಕಾಣೆ-ಯಾದ ಸಂದರ್ಭದಲ್ಲಿ ಕ್ರೀಮ್ ಬಣ್ಣದ ತುಂಬು ತೋಳಿನ ಅಂಗಿ, ಅರ್ಧ ತೋಳಿನ ಬಿಳಿ ಬಣ್ಣದ ಬನಿಯನ್ ಹಾಗೂ ಲೈಟ್ ಬ್ರೌನ್ ಬಣ್ಣದ ಚಿಕ್ಕ ಲೈನ್ ಗಳಿರುವ ಪ್ಯಾಂಟ್ ಧರಿಸಿರುತ್ತಾನೆ. ಕನ್ನಡ, ತೆಲುಗು ಭಾಷೆ ಮಾತನಾಡುತ್ತಾನೆ.

ವ್ಯಕ್ತಿಯ ಬಗ್ಗೆ ಸುಳಿವು ಸಿಕ್ಕಲ್ಲಿ ಸಿರುಗುಪ್ಪ ಪೊಲೀಸ್ ಠಾಣೆಯ ದೂ.08396-220333, ಸಿ.ಪಿ.ಐ ದೂ.08396-220003, ಡಿ.ಎಸ್.ಪಿ ದೂ.08396-276000 ಅಥವಾ ಬಳ್ಳಾರಿ ಕಂಟ್ರೋಲ್ ರೂಂ ದೂ.08392-258100 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಯುರ್ವೇದ ಸೇವೆಯಲ್ಲಿ ಹಳೆಯ ವಿದ್ಯಾರ್ಥಿಗಳ ಸಾಧನೆ ಸಂಸ್ಥೆಗೆ ಹೆಮ್ಮೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ




ಅತ್ಯಂತ ಸರಳ ಕನಸಿನೊಂದಿಗೆ ಆರಂಭವಾದ ಈ ಮಹಾವಿದ್ಯಾಲಯ ಇಂದು ಹೆಮ್ಮರವಾಗಿ ಬೆಳೆದಿದೆ. ಇಲ್ಲಿ ವ್ಯಾಸಂಗ ಮಾಡಿದ ಹಳೆಯ ವಿದ್ಯಾರ್ಥಿಗಳು ಇಂದು ಕರ್ನಾಟಕ ಮಾತ್ರವಲ್ಲದೆ ದೇಶದ ವಿವಿಧ ಭಾಗಗಳಲ್ಲಿ ಆಯುರ್ವೇದ ಸೇವೆ ಸಲ್ಲಿಸುತ್ತಿರುವುದು ಸಂಸ್ಥೆಗೆ ಹೆಮ್ಮೆಯ ವಿಷಯ ಎಂದು ಸಂಸ್ಥೆಯ ನಿವೃತ್ತ ಪ್ರಾಂಶುಪಾಲರಾದ ಡಾ. ಸೈಯದ್ ಅತ್ತಾರ್ ಫಾತಿಮಾ ಅವರು ಹರ್ಷ ವ್ಯಕ್ತಪಡಿಸಿದರು.

ನಗರದ ತಾರಾನಾಥ ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯ ಸರ್ಕಾರಿ ಸೇವೆಯು 50 ವರ್ಷ ಪೂರೈಸಿರುವ ಹಿನ್ನೆಲೆಯಲ್ಲಿ ಗುರುವಾರ ಹಮ್ಮಿಕೊಂಡಿದ್ದ 'ಸುವರ್ಣ ಸಂಭ್ರಮ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.ಈ ಸಂಭ್ರಮವು ಕೇವಲ ಐವತ್ತು ವರ್ಷಗಳ ಆಚರಣೆಯಲ್ಲ, ಬದಲಾಗಿ ಶತಮಾನೋತ್ಸವದತ್ತ ಸಾಗುತ್ತಿರುವ ಸಂಸ್ಥೆಯ ಪರಿವರ್ತನೆಯ ಪಯಣವಾಗಿದೆ ಎಂದು ಅಭಿಮತ ವ್ಯಕ್ತಪಡಿಸಿದರು.ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ರಾಜಶೇಖರ್ ಎಸ್. ಗಾಣಿಗೇರ ಅವರು, ಈ ಸುವರ್ಣ ಸಂಭ್ರಮವು ಸಂಸ್ಥೆಯ ಸುದೀರ್ಘ ಸಾಧನೆಗಳನ್ನು ಸ್ಮರಿಸುವುದರ ಜೊತೆಗೆ ಶತಮಾನೋತ್ಸವದತ್ತ ಸಾಗುವ ಅಭಿವೃದ್ಧಿಯ ಪಯಣಕ್ಕೆ ಹೊಸ ದಿಕ್ಕು ನೀಡಲಿದೆ ಎಂದು ಅಭಿಪ್ರಾಯಪಟ್ಟರು.ಕೆಎಂಇಆರ್‌ಸಿ ಅನುದಾನದಡಿ ನಡೆಯುತ್ತಿರುವ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳು ಹಾಗೂ ಮಹಾವಿದ್ಯಾಲಯದ ಶೈಕ್ಷಣಿಕ ಮತ್ತು ಆಸ್ಪತ್ರೆಯ ಸೇವಾವಿಸ್ತರಣೆಯ ಕುರಿತು ವಿವರಣೆ ನೀಡಿದ ಅವರು ಸಂಸ್ಥೆಯ ಸರ್ವಾಂಗೀಣ ಅಭಿವೃದ್ಧಿಗೆ ಕೈಗೊಳ್ಳಲಾಗಿರುವ ವಿವಿಧ ಯೋಜನೆಗಳ ಕುರಿತು ಮಾಹಿತಿ ನೀಡಿದರು.*ಪಂಡಿತ್ ತಾರಾನಾಥ್ ಅವರ ಕಂಚಿನ ಪುತ್ಥಳಿ ನಿರ್ಮಾಣಕ್ಕೆ ಭೂಮಿಪೂಜೆ:*ಸುವರ್ಣ ಸಂಭ್ರಮದ ಅಂಗವಾಗಿ, ಸಂಸ್ಥೆಯ ಸಂಸ್ಥಾಪಕರಾದ ವೈದ್ಯರತ್ನ ಪಂಡಿತ್ ತಾರಾನಾಥ್ ಅವರ ಕಂಚಿನ ಪುತ್ಥಳಿ ನಿರ್ಮಾಣಕ್ಕೆ ಸಂಸ್ಥೆಯ ಆವರಣದಲ್ಲಿ ಭೂಮಿಪೂಜೆ ನೆರವೇರಿಸಲಾಯಿತು.ಕಾರ್ಯಕ್ರಮದಲ್ಲಿ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಹಳೆಯ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ಡಾ.ಮರಿದೇವ ಶರ್ಮಾ, ವೈದ್ಯರತ್ನ ತಾರಾನಾಥ ಅವರ ಸ್ಮರಣಾರ್ಥ ಮಹಾವಿದ್ಯಾಲಯದ ಆವರಣದಲ್ಲಿ ಕಂಚಿನ ಪುತ್ಥಳಿಯನ್ನು ಪ್ರತಿಷ್ಠಾಪಿಸಲಾಗುತ್ತಿದೆ. ಈ ಪುತ್ಥಳಿಯು ಸಂಸ್ಥಾಪಕರ ಆದರ್ಶ ಹಾಗೂ ಸಂಸ್ಥೆಯ ವೈಭವಶಾಲಿ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಶಾಶ್ವತ ಸ್ಮಾರಕವಾಗಲಿದೆ ಎಂದು ತಿಳಿಸಿದರು.

ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ರಾಜಶೇಖರ್ ಎಸ್. ಗಾಣಿಗೇರ ಅವರು ಮಾತನಾಡಿ, ಸುವರ್ಣ ಸಂಭ್ರಮದ ಅಂಗವಾಗಿ ನಡೆದ ಈ ಭೂಮಿಪೂಜೆಯು ಸಂಸ್ಥೆಯ ಇತಿಹಾಸದಲ್ಲೇ ಅತ್ಯಂತ ಮಹತ್ವದ ಮೈಲಿಗಲ್ಲಾಗಿದೆ. ಹಲವಾರು ಏಳು-ಬೀಳುಗಳನ್ನು ದಾಟಿ ಹೆಮ್ಮರವಾಗಿ ಬೆಳೆದಿರುವ ಈ ಸಂಸ್ಥೆಯು ಸಾವಿರಾರು ವಿದ್ಯಾರ್ಥಿಗಳಿಗೆ ಗುಣಮಟ್ಟದ ಆಯುರ್ವೇದ ಶಿಕ್ಷಣ ಹಾಗೂ ಲಕ್ಷಾಂತರ ರೋಗಿಗಳಿಗೆ ಆರೋಗ್ಯ ಸೇವೆ ನೀಡುವ ಮೂಲಕ ಸಮಾಜದಲ್ಲಿ ವಿಶಿಷ್ಟ ಸ್ಥಾನ ಗಳಿಸಿದೆ ಎಂದು ಹರ್ಷ ವ್ಯಕ್ತಪಡಿಸಿದರು.ಕಾರ್ಯಕ್ರಮದಲ್ಲಿ ಆಸ್ಪತ್ರೆಯ ಆರ್.ಎಂ.ಓ ಡಾ.ಎಸ್.ಎಂ.ಕೊಟ್ರೇಶ್ ಉಪಸ್ಥಿತರಿದ್ದರು. ಡಾ. ಕೃಷ್ಣ ನಾಯಕ್ ಸ್ವಾಗತಿಸಿದರು. ಡಾ. ಶಿವು ಅರಕೆರಿ ಮತ್ತು ಡಾ. ಅಶ್ವಿನಿ ಹಳ್ಳದ್ ನಿರೂಪಿಸಿದರು. ಡಾ. ಮಮತಶ್ರೀ ವಂದಿಸಿದರು.

ಈ ಸಂದರ್ಭದಲ್ಲಿ ಮಹಾವಿದ್ಯಾಲಯದ ಅನೇಕ ಹಿರಿಯ ಹಾಗೂ ಅತ್ಯಂತ ಹಳೆಯ ವಿದ್ಯಾರ್ಥಿಗಳು ಭಾಗವಹಿಸಿ, ಸಂಸ್ಥೆಯೊಂದಿಗಿನ ತಮ್ಮ ಹಳೆಯ ನೆನಪುಗಳನ್ನು ಹಂಚಿಕೊಳ್ಳುವ ಮೂಲಕ ಸುವರ್ಣ ಸಂಭ್ರಮಕ್ಕೆ ಮತ್ತಷ್ಟು ಮೆರುಗು ತಂದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಹಳೆಯ ವಿದ್ಯಾರ್ಥಿಗಳು, ಅಧ್ಯಾಪಕ ವೃಂದ, ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಇತರರು ಭಾಗವಹಿಸಿದ್ದರು.

## ವೈದ್ಯಕೀಯ ಕಾಲೇಜು ಕಾಮಗಾರಿ ಪರಿಶೀಲಿಸಿದ ಮೊಹಸೀನ್



**ಬಾಗಲಕೋಟೆ:** ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಮೊಹಮ್ಮದ ಮೊಹಸೀನ್ ಜಿಲ್ಲಾಧಿಕಾರಿ ಸಂಗಪ್ಪ ಅವರೊಂದಿಗೆ ಬುಧವಾರ ಜಿಲ್ಲೆಯ ವೈದ್ಯಕೀಯ ಕಾಲೇಜು ಹಾಗೂ ಸಂಶೋಧನಾ ಕೇಂದ್ರ ನಿರ್ಮಾಣ ಕಾಮಗಾರಿಯ ಪರಿಶೀಲನೆ ನಡೆಸಿದರು.

ಈಗಾಗಲೇ ರೂಪಿಸಲಾದ ಯೋಜನೆಯ ಮೂಲಕ ನಡೆಯುತ್ತಿರುವ ಕಾಮಗಾರಿಗಳ ಪ್ರಗತಿಯನ್ನು ವೀಕ್ಷಿಸಿದ ಅವರು, ಕಾಮಗಾರಿ ನಿಗದಿತ ಅವಧಿಯಲ್ಲಿ ಹಾಗೂ ಗುಣಮಟ್ಟದೊಂದಿಗೆ ಪೂರ್ಣಗೊಳಿಸಲು ಗುತ್ತಿಗೆದಾರರು ಹಾಗೂ ಅಧಿಕಾರಿಗಳು ಕ್ರಮವಹಿಸಲು ತಿಳಿಸಿದರು. ವೈದ್ಯಕೀಯ ಶಿಕ್ಷಣದ ಜೊತೆಗೆ ಗುಣಮಟ್ಟ ಹೆಚ್ಚಿಸುವ ನಿಟ್ಟಿನಲ್ಲಿ ಅಗತ್ಯ ಮೂಲಸೌಕರ್ಯಗಳನ್ನು ಸಮರ್ಪಕವಾಗಿ ನಿರ್ಮಿಸುವುದು ಅತ್ಯಂತ ಮಹತ್ವಾಗಿದೆ. ಕಾಮಗಾರಿಯಲ್ಲಿ ಯಾವುದೇ ವಿಳಂಬವಾಗದಂತೆ ನಿರಂತರ ಮೇಲ್ವಿಚಾರಣೆ ನಡೆಸಬೇಕು ಎಂದರು.

ಜಿಲ್ಲಾಧಿಕಾರಿ ಸಂಗಪ್ಪ ಕಾಮಗಾರಿಯ ಪ್ರಸ್ತುತ ಹಂತ, ಇದುವರೆಗೆ ಸಾಧಿಸಿರುವ ಪ್ರಗತಿ ಹಾಗೂ ಬಾಕಿ ಇರುವ ಕೆಲಸಗಳ ಕುರಿತು ಯೋಜನೆಯ ನಕ್ಷೆಯ ಮೂಲಕ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಿಗೆ ಮಾಹಿತಿ ನೀಡಿದರು. ನಿರ್ಮಾಣ ಕಾರ್ಯವನ್ನು ವೇಗಗೊಳಿಸಿ ಸರ್ಕಾರದ ಗಡುವಿನೊಳಗೆ ಪೂರ್ಣಗೊಳಿಸಲು ಜಿಲ್ಲಾಡಳಿತ ಅಗತ್ಯ ಕ್ರಮಕೈಗೊಂಡಿದೆ ಎಂದು ತಿಳಿಸಿದರು.

ಪರಿಶೀಲನೆ ವೇಳೆಯಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಜಾನನ ಬಾಲೆ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಸೇರಿದಂತೆ ಇಗತರೆ ಅಧಿಕಾರಿಗಳು ಇದ್ದರು.

## ಹಾವು ಕಡಿದು ಮಗು ಸಾವು

**ಚಿಟಗುಪ್ಪ:** ಮನೆಯ ಮುಂಭಾಗದಲ್ಲಿ ಆಟ ಆಡುವಾಗ ಹಾವು ಕಡಿದು



13 ವರ್ಷದ ಮಗು ಸಾವಿಗೀಡಾಗಿರುವ ಘಟನೆ ಪಟ್ಟಣದ ಕುನಬಿವಾಡ ಓಣಿಯಲ್ಲಿ ನಡೆದಿದೆ. ಗುಂಡಪ್ಪ(13) ಮೃತ ಬಾಲಕ. ಮಮಿತಾ ಮತ್ತು ರಮೇಶ ಲಿಂಬಣ್ಣಿ ದಂಪತಿ ಮಗ ಗುಂಡಪ್ಪ ಜುಲೈ 22ರಂದು ಮನೆಯ ಹೊರಗಡೆ ಆಟ ಆಡುತ್ತಿದಾಗ ಹಾವು ಮಗುವಿನ ಕಾಲಿಗೆ ಕಚ್ಚಿದೆ. ಚಿಟಗುಪ್ಪ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ, ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾ ಬ್ರಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಿಸದೆ ಜುಲೈ.23ರಂದು ಮಗು ಮೃತಪಟ್ಟಿದೆ. ಈ ಕುರಿತು ಚಿಟಗುಪ್ಪ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಭ್ರಷ್ಟಚಾರ ಮುಕ್ತ ಸಮಾಜ ನಿರ್ಮಾಣಕ್ಕೆ ಕೈಜೋಡಿಸಿ



**ಬಾಗಲಕೋಟೆ:** ಭ್ರಷ್ಟಾಚಾರ ನಿರ್ಮೂಲನೆ ಹಾಗೂ ಪಾರದರ್ಶಕ ಆಡಳಿತ ವ್ಯವಸ್ಥೆ ಬಲಪಡಿಸುವ ನಿಟ್ಟಿನಲ್ಲಿ ಎಲ್ಲರೂ ಕೈಜೋಡಿಸುವ ಅಗ್ಯವಿದೆ ಎಂದು ಉಪ ಲೋಕಾಯುಕ್ತ ಬಿ.ವೀರಪ್ಪ ಹೇಳಿದರು.

ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಗುರುವಾರ ಲೋಕಾಯುಕ್ತ ಇಲಾಖೆಯಲ್ಲಿ ಬಾಕಿ ಇರುವ ಜಿಲ್ಲೆಯ ವಿವಿಧ ತಾಲೂಕಿನ ಪ್ರಕರಣಗಳ ವಿಚಾರಣೆ ಹಾಗೂ ವಿಲೇವಾರಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಾರ್ವಜನಿಕರ ಕುಂದುಕೊರತೆಗಳಿಗೆ ಸಮಯೋಜಿತವಾಗಿ ಸ್ಪಂಧಿಸುವುದು ಅಧಿಕಾರಿಗಳ ಜವಾಬ್ದಾರಿಯಾಗಿದೆ. ಅನಗತ್ಯ ವಿಳಂಬ, ನಿರ್ಲಕ್ಷ್ಯ ಹಾಗೂ ಭ್ರಷ್ಟಾಚಾರಕ್ಕೆ ಅವಕಾಶ ನೀಡದೇ ಕಾನೂನು ಬದ್ದವಾಗಿ ಕಾರ್ಯನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ಸರ್ಕಾರಿ ಕಚೇರಿಗಳಲ್ಲಿ ಪಾರದರ್ಶಕ, ಪ್ರಾಮಾಣಿಕತೆ ಹಾಗೂ ಉತ್ತರದಾಯಿತ್ವವನ್ನು ಕಾಪಾಡುವ ಮೂಲಕ ಸಾರ್ವಜನಿಕರ ವಿಶ್ವಾಸ ಗಳಿಸಬೇಕು. ಭ್ರಷ್ಟಾಚಾರ ತಡೆಗಟ್ಟುವುದು ಕೇವಲ ಲೋಕಾಯುಕ್ತ ಸಂಸ್ಥೆಯ ಹೊಣೆಗಾರಿಕೆ ಮಾತ್ರವಲ್ಲ ಸಮಾಜದ ಪ್ರತಿಯೊಬ್ಬ ನಾಗರಿಕರ ಜವಾಬ್ದಾರಿಯಾಗಿದೆ. ಸರ್ಕಾರದ ಸೇವೆಗಳಲ್ಲಿ ಯಾವುದೇ ರೀತಿಯ ಅಕ್ರಮ ಅಥವಾ ಭ್ರಷ್ಟಾಚಾರ ಕಂಡುಬಂದಲ್ಲಿ ಲೋಕಾಯುಕ್ತ ಸಂಸ್ಥೆಗೆ ಮಾಹಿತಿ ನೀಡಿದಲ್ಲಿ ಅಂತಹ ಅಧಿಕಾರಿಗಳ ಮೇಲೆ ಕ್ರಮಕೈಗೊಳ್ಳಲಾಗುವುದೆಂದು ಉಪ ಲೋಕಾಯುಕ್ತರು ತಿಳಿಸಿದರು.

ಎಲ್ಲ ಅಧಿಕಾರಿಗಳು ಕೆಟ್ಟವರಂತ ಹೇಳಲು ಆಗಲ್ಲ. ಯಾವುದೇ ಒಂದು ಇಲಾಖೆಯಲ್ಲಿ ಓರ್ವ ಭ್ರಷ್ಟ ಅಧಿಕಾರಿ ಇದ್ದರೆ ಆ ಇಲಾಖೆಗೆ ಕೆಟ್ಟ ಹೆಸರು ಬರುತ್ತದೆ. ಅಂತವರ ಮೇಲೆ ದೂರು ನೀಡಿದಲ್ಲಿ ನಿರ್ದಾಕ್ಷಣ್ಯವಾಗಿ ಕ್ರಮ ಜರುಗಿಸಲಾಗುತ್ತದೆ. ಎಲ್ಲರಿಗೂ ಸಮಬಾಳು, ಸಮಪಾಲು ಎಂದು ಕುವೆಂಪು ಅವರು ಹೇಳಿದ್ದಾರೆ. ಆದರೆ ಎಲ್ಲರಿಗೂ ಎಲ್ಲಿದೆ. ನಾವೆಲ್ಲರೂ ಸಂವಿಧಾನದಲ್ಲಿರುವ ಅಂಶಗಳನ್ನು ಪಾಲನೆ ಮಾಡಬೇಕು. ನಮ್ಮಲ್ಲಿ ದೇಶಭಕ್ತಿ ಕಡಿಮೆಯಾಗುತ್ತಿದೆ. ಜನರು ಕಾನೂನನ್ನು ಕೈಗೆ ತೆಗೆದುಕೊಳ್ಳದೇ ನಿಮ್ಮ ಕೆಲಸ ನಿಗದಿತ ಅವಧಿಯಲ್ಲಿ ಆಗದಿದ್ದರೆ ಸಂಬಂಧಪಟ್ಟವರಿಗೆ ದೂರು ಕೊಟ್ಟು ಪರಿಹರಿಸುವ ಕೆಲಸವಾಗಬೇಕು ಎಂದರು.

ಲೋಕಾಯುಕ್ತರಿಗೆ ದೂರು ನೀಡಿದರೆ ನ್ಯಾಯ ಖಂಡಿತ ದೊರೆಯುತ್ತದೆ. ತಪ್ಪಿತಸ್ಥರ ಮೇಲೆ ಕ್ರಮ ವಹಿಸಲು ಹಿಂಜರಿಯುವದಿಲ್ಲ. ಇತ್ತೀಚಿನ ದಿನಗಳಲ್ಲಿ ಶಾಸಕಾಂಗ, ಕಾರ್ಯಾಂಗ ಹಾಗೂ ನ್ಯಾಯಾಂಗವು ಬಲಹೀನವಾಗುತ್ತಿದೆ. ಇದರ ಜೊತೆಗೆ ನಾಲ್ಕನೇ ಅಂಗ ಸಹ ಸ್ವಲ್ಪ ಮಟ್ಟಿಗೆ ಉಳಿದುಕೊಂಡಿದೆ. ನ್ಯಾಯಾಂಗದ ಜೊತೆಗೆ ಪತ್ರಿಕಾರಂಗ ಬಲಪಟ್ಟರೇ ಭ್ರಷ್ಟಾಚಾರ ಮುಕ್ತ ಸಮಾಜ ನಿರ್ಮಾಣ ಮಾಡಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು. ಜಿಲ್ಲಾಧಿಕಾರಿ ಸಂಗಪ್ಪ ಅವರು ಸಹ ಮಾತನಾಡಿದರು. ಕಾರ್ಯಕ್ರಮದಲ್ಲಿ ಲೋಕಾಯುಕ್ತ ಇಲಾಖೆಯ ವಿಶೇಷ ನ್ಯಾಯಾಧೀಶ ಅರವಿಂದ, ಜಿ.ಪಂ ಸಿಇಓ ಗಜಾನನ ಬಾಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಸ್ವಪ್ನಿಲ್ ಅಹೀರೆ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಲೋಕಾಯುಕ್ತ ಇಲಾಖೆಯ ಪೊಲೀಸ್ ಅಧೀಕ್ಷಕ ನಂದಗಾವಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ, ಜಿ.ಪಂ ಉಪ ಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ಲೋಕಾಯುಕ್ತ ಡಿವಾಯ್‌ಎಸ್ಪಿ ಸುರೇಶ ರೆಡ್ಡಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕೃಷಿ ಸಾಲ ಮನ್ನಾಕ್ಕೆ ವೀರಣ್ಣ ಚರಂತಿಮಠ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ




ರಾಜ್ಯದಲ್ಲಿ ಮುಂಗಾರು ವೈಫಲ್ಯದಿಂದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು ಸರ್ಕಾರ ಕೂಡಲೇ ರೈತರ ಕೃಷಿ ಸಾಲವನ್ನು ಸಂಪೂರ್ಣ ಮನ್ನಾ ಮಾಡಿ, ಬರ ಪರಿಹಾರ ಕ್ರಮಗಳನ್ನು ತುರ್ತಾಗಿ ಕೈಗೊಳ್ಳುವಂತೆ ಮಾಜಿ ಶಾಸಕ ಡಾ.ವೀರಣ್ಣ ಚರಂತಿಮಠ ಒತ್ತಾಯಿಸಿದ್ದಾರೆ.

ಗುರುವಾರ ಭಾರತೀಯ ಜನತಾ ಪಾರ್ಟಿ ಬಾಗಲಕೋಟೆ ಮತಕ್ಷೇತ್ರದ ವತಿಯಿಂದ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಉಪಚುನಾವಣೆಯಲ್ಲಿ ಗೆಲುವು ಸಾಧಿಸಲು ರಾಜ್ಯ ಸರಕಾರದ ಇಡೀ ಸಚಿವ ಸಂಪುಟವೇ ಬಾಗಲಕೋಟೆಯಲ್ಲಿ ಬೀಡು ಬಿಟ್ಟಿತ್ತು. ಈಗ ಬರದ ಸಂಕಷ್ಟದ ಸಂದರ್ಭದಲ್ಲಿ ಜಿಲ್ಲೆಯತ್ತ ಯಾರೂ ಗಮನ ಹರಿಸುತ್ತಿಲ್ಲ. ಇದು ರೈತರ ಬಗ್ಗೆ ಸರ್ಕಾರಕ್ಕೆ ಇರುವ ನಿರ್ಲಕ್ಷ್ಯ ಭಾವವನ್ನು ತೋರಿಸುತ್ತದೆ ಎಂದು ಆರೋಪಿಸಿದರು.

ರಾಜ್ಯದಲ್ಲಿ ಜೂನ್ ತಿಂಗಳಲ್ಲಿ ಶೇ.45ರಷ್ಟು ಮಳೆ ಕೊರತೆಯಾಗಿದ್ದು, ಗ್ರಾಮೀಣ ಜನರ ಆರ್ಥಿಕತೆಗೆ ಭಾರೀ ಹೊಡೆತ ಬಿದ್ದಿದೆ. ಬಿತ್ತನೆಗೆ ಸಿದ್ಧರಾಗಿದ್ದ ರೈತರು ಮಳೆ ಕೊರತೆಯಿಂದ ಬಿತ್ತನೆ ನಡೆಸಲಾಗದೆ ಸಂಕಷ್ಟದಲ್ಲಿದ್ದಾರೆ. ಹಲವೆಡೆ ಸಾಲ ಮಾಡಿ ಬಿತ್ತನೆ ಮಾಡಿದ್ದರೂ ಬೆಳೆ ಮೊಳಕೆಯೊಡೆಯದೇ ಒಣಗಿದ್ದು ಆತಂಕದಲ್ಲಿದ್ದಾರೆ ಎಂದು ಹೇಳಿದ ಚರಂತಿಮಠ, ರಾಜ್ಯ ಸರಕಾರ ಕೂಡಲೇ ರೈತರ ನೆರವಿಗೆ ಬರಬೇಕು ಎಂದರು.

ಬರಗಾಲದ ಹಿನ್ನೆಲೆಯಲ್ಲಿ ಕುಡಿಯುವ ನೀರು ಹಾಗೂ ಜಾನುವಾರುಗಳಿಗೆ ಮೇವು ಸಮಸ್ಯೆ ಗಂಭೀರವಾಗಿದೆ. ಸರ್ಕಾರ ತಕ್ಷಣ ಪರ್ಯಾಯ ಬೆಳೆ ಬೀಜ, ರಸಗೊಬ್ಬರ, ಹನಿ ನೀರಾವರಿ, ಬೆಳೆ ವಿಮೆ, ಮೇವು ಬ್ಯಾಂಕ್ ಹಾಗೂ ಕುಡಿಯುವ ನೀರಿನ ಯೋಜನೆಗಳನ್ನು ಜಾರಿಗೊಳಿಸಬೇಕು. ಮೇವು ಬ್ಯಾಂಕ್ ಸ್ಥಾಪನೆ ಸೇರಿದಂತೆ ಬರ ನಿರ್ವಹಣೆಯಲ್ಲಿ ಸರ್ಕಾರ ಸಂಪೂರ್ಣ ವಿಫಲವಾಗಿದೆ. ಬೆಳೆ ವಿಮೆ ನೋಂದಣಿ ಅವಧಿಯನ್ನು ವಿಸ್ತರಿಸದೇ ಹಾಗೂ ಪ್ರಕ್ರಿಯೆಯನ್ನು ಸರಳೀಕರಿಸದೇ ಇರುವುದರಿಂದ ಅನೇಕ ರೈತರು ವಿಮೆ ಸೌಲಭ್ಯದಿಂದ ವಂಚಿತರಾಗಿದ್ದಾರೆ ಎಂದು ದೂರಿದರು.

ಬಿಡದಿ ಸ್ಮಾರ್ಟ್ ಸಿಟಿ ಯೋಜನೆಗಾಗಿ 7,481 ಎಕರೆ ಫಲವತ್ತಾದ ಕೃಷಿ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಸರಕಾರ ಮುಂದಾಗಿರುವುದು ರೈತರ ಹಿತಾಸಕ್ತಿಗೆ ವಿರುದ್ಧವಾಗಿದೆ. ಪ್ರತಿಭಟನೆ ನಡೆಸಿದ ರೈತರ ವಿರುದ್ಧ ಎಫ್‌ಐಆರ್ ದಾಖಲಿಸಿರುವುದು ಖಂಡನೀಯವಾಗಿದೆ, ಉತ್ತರ ಕರ್ನಾಟಕದ ಬಳ್ಳಾರಿ, ಕೊಪ್ಪಳ, ರಾಯಚೂರು, ಕಲಬುರಗಿ, ಬೀದರ್ ಹಾಗೂ ಬಾಗಲಕೋಟೆ ಜಿಲ್ಲೆಗಳಲ್ಲಿ ಭೀಕರ ಬರದಿಂದ ಲಕ್ಷಾಂತರ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯೇ ಆಗಿಲ್ಲ. ಇಂತಹ ರೈತರಿಗೆ ಎಕರೆಗೆ 50 ಸಾವಿರ ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು.

ಬಾಗಲಕೋಟೆ ನಗರದಲ್ಲಿ ಮೂರನೇ ಯುನಿಟ್ ಕಾಮಗಾರಿಗಾಗಿ ಸರ್ಕಾರ ವಶಪಡಿಸಿಕೊಂಡಿರುವ ಭೂಮಿಯ ರೈತರಿಗೆ ಯಾವುದೇ ವಿಳಂಬವಿಲ್ಲದೆ ಸೂಕ್ತ ಪರಿಹಾರವನ್ನು ಕೂಡಲೇ ಬಿಡುಗಡೆ ಮಾಡಬೇಕು. ಅಲ್ಲದೆ, ಆಲಮಟ್ಟಿ ಜಲಾಶಯದ ಎತ್ತರ 524.256 ಮೀಟರ್ ಈಗಾಗಲೆ ಸಿದ್ದವಿದೆ, ಆದರೆ ಈ ಯೋಜನೆಗೆ 80 ಸಾವಿರ ಕೋಟಿ ವೆಚ್ಚವಾಗುತ್ತದೆ ಎಂದು ಜಲಸಂಪನ್ಮೂಲ ಸಚಿವರು ಯಾವ ಆಧಾರದ ಮೇಲೆ ಹೇಳಿಕೆ ನೀಡಿದ್ದಾರೆ ಎಂಬುದನ್ನು ಸರ್ಕಾರ ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ಎಸ್ಸಿ ಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ರಾಜು ನಾಯ್ಕರ, ಜಿಲ್ಲಾ ಮಾಧ್ಯಮ ವಕ್ತಾರ ಸತ್ಯನಾರಾಯಣ ಹೇಮಾದ್ರಿ, ನಗರ ಮಂಡಲ ಅಧ್ಯಕ್ಷ ಬಸವರಾಜ ಹುನಗುಂದ ಹಾಗೂ ಶ್ರೀಧರ ನಾಗರಬೆಟ್ಟ ಇದ್ದರು.

# ಮತದಾರರ ಪಟ್ಟಿ ಸಿದ್ಧತೆಗೆ ಸಹಕಾರ ಅಗತ್ಯ: ಜಿಲ್ಲಾಧಿಕಾರಿ ಸಂಗಪ್ಪ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ



ದೋಷರಹಿತ ಹಾಗೂ ಪಾರದರ್ಶಕ ಮತದಾರರ ಪಟ್ಟಿ ಸಿದ್ಧಪಡಿಸುವಲ್ಲಿ ವಿವಿಧ ರಾಜಕೀಯ ಪಕ್ಷಗಳು ಮತ್ತು ಸಾರ್ವಜನಿಕರ ಸಹಕಾರ ಅಗತ್ಯವಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ಸಂಗಪ್ಪ ಅವರು ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಕುರಿತು ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ವಿಶೇಶ ಸಮಗ್ರ ಪರಿಷ್ಕರಣೆ ಕಾರ್ಯ ನಡೆಯುತ್ತಿದ್ದು, ಯಾವುದೇ ಗೊಂದಲಗಳಿಲ್ಲದೆ ನಿಖರವಾದ ಹಾಗೂ ಪರಿಶುದ್ದವಾದ ಮತದಾರರ ಪಟ್ಟಿ ತಯಾರಿಸಲು ರಾಜಕೀಯ ಪಕ್ಷಗಳ ಸಹಕಾರ ಅಗತ್ಯವಾಗಿದೆ ಎಂದರು. ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯದಂತೆ ಹಾಗೂ ದೋಷ ಸರಿಪಡಿಸುವ ನಿಟ್ಟಿನಲ್ಲಿ ಎಲ್ಲರೂ ಜವಾಬ್ದಾರಿಯಿಂದ ಕೆಲಸ ಮಾಡಬೇಕು. ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ಪ್ರಗತಿಯಲ್ಲಿದ್ದು, ಮತಗಟ್ಟೆ ಮಟ್ಟದ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ನಿಖರ ಮಾಹಿತಿ ಸಂಗ್ರಹಿಸುತ್ತಿದ್ದಾರೆ. ರಾಜಕೀಯಕ ಪಕ್ಷಗಳ ಏಜೆಂಟರುಗಳು ಸೂಕ್ತ ಸಹಕಾರ ನೀಡಬೇಕು. ಎಸ್.ಐ.ಆರ್ ನೋಂದಣಿಯ ಮಹತ್ವದ ಕುರಿತು ವಿವಿಧ ಜಾಗೃತಿ ಅಭಿಯಾನಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಮತಗಟ್ಟೆವಾರು ಮತದಾರರ ಪಟ್ಟಿಯನ್ನು ರಾಜಕೀಯ ಪಕ್ಷಗಳಿಗೆ ನೀಡಲಾಗಿದೆ. ಚುನಾವಣಾ ಆಯೋಗದ ನಿರ್ದೇಶನದಂತೆ ಈ ಕಾರ್ಯಕ್ಕೆ ತಮ್ಮ ಸಹಕಾರ ಅಗತ್ಯ. ಎಂದು ಜಿಲ್ಲಾಧಿಕಾರಿಗಳು ರಾಜಕೀಯ ಪ್ರತಿನಿಧಿಗಳಿಗೆ ಮನವಿ ಮಾಡಿದರು. ಬಿಎಲ್‌ಎ ಅವರು ಅತ್ಯುತ್ತಮ ಕಾರ್ಯ ನಿರ್ವಹಿಸುತ್ತಿದ್ದು ನಾವು ಈ ಪ್ರಕ್ರಿಯೆಯಲ್ಲಿ ನಿಗಾ ವಹಿಸಲಾಗುತ್ತಿದೆ. ಗಣತಿ ನಮೂನೆಗಳನ್ನು ಶೇ.100 ರಷ್ಟು ಪ್ರಗತಿ ಸಾಧಿಸಲಾಗಿದೆ. ಗಣಕೀಕರಣ ಕಾರ್ಯವು 70.79 ರಷ್ಟು ಆಗಿರುತ್ತದೆ ಎಂದು ಸಂಗಪ್ಪ ತಿಳಿಸಿದರು.

ಈಗಾಗಲೇ 39,136 ಮತದಾರರನ್ನು ಸ್ಥಳಾಂತರಿಸಲಾಗಿದೆ. ಡಬಲ್ ಇದ್ದವರು 8475, ಇತರೆ 343 ಇದ್ದು, ಗಣತಿ ಕಾರ್ಯದಲ್ಲಿ ಗೈರು ಹಾಜರಿದ್ದವರ ಸಂಖ್ಯೆ 949 ಇದೆ. ಇದರ ಪಟ್ಟಿಯನ್ನು ಬೂತ ಮಟ್ಟದ ಏಜೆಂಟರಗಳಿಗೆ ನೀಡಿದ್ದು, ಮತದಾರರ ವಿವರ ಕುರಿತು ಆಕ್ಷೇಪಣೆಗಳು ಇದ್ದಲ್ಲಿ ಮತಗಟ್ಟೆ ಮಟ್ಟದ ಅಧಿಕಾರಿಗಳಿಗೆ ಸಲ್ಲಿಸಿ ಸರಿಪಡಿಸಿಕೊಳ್ಳಬಹುದಾಗಿದೆ. ಗಣಕೀಕರಣ ಕಾರ್ಯ ಇನ್ನು ಶೇ.30 ರಷ್ಟು ಬಾಕಿ ಉಳಿದಿದ್ದು, ರಾಜಕೀಯ ಪಕ್ಷದ ಪ್ರತಿನಿಧಿಗಳು ತಮ್ಮ ಪಕ್ಷದ ಬೂತ ಮಟ್ಟದ ಏಜೆಂಟರುಗಳಿಗೆ ಹೆಚ್ಚಿನ ಪ್ರಗತಿಯನ್ನು ಸಾಧಿಸುವ ಮೂಲಕ ಮತಗಟ್ಟೆ ಅಧಿಕಾರಿಗಳಿಗೆ ಸಹಕಾರ ನೀಡುವಂತೆ ಜಿಲ್ಲಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಉಪವಿಭಾಗಾಧಿಕಾರಿ ಮಹೇಶ ಮಾಲಗಿತ್ತಿ, ತಹಶೀಲ್ದಾರ ವಾಸುದೇವ ಸ್ವಾಮಿ, ಚುನಾವಣಾ ವಿಭಾಗದ ಮಹೇಶ ಪಾಂಡವ ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ನವನಗರ ಬಸ್ ನಿಲ್ದಾಣ ಅವ್ಯವಸ್ಥೆ: ಸು ಮೋಟೊ ದಾಖಲು

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ



ಬಾಗಲಕೋಟೆ ಜಿಲ್ಲೆಯಲ್ಲಿ ಗುರುವಾರ ಪ್ರವಾಸ ಕೈಗೊಂಡಿರುವ ರಾಜ್ಯದ ಉಪ ಲೋಕಾಯುಕ್ತ ಬಿ. ವೀರಪ್ಪ ಬಾಗಲಕೋಟೆ ನವನಗರ ಬಸ್ ನಿಲ್ದಾಣಕ್ಕೆ ಭೇಟಿ ನೀಡಿ ಅಲ್ಲಿನ ವ್ಯವಸ್ಥೆಯನ್ನು ಪರಿಶೀಲಿಸಿದರು.

ಈ ಸಮಯದಲ್ಲಿ ಶಾಲಾ-ಕಾಲೇಜು ವಿದ್ಯಾರ್ಥಿಗಳು ಸಮಯಕ್ಕೆ ಸರಿಯಾಗಿ ಬಸ್ ಸೌಲಭ್ಯ ದೊರೆಯುತ್ತಿಲ್ಲ. ಹೀಗಾಗಿ ಪ್ರತಿದಿನ ತರಗತಿಗಳಿಗೆ ಹೋಗಲು ತಡವಾಗುತ್ತಿದೆ ಎಂದು ದೂರಿದರು. ವಿದ್ಯಾರ್ಥಿಗಳ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿದ ಉಪ ಲೋಕಾಯುಕ್ತರು, ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ಆಗದಂತೆ ಕ್ರಮವಹಿಸಬೇಕು ಎಂದು ಸಾರಿಗೆ ಸಂಸ್ಥೆ ಅಧಿಕಾರಿಗಳಿಗೆ ತಾಕೀತು ಮಾಡಿದರು.

ನವನಗರ ಬಸ್ ನಿಲ್ದಾಣದಲ್ಲಿನ ಅವ್ಯವಸ್ಥೆ, ಸಮರ್ಪಕ ಬಸ್ ಸಂಚಾರದ ಕೊರತೆ ಹಾಗೂ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ, ಅಂಗಡಿಗಳಲ್ಲಿನ ಅವಧಿ ಮುಗಿದ ಜ್ಯೂಸ್ ಬಾಟಲ್, ಹೋಟೆಲ್‌ನಲ್ಲಿ ತಿಂಡಿ ಪದಾರ್ಥಗಳನ್ನು ತೆರೆದಿಟ್ಟಿರುವುದನ್ನು ಕಂಡು ಸು ಮೋಟೋ ದಾಖಲಿಸಿದರು.

ಬಸ್ ಸಂಚಾರದ ವಿಳಂಬದಿಂದ ವಿದ್ಯಾರ್ಥಿಗಳ ಶೈಕ್ಷಣಿಕ ವ್ಯವಸ್ಥೆಯ ಮೇಲೆ ಪ್ರತಿಕೂಲ ಪರಿಣಾಮ ಉಂಟಾಗುತ್ತದೆ. ಶಾಲಾ -ಕಾಲೇಜು ಆರಂಭ ಮತ್ತು ಮುಕ್ತಾಯದ ವೇಳೆಗೆ ಅಗತ್ಯ ಪ್ರಮಾಣದಲ್ಲಿ ಬಸ್‌ಗಳನ್ನು ಓಡಿಸಬೇಕು. ನಿಲ್ದಾಣದಲ್ಲಿ ಪ್ರಯಾಣಿಕರಿಗೆ ಅಗತ್ಯ ಸೌಕರ್ಯಗಳನ್ನು ಕಲ್ಪಿಸಬೇಕು ಎಂದು ಸಾರಿಗೆ ಸಂಸ್ಥೆಯ ವಿಭಾಗೀಯ ನಿಯಂತ್ರಣಾಧಿಕಾರಿ ಎನ್.ಟಿ.ಪಾಟೀಲ ಅವರಿಗೆ ಸೂಚಿಸಿದರು.

ಈ ಎಲ್ಲ ವಿಷಯಗಳ ಕುರಿತಾಗಿ ಶೀಘ್ರವಾಗಿ ಸ್ಪಂದಿಸಿ ನಿಗದಿತ ಅವಧಿಯಲ್ಲಿ ಅಗತ್ಯ ಕ್ರಮ ಕೈಗೊಂಡು ವರದಿ ಸಲ್ಲಿಸುವಂತೆ ಉಪ ಲೋಕಾಯುಕ್ತರು ಸೂಚಿಸಿದರು. ಉಪ ಲೋಕಾಯುಕ್ತರ ಆಪ್ತ ಕಾರ್ಯದರ್ಶಿ ಹಾಗೂ ಶೆಷನ್ಸ್ ಜಡ್ಜ್ ಅರವಿಂದ, ಜಿಲ್ಲಾಧಿಕಾರಿ ಸಂಗಪ್ಪ, ಜಿಪಂ ಸಿಇಓ ಗಜಾನನ ಬಾಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಲೋಕಾಯುಕ್ತ ಇಲಾಖೆಯ ಎಸ್.ಪಿ ನಂದಗಾಂವಿ, ಡಿವಾಯ್.ಎಸ್.ಪಿ ಸುರೇಶ ರೆಡ್ಡಿ, ಉಪ ವಿಭಾಗಾಧಿಕಾರಿ ಮಹೇಶ ಮಾಲಗಿತ್ತಿ, ತಹಶೀಲ್ದಾರ ವಾಸುದೇವ ಸ್ವಾಮಿ ಸೇರಿದಂತೆ ಇತರರು ಇದ್ದರು.

# ಗ್ಯಾರಂಟಿ ಅನುಷ್ಠಾನದಲ್ಲಿ ಸಮನ್ವಯ ಅಗತ್ಯ: ಅನಿಲ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ



ಸರಕಾರದ ಮಹತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನಕ್ಕೆ ಇಲಾಖೆಯ ಅಧಿಕಾರಿಗಳು ಹಾಗೂ ಸಮಿತಿಯ ಸದಸ್ಯರ ನಡುವೆ ಸಮನ್ವಯ ಅಗತ್ಯವಾಗಿದೆ ಎಂದು ಗ್ಯಾರಂಟಿ ಯೋಜನೆಗಳ ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿಯ ಅಧ್ಯಕ್ಷ ಅನೀಲಕುಮಾರ ದಿಡ್ಡಿ ಹೇಳಿದರು.

ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಬುಧವಾರ ಜರುಗಿದ ಗ್ಯಾರಂಟಿ ಯೋಜನೆಗಳ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಸರಕಾರ ಮಟ್ಟದಿಂದ ಬರುವ ನಿರ್ದೇಶನಗಳನ್ನು ಜಿಲ್ಲಾ ಹಾಗೂ ತಾಲೂಕಾ ಮಟ್ಟದ ಸಮಿತಿಯ ಸದಸ್ಯರು ತಪ್ಪದೇ ಪಾಲನೆ ಮಾಡಬೇಕು. ಇತ್ತೀಚೆಗೆ ಮುಖ್ಯಮಂತ್ರಿಗಳು ರಾಜ್ಯ ಮಟ್ಟದಲ್ಲಿ ರಾಜ್ಯದ ಎಲ್ಲ ಜಿಲ್ಲೆಗಳ ಅಧ್ಯಕ್ಷರುಗಳ ಸಭೆ ನಡೆಸಿ ಸರಕಾರ ಗ್ಯಾರಂಟಿ ಯೋಜನೆಗಳಿಗೆ ಹೆಚ್ಚಿನ ಮಹತ್ವ ಕೊಡಲಾಗುತ್ತಿದ್ದು, ಅಧ್ಯಕ್ಷರುಗಳು ಹೆಚ್ಚಿನ ಜವಾಬ್ದಾರಿಯಿಂದ ಕೆಲಸ ನಿರ್ವಹಿಸಲು ತಿಳಿಸಿದ್ದಾರೆ ಎಂದರು.

ತಾಲೂಕಾ ಮಟ್ಟದ ಅನುಷ್ಠಾನ ಸಮಿತಿಯವರು ಗ್ಯಾರಂಟಿ ಯೋಜನೆ ಅನುಷ್ಠಾನ ಇಲಾಖೆಯ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸುವ ಮೂಲಕ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕು. ಕ್ರೀಯಾಶೀಲರಾಗಿ ಕೆಲಸ ನಿರ್ವಹಿಸಲು ತಿಳಿಸಿದ ಅವರು ಪ್ರತಿಯೊಬ್ಬ ಅರ್ಹ ಫಲಾನುಭವಿಗಳಿಗೂ ಯೋಜನೆಗಳ ಲಾಭ ತಲುಪಿಸುವಲ್ಲಿ ಅಧಿಕಾರಿಗಳು ಹೆಚ್ಚಿನ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು.

ಗೃಹಲಕ್ಷ್ಮೀ ಯೋಜನೆಯಡಿ ಒಟ್ಟು 406491 ಫಲಾನುಭವಿಗಳು ಪ್ರಯೋಜನ ಪಡೆಯುತ್ತಿದ್ದು, ಮೇ. 2026 ಮಾಹೆಯವರೆಗೆ ಹಣ ಜಮೆ ಆಗಿರುತ್ತದೆ. ಜಿಲ್ಲೆಯಲ್ಲಿ 9399 ಫಲಾನುಭವಿಗಳು ಮೃತಪಟ್ಟಿದ್ದು, ಈ ಪೈಕಿ 3611 ಜನರಿಗೆ ಯೋಜನೆಯ ಮೊತ್ತ ಇನ್ನು ಜಮೆ ಆಗುತ್ತಿದೆ. ಜಮೆ ಆಗಿರುವ ಮೊತ್ತದಲ್ಲಿ ಈಗಾಗಲೇ 27 ಲಕ್ಷ ರೂ.ಗಳನ್ನು ಮರಳಿ ಸರಕಾರಕ್ಕೆ ಜಮೆ ಮಾಡಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಕೆ.ಪ್ರಭಾಕರ ಸಭೆಗೆ ತಿಳಿಸಿದರು.

ಮೃತರಿಗೆ ಜಮೆಯಾದ ಬಾಕಿ ಮೊತ್ತವನ್ನು ಮರಳಿ ಜಮೆ ಮಾಡಲು ಕ್ರಮವಹಿಸಲು ಸಮಿತಿಯ ಅಧ್ಯಕ್ಷರು ತಿಳಿಸಿದರು. ಗೃಹಜ್ಯೋತಿ ಯೋಜನೆಯಡಿ 435672 ಗೃಹ ಬಳಕೆಯ ಸ್ಥಾವರಗಳು ಪ್ರಯೋಜನ ಪಡೆಯುತ್ತಿದ್ದು, ಗೃಹ ಜ್ಯೋತಿ 2.0 ಯೋಜನೆಯಡಿ 437379 ಸ್ಥಾವರಗಳ ಪೈಕಿ 187047 ಸ್ಥಾವರಗಳ ಅಪ್‌ಡೇಶನ್ ಮಾಡಲಾಗಿದೆ. ಬಾಕಿ 250332 ಸ್ಥಾವರಗಳು ಉಳಿದಿದ್ದು, ಅಪ್‌ಡೇಶನ್ ಕಾರ್ಯ ಪ್ರಗತಿಯಲ್ಲಿದ್ದು, ಹುಬ್ಬಳ್ಳಿ ಹೆಸ್ಕಾ ವಿಭಾಗದಲ್ಲಿ ಪ್ರಥಮ ಸ್ಥಾನದಲ್ಲಿದೆ. ಬಾಕಿ ಕಾರ್ಯವನ್ನು ಆಗಸ್ಟ 10 ರೊಳಗಾಗಿ ಈ ಕಾರ್ಯ ಪೂರ್ಣಗೊಳಿಸಲಾಗುವುದೆಂದು ಹೆಸ್ಕಾಂ ಅಧೀಕ್ಷಕ ಕಾರ್ಯನಿರ್ವಾಹಕ ಅಭಿಯಂತರ ಸಿ.ಬಿ.ಯಂಕಂಚಿ ಸಭೆಗೆ ತಿಳಿಸಿದರು.

ಶಕ್ತಿ ಯೋಜನೆಯಡಿ ಉಚಿತ ಬಸ್ ಪ್ರಯಾಣದ ಸೌಲಭ್ಯ ಮಹಿಳೆಯರಿಗೆ ಸಮರ್ಪಕವಾಗಿ ದೊರೆಯುವಂತೆ ಆಗಬೇಕು. ಶಾಲಾ-ಕಾಲೇಜು ಮಕ್ಕಳಿಗೆ ಬಸ್ ಸೌಲಭ್ಯ ದೊರೆಯುವಂತೆ ಆಗಬೇಕು. ಗ್ರಾಮೀಣ ಭಾಗದಲ್ಲಿ ಹೆಚ್ಚಿನ ಬಸ್ ವ್ಯವಸ್ಥೆ ಕಲ್ಪಿಸಲು ತಿಳಿಸಲಾಯಿತು. ಯುವನಿಧಿ ಯೋಜನೆಯಡಿ 2024 ಫಲಾನುಭವಿಗಳು ಎರಡು ವರ್ಷಗಳ ವರೆಗೆ ಪ್ರಯೋಜನ ಪಡೆದುಕೊಂಡಿದ್ದಾರೆ ಎಂದು ಸಭೆಗೆ ತಿಳಿಸಲಾಯಿತು. ವಿದ್ಯಾರ್ಥಿಗಳಿಗೆ ತೊಂದರೆಯಾಗದ ರೀತಿಯಲ್ಲಿ ಬಸ್‌ಗಳನ್ನು ಕಾರ್ಯಾಚರಣೆಗೊಳಿಸಲು ಜಿ.ಪಂ ಸಿಇಓ ತಿಳಿಸಿದರು. ಅನ್ನಭಾಗ್ಯ ಯೋಜನೆಯಡಿ ಅಕ್ಕಿಯ ಜೊತೆ ಜೋಳ ವಿತರಣೆ ಮಾಡಲಾಗುತ್ತಿದೆ. ಪಡಿತರದಾರರಿಗೆ ವಿತರಿಸಿದ ಆಹಾರಧಾನ್ಯವನ್ನು ಕಾಳಸಂತೆಯಲ್ಲಿ ಮಾರಾಟವಾಗದಂತೆ ಕ್ರಮವಹಿಸಲಾಗುತ್ತಿದೆ. ಪ್ರಸಕ್ತ ವರ್ಷದಲ್ಲಿ 18 ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಗ್ಯಾರಂಟಿ ಯೋಜನೆಯ ಅನುಷ್ಠಾನ ಸಮಿತಿಯ ಜಿಲ್ಲಾ ಉಪಾಧ್ಯಕ್ಷ ಶಂಕರಪ್ಪ ನೇಗಲಿ, ಸದಸ್ಯರಾದ ಜಯಶ್ರೀ ತಿಮ್ಮಾಪೂರ, ಶಿವಪ್ಪ ಕೋನೇರಿ, ರವೀಂದ್ರ ಯಡಹಳ್ಳಿ ಸೇರಿದಂತೆ ಗ್ಯಾರಂಟಿ ಯೋಜನೆಯ ಅನುಷ್ಠಾನ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಜು.26ರಂದು ಚಿಮ್ಮಿದ ಬುಗ್ಗೆ ಕೃತಿ ಲೋಕಾರ್ಪಣೆ, ಕವಿಗೋಷ್ಠಿ ಹಾಗೂ ಗಣ್ಯರಿಗೆ ಸನ್ಮಾನ

**ಬೀದರ್:** ಜನಪರ ಸಾಂಸ್ಕೃತಿಕ ಪ್ರತಿಷ್ಠಾನ, ಬೀದರ ವತಿಯಿಂದ ಜಿಲ್ಲೆಯ ಉದಯೋನ್ಮುಖ ಕವಿ ಹಾಗೂ ಲೇಖಕರಾದ ಅಶ್ವಜೀತ



ದಂಡಿನ ಅವರ 'ಚಿಮ್ಮಿದ ಬುಗ್ಗೆ' ಕೃತಿ ಲೋಕರ್ಪಣೆ ಸಮಾರಂಭ, ಕವಿಗೋಷ್ಠಿ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಗಣ್ಯರಿಗೆ ಗೌರವ ಸನ್ಮಾನ ಕರ್ಯಕ್ರಮವು ಜುಲೈ 26ರಂದು (ರವಿವಾರ) ಬೆಳಿಗ್ಗೆ 11 ಗಂಟೆಗೆ ನಗರದ ಗುರುನಾನಕ ಗೇಟ್ ಎದುರಿನ ಹೋಟೆಲ್ ಕೃಷ್ಣ ರೆಜೆನ್ಸಿಯಲ್ಲಿ ನಡೆಯಲಿದೆ.

ಕರ್ಯಕ್ರಮವನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಸುರೇಶ ಚನ್ನಶೆಟ್ಟಿ ಉದ್ಘಾಟಿಸಲಿದ್ದು, ರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರು ಹಾಗೂ ಜನಪರ ಸಾಂಸ್ಕೃತಿಕ ವೇದಿಕೆಯ ಸಂಚಾಲಕರಾದ ಡಾ. ಸಂಜೀವಕುಮಾರ ಅತಿವಾಳೆ ಅಧ್ಯಕ್ಷತೆ ವಹಿಸಲಿದ್ದಾರೆ.

ಪ್ರೊ. ಮಯೂರ ಬಸವರಾಜ ಅವರು 'ಚಿಮ್ಮಿದ ಬುಗ್ಗೆ' ಕೃತಿಯನ್ನು ಲೋಕರ್ಪಣೆ ಮಾಡಲಿದ್ದು, ಸಾಹಿತಿ ಬಿ.ಜೆ. ಪರ್ವತಿ ವಿ. ಸೋನಾರೆ ಅವರು ಕೃತಿ ಪರಿಚಯ ಮಾಡಿಕೊಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಜಿಲ್ಲಾ ಅಧ್ಯಕ್ಷ ಅಮೃತರಾವ ಚಿಮಕೋಡೆ, ಮರ್ಗದಾತ ದಿನಪತ್ರಿಕೆಯ ಸಂಪಾದಕ ಡಾ. ಕಾಶಿನಾಥ ಚೆಲ್ವಾ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಕರ್ಯರ್ತೆ ಎಂ.ಎಸ್. ಮನೋಹರ, ರ್ಕಾರಿ ನೌಕರರ ಸಂಘದ ಜಿಲ್ಲಾ ಖಜಾಂಚಿ ದೇವಪ್ಪ ಚಾಂಬಳೆ ಮಾಳೆಗಾಂವ ಹಾಗೂ ಸಾಹಿತಿ ಡಾ. ಸುಬ್ಬಣ್ಣ ಕರಕನಳ್ಳಿ ಭಾಗವಹಿಸಲಿದ್ದಾರೆ.

ಕರ್ಯಕ್ರಮದಲ್ಲಿ ವಿಜಯಪುರದ ಶಶಿರೇಖಾ ವಿರಕ್ತಮಠ ಹಾಗೂ ಕೃತಿಕಾರ ಅಶ್ವಜೀತ ದಂಡಿನ ಉಪಸ್ಥಿತರಿರಲಿದ್ದಾರೆ. ಇದೇ ಸಂರ್ಭದಲ್ಲಿ ಜಿಲ್ಲೆಯ ವಿವಿಧ ಭಾಗಗಳ ಕವಿಗಳಿಂದ ಕವಿಗೋಷ್ಠಿ ನಡೆಯಲಿದ್ದು, ಕವಿಗೋಷ್ಠಿಯಲ್ಲಿ ಹಲವಾರು ಕವಿಗಳು ತಮ್ಮ ಸ್ವರಚಿತ ಕವನ ವಾಚನ ಮಾಡಲಿದ್ದಾರೆ. ಇದಲ್ಲದೆ, ಸಮಾಜ, ಸಾಹಿತ್ಯ, ಶಿಕ್ಷಣ, ಜಾನಪದ ಕಲೆ ಹಾಗೂ ಸರ್ವಜನಿಕ ಸೇವಾ ಕ್ಷೇತ್ರಗಳಲ್ಲಿ ವಿಶಿಷ್ಟ ಸೇವೆ ಸಲ್ಲಿಸಿರುವ ವಿವಿಧ ಗಣ್ಯರನ್ನು ಇದೇ ಸಂರ್ಭದಲ್ಲಿ ಗೌರವ ಸನ್ಮಾನ ಮಾಡಲಾಗುವುದು. ಸಾಹಿತ್ಯಾಸಕ್ತರು, ಕವಿಗಳು ಹಾಗೂ ಸರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಜನಪರ ಸಾಂಸ್ಕೃತಿಕ ಪ್ರತಿಷ್ಠಾನದ ಸಂಚಾಲಕರಾದ ಡಾ. ಸಂಜೀವಕುಮಾರ ಅತಿವಾಳೆ ಅವರು ಪ್ರಕಟಣೆಯಲ್ಲಿ ತಿಳಿಸಿದೆ.

## ಸಾರ್ವಜನಿಕರಿಗಾಗಿ ಉಚಿತ ಸಮಗ್ರ ಆರೋಗ್ಯ ತಪಾಸಣಾ ಶಿಬಿರ



**ಸಿಂಧನೂರು:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ರಾಜ್, ಕರ್ನಾಟಕ ರಾಜ್ಯ ಏಡ್ಸ್ ನಿಯಂತ್ರಣ ಸಂಸ್ಥೆ (ಬೆಂಗಳೂರು), ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ತಡೆ ಮತ್ತು ನಿಯಂತ್ರಣ ಘಟಕ (ರಾಯಚೂರು), ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿ (ಸಿಂಧನೂರು), ಐಸಿಟಿಸಿ ಕೇಂದ್ರ (ಸಿಂಧನೂರು), ಮೊಬೈಲ್ ಐಸಿಟಿಸಿ (ರಾಯಚೂರು), ಪ್ರಾಥಮಿಕ ಆರೋಗ್ಯ ಕೇಂದ್ರ (ಗಾಂಧಿನಗರ), ಗ್ರಾಮ ಪಂಚಾಯಿತಿ (ಗಾಂಧಿನಗರ), ಹೊಸಬೆಳಕು ಹೆಲ್ತ್‌ಕೇರ್ ಇಂಡಿಯಾ, ಸೆಂಟಲೂಕ್ ಹಾಗೂ ವಿವಿಧ ಸಂಘ–ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಇಂದು ಗಾಂಧಿನಗರದಲ್ಲಿ ಸಮಗ್ರ ಆರೋಗ್ಯ ತಪಾಸಣಾ ಶಿಬಿರವನ್ನು ಅತ್ಯಂತ ಯಶಸ್ವಿಯಾಗಿ ಹಮ್ಮಿಕೊಳ್ಳಲಾಯಿತು.

ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ ಆಯುಷ್ ವೈದ್ಯಾಧಿಕಾರಿ ಡಾ. ಸೀಮಾ, ಗ್ರಾಮದ ಹಿರಿಯ ನಾಗರಿಕರು ಈ ಉಚಿತ ಶಿಬಿರದ ಸದುಪಯೋಗ ಪಡೆದುಕೊಂಡು ಟಿಬಿ, ಮಧುಮೇಹ ಹಾಗೂ ರಕ್ತದೊತ್ತಡದಂತಹ ಕಾಯಿಲೆಗಳಿಗೆ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ತಿಳಿಸಿದರು. ಶ್ರೀಮತಿ ಗೀತಾ ಹಿರೇಮಠ್ ಮಾತನಾಡಿ, 30 ವರ್ಷ ಮೇಲ್ಪಟ್ಟ ಪ್ರತಿಯೊಬ್ಬರೂ ಕಡ್ಡಾಯವಾಗಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು. ಮಧುಮೇಹಕ್ಕೆ ಸರಿಯಾದ ಚಿಕಿತ್ಸೆ ಪಡೆಯದಿದ್ದರೆ ಅದು ಹೃದಯ ಮತ್ತು ಮೂತ್ರಪಿಂಡದ ಕಾಯಿಲೆಗಳಿಗೆ ದಾರಿ ಮಾಡಿಕೊಡುತ್ತದೆ ಎಂದು ಎಚ್ಚರಿಸಿದರು. ಇದೇ ವೇಳೆ ಕ್ಷಯ ರೋಗದ ಲಕ್ಷಣಗಳ ಬಗ್ಗೆಯೂ ಮಾಹಿತಿ ನೀಡದರು. ಜೊತೆಗೆ ಶಿಬಿರದಲ್ಲಿ ಸಾರ್ವಜನಿಕರಿಗೆ ಸಮುದಾಯ ಮಟ್ಟದಲ್ಲಿ ಎಚ್‌ಐವಿ ತಪಾಸಣೆ ನಡೆಸಿ, ಮುನ್ನೆಚ್ಚರಿಕೆ ಕುರಿತು ಆರೋಗ್ಯ ಶಿಕ್ಷಣ ನೀಡಲಾಯಿತು ಎಂದು ತಿಳಿಸಿದರು. ಈ ಕಾರ್ಯಕ್ರಮದಲ್ಲಿ ಜಿಲ್ಲಾ ಮೇಲ್ವಿಚಾರಕ ಮಲ್ಲಯ್ಯ ಮಠಪತಿ, ಆರೋಗ್ಯ ಇಲಾಖೆಯ ವೈದ್ಯಾಧಿಕಾರಿಗಳು, ಐಸಿಟಿಸಿ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು ಮತ್ತು ಗ್ರಾಮದ ಸಾರ್ವಜನಿಕರು ದೊಡ್ಡ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

## ಮೂರು ವರ್ಷದಿಂದ ಬಾರದ ಗೃಹಲಕ್ಷ್ಮಿ ಹಣ, ಏಕಾಂಗಿ ಧರಣಿ




**ಕೊಪ್ಪಳ:** ಮೂರು ವರ್ಷಗಳಿಂದ ಪತ್ನಿಯ ಗೃಹಲಕ್ಷ್ಮಿ ಯೋಜನೆ ಅರ್ಜಿ ಆನ್‌ಲೈನ್‌ನಲ್ಲಿ ಸ್ವೀಕೃತಿಯಾಗದೆ ಅನ್ಯಾಯವಾಗಿದೆ ಎಂದು ಆರೋಪಿಸಿ, ಕುಷ್ಟಗಿ ತಾಲೂಕಿನ ಹಾಬಲಕಟ್ಟಿಯ ವಿಕಲಚೇತನ ಶರಣಪ್ಪ ಭೋವಿ ಜಿಲ್ಲಾಡಳಿತ ಭವನದ ಮುಂದೆ ಏಕಾಂಗಿ ಧರಣಿ ನಡೆಸಿದರು. ಸಿಡಿಪಿಓ ವಿರುದ್ಧ ಕ್ರಮ ಜರುಗಿಸಿ, ಬಾಕಿ ಇರುವ ಮೂರು ವರ್ಷದ ಗೃಹಲಕ್ಷ್ಮಿ ಹಣ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದರು. ಅರ್ಜಿ ಸಲ್ಲಿಸಲು ₹20–25 ಸಾವಿರ ಖರ್ಚಾಗಿದೆ ಎಂದು ದೂರಿದ ಅವರು, ನಿರ್ಲಕ್ಷ್ಯ ತೋರಿದ ಅಧಿಕಾರಿಗಳು ಹಾಗೂ ಗ್ಯಾರಂಟಿ ಸಮಿತಿ ಅಧ್ಯಕ್ಷರ ವಿರುದ್ಧವೂ ಕ್ರಮ ಕೈಗೊಳ್ಳುವಂತೆ ಸಿಎಂ ಹೆಸರಿಗೆ ಮನವಿ ಸಲ್ಲಿಸಿದರು.

# 6 ಗಂಟೆಯಿಂದ ರಾತ್ರಿ 10 ಗಂಟೆಯವರೆಗೆ ಪಡಿತರ ಹಂಚಿಕೆ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಎಲ್ಲಾ ಜಿಲ್ಲೆಗಳಿಗೆ ಜುಲೈ–2026 ರ ಮಾಹೆಯ ಅನ್ನಭಾಗ್ಯ ಅಕ್ಕಿ ಮತ್ತು ರಾಜ್ಯ ಎನ್.ಅಫ್.ಎಸ್. ಎ ಅಕ್ಕಿ ಹಂಚಿಕೆಯನ್ನು ನೀಡಲಾಗಿದ್ದು ದಿನಾಂಕ:15–07–2026 ರ ಪತ್ರದ ಮೂಲಕ ಭಾರತ ಆಹಾರ ನಿಗಮದಿಂದ ಹಂಚಿಕೆ ಆದೇಶ ಸ್ವೀಕೃತವಾಗಿರುತ್ತದೆ. ಅದರಂತೆ, ಕೂಡಲೇ ಎತ್ತುವಳಿ ಮಾಡಿ ವಿತರಣೆಯನ್ನು ಪ್ರಾರಂಭಿಸುವಂತೆ ಹಾಗೂ ಎತ್ತುವಳಿ ಮತ್ತು ವಿತರಣೆಯಲ್ಲಿ ಅನುಸರಿಸಬೇಕಾದ ಕ್ರಮಗಳ ಕುರಿತು ದಿನಾಂಕ:16–07–2026 ರ ಪತ್ರದಲ್ಲಿ ಅಗತ್ಯ ಸೂಚನೆ ನೀಡಲಾಗಿರುತ್ತದೆ ಎಂದು

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ಆಯುಕ್ತರು ದಿನಾಂಕ:20–07–2026 ರ ಪತ್ರದ ಮೂಲಕ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ರಾಜ್ಯದ ಎಲ್ಲಾ ಜಂಟಿ/ಉಪ ನಿರ್ದೇಶಕರಿಗೆ ತಿಳಿಸಿ ಪತ್ರ ಬರೆದಿದ್ದಾರೆ.

ನ್ಯಾಯಬೆಲೆ ಅಂಗಡಿಗಳಲ್ಲಿ ಎನ್.ಎಫ್.ಎಸ್.ಎ ಆಹಾರಧಾನ್ಯ ಮತ್ತು ಅನ್ನಭಾಗ್ಯ ಅಕ್ಕಿಯನ್ನು ಫಲಾನುಭವಿಗಳಿಗೆ ಒಟ್ಟಿಗೆ ವಿತರಿಸಬೇಕಾಗಿದ್ದು, ಭಾರತ ಆಹಾರ ನಿಗಮದಿಂದ ಒ.ಎಂ.ಎ□□□ಸ್ (ಡಿ) ಅಕ್ಕಿ ಎತ್ತುವಳಿ ಪ್ರಗತಿಯಲ್ಲಿ ಇರುವುದರಿಂದ, ನ್ಯಾಯಬೆಲೆ ಅಂಗಡಿಗಳಿಗೆ ಅಗತ್ಯ ಪ್ರಮಾಣದ ಆಹಾರಧಾನ್ಯ ಲಭ್ಯವಾಗುತ್ತಿದ್ದಂತೆಯೇ ವಿಳಂಬಕ್ಕೆ ಅವಕಾಶ ನೀಡದಂತೆ ವಿತರಣೆಯನ್ನು ಪ್ರಾರಂಭಿಸಬೇಕಾಗಿರುತ್ತದೆ.

ಆದರೆ, ರಾಜ್ಯದ ಹಲವು ಜಿಲ್ಲೆಗಳಲ್ಲಿ ನ್ಯಾಯಬೆಲೆ ಅಂಗಡಿಯವರು ಎಲ್ಲಾ ವರ್ಗಗಳ ಆಹಾರಧಾನ್ಯಗಳನ್ನು ಸಗಟು ಮಳಿಗೆಗಳಿಂದ ಪೂರ್ಣ ಪ್ರಮಾಣದಲ್ಲಿ ಎತ್ತುವಳಿ ಮಾಡಿಕೊಂಡಿದ್ದರೂ ಸಹ ಪಡಿತರ ವಿತರಣೆಯನ್ನು ತಕ್ಷಣ ಪ್ರಾರಂಭಿಸದೆ ವಿಳಂಬ ಮಾಡುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿರುತ್ತದೆ ಹಾಗೂ ಎಲ್ಲಾ ನ್ಯಾಯಬೆಲೆ ಅಂಗಡಿಯವರು ಎತ್ತುವಳಿ ಪೂರ್ಣಗೊಳಿಸುವವರೆಗೆ ಪಡಿತರ ವಿತರಣೆಯನ್ನು ಆರಂಭಿಸದೇ ಇರುವ ಪ್ರಕರಣಗಳು ವರದಿಯಾಗುತ್ತಿವೆ. ಈ ರೀತಿಯ ವಿಳಂಬ ನೀತಿಯನ್ನು ಅನುಸರಿಸದೇ ಎಲ್ಲಾ ನ್ಯಾಯಬೆಲೆ ಅಂಗಡಿಯವರು ತಮ್ಮ ದಾಸ್ತಾನು ಲಭ್ಯವಾದ ಕೂಡಲೇ ವಿತರಣೆಯನ್ನು ಕಡ್ಡಾಯವಾಗಿ ಪ್ರಾರಂಭಿಸುವಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಪತ್ರದಲ್ಲಿ ಆಯುಕ್ತರು ಸೂಚಿಸಿದ್ದಾರೆ.

ಮುಂದುವರೆದು ಎನ್.ಎಫ್.ಎಸ್.ಎ ಆಹಾರ ಧಾನ್ಯ ಮತ್ತು ಅನ್ನಭಾಗ್ಯ ಅಕ್ಕಿಯನ್ನು ಜುಲೈ 2026 ರ ಮಾಹೆಯ ಅಂತ್ಯದೊಳಗಾಗಿ ಪಡಿತರ ಚೀಟಿದಾರರಿಗೆ ವಿತರಿಸಿ, ವಿತರಣಾ ಪ್ರಕ್ರಿಯೆಯನ್ನು ಮುಕ್ತಾಯಗೊಳಿಸಬೇಕಾಗಿ ಇರುವುದರಿಂದ ಎಲ್ಲಾ ನ್ಯಾಯಬೆಲೆ ಅಂಗಡಿಗಳು ಪ್ರತಿ ದಿವಸ ಕಡ್ಡಾಯವಾಗಿ ಬೆಳಿಗ್ಗೆ 6 ಗಂಟೆಯಿಂದ ರಾತ್ರಿ 10 ಗಂಟೆಯವರೆಗೆ ನ್ಯಾಯಬೆಲೆ ಅಂಗಡಿಯನ್ನು ತೆರೆದಿಟ್ಟು ಪಡಿತರ ವಿತರಣೆ ಮಾಡುವಂತೆ ಪತ್ರದಲ್ಲಿ ಸೂಚಿಸಲಾಗಿದೆ.

ಎಲ್ಲಾ ಜಂಟಿ/ಉಪ ನಿರ್ದೇಶಕರು ತಮ್ಮ ವ್ಯಾಪ್ತಿಯ ನ್ಯಾಯಬೆಲೆ ಅಂಗಡಿಗಳು ಮೇಲ್ಕಂಡ ಕಾರ್ಯನಿರ್ವಹಣಾ ಅವಧಿಯನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಕ್ರಮವಹಿಸಿ, ಯಾವುದೇ ದೂರುಗಳಿಗೆ ಆಸ್ಪದ ನೀಡದಂತೆ ಎಲ್ಲಾ ಅರ್ಹ ಪಡಿತರ ಚೀಟಿದಾರರಿಗೆ ಪಡಿತರ ಆಹಾರಧಾನ್ಯವನ್ನು ಸಂಪೂರ್ಣವಾಗಿ ಹಾಗೂ ಕಡ್ಡಾಯವಾಗಿ ವಿತರಿಸುವುದನ್ನು ಖಚಿತಪಡಿಸಿಕೊಳ್ಳುವಂತೆ ಸೂಚಿಸಲಾಗಿದೆ.

ಮೇಲಿನ ಸೂಚನೆಗಳನ್ನು ಎಲ್ಲಾ ನ್ಯಾಯಬೆಲೆ ಅಂಗಡಿಯವರು ಕಟ್ಟುನಿಟ್ಟಾಗಿ ಪಾಲಿಸುವ ನಿಟ್ಟಿನಲ್ಲಿ ಜಂಟಿ ನಿರ್ದೇಶಕರು/ಉಪ ನಿರ್ದೇಶಕರು ಹಾಗೂ ಆಹಾರ ನಿರೀಕ್ಷಕರು ನಿಯಮಿತವಾಗಿ ಮೇಲ್ವಿಚಾರಣೆ ನಡೆಸಿ, ಉಲ್ಲಂಘನೆ ಕಂಡುಬಂದಲ್ಲಿ ಸಂಬಂಧಪಟ್ಟ ನ್ಯಾಯಬೆಲೆ ಅಂಗಡಿ ವಿತರಕರ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ.

## ಬರ ನಿರ್ವಹಣೆ: ನಿರ್ಲಕ್ಷ್ಯ ವಹಿಸದೆ ಕಾರ್ಯನಿರ್ವಹಿಸಿ

• ಮಲ್ಲಮ್ಮ ನುಡಿ ವಾರ್ತೆ ಕೊಟ್ಟೂರು

ತಾಲೂಕು ಕಛೇರಿಯ ಮಹಾತ್ಮ ಗಾಂಧೀಜಿ ಸಭಾಂಗಣದಲ್ಲಿ ಇಂದು ಬರಗಾಲ ನಿರ್ವಹಣೆಯ "ಟಾಸ್ಕ್ ಫೋರ್ಸ್ ಸಮಿತಿ" ಸಭೆಯ ಅಧ್ಯಕ್ಷತೆಯನ್ನು ವಹಿಸಿದ್ದ ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಶ್ರೀ ಕೆ ನೇಮಿರಾಜ ನಾಯ್ಕ ಇವರು ಮುಂಗಾರಿನಲ್ಲಿ ಮಳೆಯ ಪ್ರಮಾನ ಅತ್ಯಂತ ಕಡಿಮೆ ಇದ್ದು, ಬರಗಾಲದ ಲಕ್ಷಣಗಳು ಗೋಚರಿಸಿದ್ದು, ಮುಂದಿನ ದಿನಗಳಲ್ಲಿ ಬರ ನಿರ್ವಹಣೆಯಲ್ಲಿ ಸಂಬಂಧಿಸಿದ ಇಲಾಖಾ ಅಧಿಕಾರಿಗಳು ನಿರ್ಲಕ್ಷತೆ ವಹಿಸದಂತೆ ಕಾರ್ಯನಿರ್ವಹಿಸಬೇಕೆಂದು ಸೂಚಿಸಿದರು.

ಸಹಾಯಕ ಕೃಷಿ ನಿರ್ದೇಶಕರಾದ ತೇಜ ವರ್ಧನ್ ಜೂನ್–ಜುಲೈ ನಲ್ಲಿ 107.2 ಮಿ.ಮೀ ಆಗಬೇಕಿದ್ದು, ಹಾಲೀ 43.5 ಮಾತ್ರ ಆಗಿರುತ್ತದೆ. ಶೇ 59 ಕೊರತೆಯಾಗಿರುತ್ತದೆ. ಈಬಾರಿ 14266 ಹೆಕ್ಟೇರ್ ಬಿತ್ತನೆಯಾಗಿದ್ದು, 20035 ಹೆಕ್ಟೇರ್



ಬಿತ್ತನೆಯಾಗಿರುವುದಿಲ್ಲ. ಬಿತ್ತನೆ ಕೇವಲ ಶೇ.42 ಮಾತ್ರ ಆಗಿರುತ್ತದೆ ಎಂದು ತಿಳಿಸಿದರು. ಆದ್ದರಿಂದ ಪರ್ಯಾಯ ಬೆಳೆಗಳಾದ ರಾಗಿ, ನವಣೆ, ಸಜ್ಜೆ, ಸೂ.ಕಾಂತಿ ಬಿತ್ತನೆ ಮಾಡುವಂತೆ ಸಲಹೆಯನ್ನು ನೀಡಲಾಗುತ್ತಿದೆ ಎಂದು ತಿಳಿಸಿದರು.

ತೋಟಗಾರಿಕೆ ಸಹಾಯಕ ನಿರ್ದೇಶಕರಾದ ಕುಬೇರಾಚಾರಿ ಇವರು ತೋಟಗಾರಿಕೆ ಬೆಳೆಗಳನ್ನು 716 ಹೆಕ್ಟರ್ನಲ್ಲಿ 315 ಹೆಕ್ಟರ್ ಬಿತ್ತನೆಯಾಗಿದೆ. ಟಮೋಟಾ, ಮೆಣಸಿನಕಾಯಿ, ಈರುಳ್ಳಿ, ಮಿಡಿಸೌತೆ ಬೆಳೆದಿರುತ್ತಾರೆ. ರೈತರು ರೈತ ಆಪ್ನಲ್ಲಿ ಮಾಹಿತಿಯನ್ನು ನೀಡಬೇಕಿದೆ ಎಂದು ತಿಳಿಸಿದ್ದಕ್ಕೆ ರೈತರಿಗೆ ಮಾಹಿತಿ ಕೊರತೆ ಇರುತ್ತದೆ. ಅದ್ದರಿಂದ ನಿಮ್ಮ ಇಲಾಖೆಯವರಿಂದ ಸೂಕ್ತ ಮಾರ್ಗದರ್ಶನ ನೀಡಬೇಕು ಎಂದು ತಿಳಿಸಿದರು.

## ಧ್ವಜಾರೋಹಣ: ರಾಯಣ್ಣ ಭಾವಚಿತ್ರಕ್ಕೆ ಗೌರವ ಅಗತ್ಯ

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ವೀರಯೋಧ ಸಂಗೊಳ್ಳಿ ರಾಯಣ್ಣ ಅವರ ಶೌರ್ಯ, ಪರಾಕ್ರಮ ಹಾಗೂ ಸ್ವಾತಂತ್ರ್ಯ ಹೋರಾಟದ ಸಂದೇಶವನ್ನು ಮುಂದಿನ ಪೀಳಿಗೆಗೆ ತಲುಪಿಸುವ ಉದ್ದೇಶದಿಂದ, ರಾಜ್ಯದ ಎಲ್ಲಾ ಸರ್ಕಾರಿ, ಅರೆ ಸರ್ಕಾರಿ ಶಾಲೆಗಳು, ಕಾಲೇಜುಗಳು ಹಾಗೂ ಸರ್ಕಾರಿ ಕಚೇರಿಗಳಲ್ಲಿ ಜನವರಿ 26ರ ಗಣರಾಜ್ಯೋತ್ಸವ ಮತ್ತು ಆಗಸ್ಟ್ 15ರ ಸ್ವಾತಂತ್ರ್ಯ ದಿನಾಚರಣೆ ಸಂದರ್ಭದಲ್ಲಿ ಧ್ವಜಾರೋಹಣ ವೇಳೆ ಸಂಗೊಳ್ಳಿ ರಾಯಣ್ಣ ಅವರ ಭಾವಚಿತ್ರವನ್ನು ಇರಿಸಿ ಗೌರವ ಸಲ್ಲಿಸುವಂತೆ ಸರ್ಕಾರ ಅಧಿಕೃತ ಆದೇಶ ಹೊರಡಿಸಬೇಕೆಂದು ರಾಷ್ಟ್ರೀಯ ಸಂಗೊಳ್ಳಿ ರಾಯಣ್ಣ ಸೇನೆ ಮನವಿ ಮಾಡಿದೆ.

ಈ ಕುರಿತು ಸರ್ಕಾರಕ್ಕೆ ಸಲ್ಲಿಸಿರುವ ಮನವಿಯಲ್ಲಿ, ಹಿಂದಿನ ಸರ್ಕಾರವು ರಾಜ್ಯ ಹಾಗೂ ಜಿಲ್ಲಾ ಮಟ್ಟದಲ್ಲಿ ಸಂಗೊಳ್ಳಿ ರಾಯಣ್ಣ ಅವರ ಸ್ಮರಣಾರ್ಥ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಗೌರವ ಸಲ್ಲಿಸುವಂತೆ ಆದೇಶ ಹೊರಡಿಸಿತ್ತು ಎಂದು ಉಲ್ಲೇಖಿಸಲಾಗಿದೆ.

ರಾಷ್ಟ್ರೀಯ ಸಂಗೊಳ್ಳಿ ರಾಯಣ್ಣ ಸೇನೆ ಕರ್ನಾಟಕ



ರಾಜ್ಯ ಸಂಘಟನೆಯ ಪದಾಧಿಕಾರಿಗಳು ಹಾಗೂ ಸಂಗೊಳ್ಳಿ ರಾಯಣ್ಣ ಅಭಿಮಾನಿಗಳು, ಗ್ರಾಮ, ತಾಲೂಕು ಹಾಗೂ ಜಿಲ್ಲಾ ಮಟ್ಟದ ಎಲ್ಲಾ ಸರ್ಕಾರಿ ಮತ್ತು ಅರೆ ಸರ್ಕಾರಿ ಶಿಕ್ಷಣ ಸಂಸ್ಥೆಗಳು ಹಾಗೂ ಸರ್ಕಾರಿ ಕಚೇರಿಗಳಲ್ಲಿ ರಾಷ್ಟ್ರೀಯ ಹಬ್ಬಗಳ ಸಂದರ್ಭದಲ್ಲಿ ಸಂಗೊಳ್ಳಿ ರಾಯಣ್ಣ ಅವರ ಭಾವಚಿತ್ರವನ್ನು ಪ್ರದರ್ಶಿಸಿ ಗೌರವ ಸಲ್ಲಿಸುವ ಪದ್ಧತಿಯನ್ನು ಜಾರಿಗೆ ತರಬೇಕು ಎಂದು ಒತ್ತಾಯಿಸಿದ್ದಾರೆ. ವೀರಯೋಧ ಸಂಗೊಳ್ಳಿ ರಾಯಣ್ಣ ಅವರ ತ್ಯಾಗ, ಶೌರ್ಯ ಮತ್ತು ದೇಶಭಕ್ತಿಯು ವಿದ್ಯಾರ್ಥಿಗಳು ಹಾಗೂ ಯುವಜನತೆಗೆ ಪ್ರೇರಣೆಯಾಗುವ ಹಿನ್ನೆಲೆಯಲ್ಲಿ ಸರ್ಕಾರ ಕೂಡಲೇ ಈ ಕುರಿತು ಅಧಿಕೃತ ಆದೇಶ ಹೊರಡಿಸಬೇಕು ಎಂದು ಸಂಘಟನೆ ಮನವಿಯಲ್ಲಿ ಆಗ್ರಹಿಸಿದೆ.

# ಮಳೆ ಕೊರತೆಯಿಂದ ಬೆಳೆಗಳು ಕುಂಠಿತ: ಡಿಸಿ, ಸಿಇಒ ಭೇಟಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಮಳೆ ಕೊರತೆಯಿಂದ ಬೆಳೆಗಳು ಕುಂಠಿತಗೊಂಡಿರುವ ಜಿಲ್ಲೆಯ ಕೊಪ್ಪಳ ಮತ್ತು ಇರಕಲ್‌ಗಡ ಹೋಬಳಿ ವ್ಯಾಪ್ತಿಯ ವಿವಿಧ ಗ್ರಾಮಗಳ ಕೃಷಿ ತಾಕುಗಳಿಗೆ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ವರ್ಣಿತ್ ನೇಗಿ ಅವರು ಭೇಟಿ ನೀಡಿ ಪರಿಶೀಲಿಸಿದರು.

ಕೊಪ್ಪಳ ಜಿಲ್ಲೆಯ ಕೊಪ್ಪಳ ಹಾಗೂ ಇರಕಲ್‌ಗಡ ಹೋಬಳಿಗಳ ವ್ಯಾಪ್ತಿಯ ಟಣಕನಕಲ್, ತಾಳಕನಕಾಪುರ, ಯಲ್ಲಮಗೇರಿ ಮತ್ತು ಚಿಲಕಮುಖಿ ಗ್ರಾಮಗಳಲ್ಲಿ ಮಳೆ ಕೊರತೆಯಿಂದ ಬೆಳೆಗಳು ಕುಂಠಿತಗೊಂಡಿರುವ ಕೃಷಿ ತಾಕುಗಳಿಗೆ ಜಿಲ್ಲಾಧಿಕಾರಿಗಳು ಹಾಗೂ ಜಿ.ಪಂ ಸಿಇಒ ಅವರು ಜಂಟಿ ಕೃಷಿ ನಿರ್ದೇಶಕರು, ತೋಟಗಾರಿಕೆ ಜಂಟಿ ನಿರ್ದೇಶಕರು ಮತ್ತು ಪಶು ಸಂಗೋಪನೆ ಇಲಾಖೆ, ಮೀನುಗಾರಿಕೆ ಇಲಾಖೆಯ ಉಪ ನಿರ್ದೇಶಕರೊಂದಿಗೆ ರೈತರ ಹೊಲಗಳಿಗೆ ತೆರಳಿ, ಅಲ್ಲಿನ ಸ್ಥಿತಿಗತಿಗಳನ್ನು ಖುದ್ದಾಗಿ ವೀಕ್ಷಿಸಿದರು.



ಇದೇ ವೇಳೆ ಮಳೆ ಕೊರತೆಯಿಂದ ಹಾನಿಗೊಳಗಾದ ಮೆಕ್ಕೆಜೋಳ, ತೊಗರಿ ಹಾಗೂ ಸಜ್ಜೆ ಬೆಳೆಗಳ ತಾಕುಗಳನ್ನು ಪರಿಶೀಲಿಸಿ, ರೈತರೊಂದಿಗೆ ಸಮಾಲೋಚನೆ ನಡೆಸಿ, ರೈತರು ತಮ್ಮ ಬೆಳೆಗಳ ಬೆಳೆ ಸಮೀಕ್ಷೆ (ಕ್ರಾಪ್ ಸರ್ವೇ) ಅನ್ನು ಕಡ್ಡಾಯವಾಗಿ ಪೂರ್ಣಗೊಳಿಸಿಕೊಳ್ಳುವಂತೆ ಜಿಲ್ಲಾಧಿಕಾರಿಗಳು ಸಲಹೆ ನೀಡಿದರು.

ಬೆಳೆ ಸಮೀಕ್ಷೆಯ ಮೂಲಕ ಬೆಳೆ ವಿಸ್ತೀರ್ಣ, ಬೆಳೆಗಳ ಪ್ರಸ್ತುತ ಸ್ಥಿತಿ ಹಾಗೂ ಬೆಳವಣಿಗೆಯ ಮಾಹಿತಿಯನ್ನು ನಿಖರವಾಗಿ ದಾಖಲಿಸಬಹುದಾಗಿದೆ. ಅಲ್ಲದೆ, ಮಳೆ ಕೊರತೆಯಿಂದ ಬೆಳೆ ಹಾನಿಗೊಳಗಾದ ಪ್ರದೇಶಗಳನ್ನು ಗುರುತಿಸಲು ಬೆಳೆ ಸಮೀಕ್ಷೆಯು ಪ್ರಮುಖ ಆಧಾರವಾಗಿದ್ದು, ಬೆಳೆ ಹಾನಿ ಪರಿಹಾರ, ಬರ ಘೋಷಣೆ, ಬೆಳೆ ವಿಮೆ ಪರಿಹಾರ ಹಾಗೂ ಸರ್ಕಾರದ ವಿವಿಧ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಈ ಮಾಹಿತಿಯು ಅತ್ಯಂತ ಸಹಕಾರಿಯಾಗಿದೆ ಎಂದು ಹೇಳಿದರು.

ರೈತರು ಬೆಳೆಗಳನ್ನು ಹರಗುವ (ಉಳುಮೆ ಮಾಡುವ) ಮೊದಲು ಕಡ್ಡಾಯವಾಗಿ ಬೆಳೆ ಸಮೀಕ್ಷೆಯನ್ನು ಪೂರ್ಣಗೊಳಿಸಬೇಕು. ಪ್ರಕೃತಿ ವಿಕೋಪಗಳಿಂದ ಉಂಟಾಗುವ ಆರ್ಥಿಕ ನಷ್ಟದಿಂದ ರೈತರನ್ನು ರಕ್ಷಿಸಲು ಬೆಳೆ ವಿಮೆ ಪರಿಣಾಮಕಾರಿ ಸಾಧನವಾಗಿದ್ದು, ಅರ್ಹ ರೈತರು ನಿಗದಿತ ಅವಧಿಯೊಳಗೆ ಬೆಳೆ ವಿಮೆಗೆ ನೋಂದಾಯಿಸಿಕೊಳ್ಳುವಂತೆ ತಿಳಿಸಿದರು.

ಬೆಳೆ ವಿಮೆ ಕುರಿತು ಗ್ರಾಮ ಮಟ್ಟದಲ್ಲಿ ಮಾಹಿತಿ, ತರಬೇತಿ ಹಾಗೂ ಅರಿವು ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಹಮ್ಮಿಕೊಳ್ಳುವಂತೆ ಕೃಷಿ ಹಾಗೂ ತೋಟಗಾರಿಕೆ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ಜಂಟಿ ಕೃಷಿ ನಿರ್ದೇಶಕರಾದ ಜಿ.ಡಿ ಕೃಷ್ಣಮೂರ್ತಿ, ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕರಾದ ಕೃಷ್ಣ ಸಿ ಉಕ್ಕುಂದ, ಪಶು ಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ಉಪನಿರ್ದೇಶಕರಾ ಡಾ. ಪಿ.ಎಂ. ಮಲ್ಲಯ್ಯ, ಮೀನುಗಾರಿಕೆ ಇಲಾಖೆಯ ಉಪ ನಿರ್ದೇಶಕರಾದ ಶ್ರೀನಿವಾಸ, ಉಪಕೃಷಿನಿರ್ದೇಶಕರಾದ ಎಲ್.ಸಿದ್ದೇಶ್ವರ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು, ಗ್ರಾ.ಪಂ ಪಿಡಿಓಗಳು, ರೈತರು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಸೌಲಭ್ಯ ಪಡೆಯಲು ಯಾವುದೇ ಗೊಂದಲ ಇರಬಾರದು. ತಾಂತ್ರಿಕ ಸಮಸ್ಯೆಗಳಿದ್ದಲ್ಲಿ ಅವುಗಳನ್ನು ತಕ್ಷಣ ಪರಿಹರಿಸಬೇಕೆಂದು ಅಧಿಕಾರಿಗಳಿಗೆ ಜಿಲ್ಲಾ ಮಟ್ಟದ ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ್ ಸೂಚನೆ ನೀಡಿದರು.

ಗುರುವಾರ ನಗರದ ಜಿಲ್ಲಾ ಪಂಚಾಯತ್ ಹೊಸ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಪಂಚ ಗ್ಯಾರೆಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿ ಅವರು, ವಿಶೇಷವಾಗಿ ಗೃಹ ಲಕ್ಷ್ಮೀ ಯೋಜನೆಯಡಿ ತಾಂತ್ರಿಕ ತೊಂದರೆಯಿಂದ ಮಹಿಳೆಯರಿಗೆ ಹಣ ತಲುಪದಿದ್ದರೆ ಅಂತಹ ಫಲಾನುಭವಿಗಳು ಅಗತ್ಯ ದಾಖಲೆಗಳೊಂದಿಗೆ ತಾಲೂಕಿನ ಸಿ.ಡಿ.ಪಿ.ಓ ಕಚೇರಿಯನ್ನು ಸಂಪರ್ಕಿಸಬೇಕೆಂದು ಫಲಾನುಭವಿಗಳಿಗೆ ಜಾಗೃತಿ ಮೂಡಿಸಬೇಕೆಂದು ಸಭೆಯಲ್ಲಿದ್ದ ಅಧಿಕಾರಿಗಳಿಗೆ ಅಧ್ಯಕ್ಷರು ನಿರ್ದೇಶನ ನೀಡಿದರು. ಸರ್ಕಾರದ ಈ ಯಾವುದೇ ಗ್ಯಾರಂಟಿ ಯೋಜನೆಗಳ ಅನುದಾನದ ಹಣವನ್ನು ಬ್ಯಾಂಕ್‌ಗಳು ಫಲಾನುಭವಿಗಳ ಹಳೆಯ ಸಾಲಕ್ಕೆ ಜಮೆ ಮಾಡಿಕೊಳ್ಳಬಾರದು. ಬ್ಯಾಂಕ್ ಸಿಬ್ಬಂದಿ ಸಾರ್ವಜನಿಕರೊಂದಿಗೆ ಕಡ್ಡಾಯವಾಗಿ ಸ್ಥಳೀಯ ಭಾಷೆಯಲ್ಲೇ ವ್ಯವಹರಿಸಬೇಕು ಎಂದು ಬ್ಯಾಂಕ್ ಅಧಿಕಾರಿಗಳಿಗೆ ಚಂದ್ರಿಕಾ ಪರಮೇಶ್ವರ್ ಸೂಚನೆ ನೀಡಿದರು.

ರಾಜ್ಯ ಸರ್ಕಾರದ ಅತ್ಯಂತ ಮಹತ್ವಾಕಾಂಕ್ಷೆಯ ಗೃಹಲಕ್ಷ್ಮಿ ಯೋಜನೆಯಡಿ ಕಲಬುರಗಿ ಜಿಲ್ಲೆಯಲ್ಲಿ ಒಟ್ಟು 5,97,166 ನೋಂದಾಯಿತ ಮಹಿಳಾ ಫಲಾನುಭವಿಗಳಿದ್ದು, 2023–24ರಲ್ಲಿ 782.64 ಕೋಟಿ ರೂ. 2024–25ರಲ್ಲಿ 1,044.48 ಕೋಟಿ



ರೂ. ಹಾಗೂ 2025–26ರಲ್ಲಿ 1,077.88 ಕೋಟಿ ರೂ. ಹಾಗೂ 2026–27 ಪ್ರಸ್ತುತ ಸಾಲಿನಲ್ಲಿ ಏಪ್ರಿಲ್ ವರೆಗೆ 1,133.76 ಕೋಟಿ ರೂ. ಸೇರಿದಂತೆ ಒಟ್ಟಾರೆ ಯೋಜನೆಯಡಿ ಜಿಲ್ಲೆಯಲ್ಲಿ ಇಲ್ಲಿಯವರೆಗೆ 3,018.39 ಕೋಟಿ ರೂ. ಅನುದಾನ ಫಲಾನುಭವಿಗಳ ಖಾತೆಗೆ ಯಶಸ್ವಿಯಾಗಿ ಜಮೆಯಾಗಿದೆ. ಇದರಿಂದ ಸಾಮಾನ್ಯ, ಹಿಂದುಳಿದ ವರ್ಗ, ಅಲ್ಪಸಂಖ್ಯಾತ ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಲಕ್ಷಾಂತರ ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ಹೊಸನಾಂದಿ ಹಾಡಲಾಗಿದೆ ಎಂದರು.

ಜಿಲ್ಲಾ ಪಂಚಾಯತ್ ಸಿ.ಇ.ಓ ರಾಹುಲ ಎಸ್. ಸಂಕನೂರ ಅವರು ಮಾತನಾಡಿ, ಗರಹ ಲಕ್ಷ್ಮೀ ಯೋಜನೆ ಅನರ್ಹರ ಪಾಲಾಗದಂತೆ ತಡೆಯಲು ಪತ್ತೆ ಹಚ್ಚುವ ಕೆಲಸ ನಡೆಯುತ್ತಿದೆ. ಜಿಲ್ಲೆಯಲ್ಲಿ ಗುರುತಿಸಲಾದ 9,156 ಮೃತ ಫಲಾನುಭವಿಗಳ ಪೈಕಿ 3,820 ಖಾತೆಗಳಿಗೆ ತಪ್ಪಾಗಿ ಜಮೆಯಾಗಿದ್ದ ಹಣವನ್ನು ಲೀಡ್ ಬ್ಯಾಂಕ್‌ಗಳ ಸಹಯೋಗದೊಂದಿಗೆ ಈಗಾಗಲೇ 44.34 ಲಕ್ಷ ಹಣವನ್ನು ವಸೂಲಿ ಮಾಡಿ ಸರ್ಕಾರಕ್ಕೆ ಜಮೆ ಮಾಡಲಾಗಿದೆ. ಉಳಿದ ಹಣ ಮರುಪಾವತಿ ಪ್ರಕ್ರಿಯೆಯಲ್ಲಿದೆ. ಶೀಘ್ರದಲ್ಲೇ ಸಿಬ್ಬಂದಿಗಳು ಮನೆ ಮನೆಗೆ ಭೇಟಿ ನೀಡಿ ವಿಶೇಷ □□□ಪ್ ಹಾಗೂ ಬಯೋಮೆಟ್ರಿಕ್ ಮೂಲಕ ಮರು ಪರಿಶೀಲನೆ ನಡೆಸಬೇಕು ಎಂದು ಅಧಿಕಾರಿಗಳಿಗೆ ಹೇಳಿದರು. ಮತ್ತೊಂದೆಡೆ 'ಗೃಹಜ್ಯೋತಿ' ಯೋಜನೆಯಡಿ 5.86 ಲಕ್ಷಕ್ಕೂ ಹೆಚ್ಚು ಗ್ರಾಹಕರು ನೋಂದಾಯಿಸಿಕೊಂಡಿದ್ದು, ವಿದ್ಯುತ್ ಬಿಲ್‌ನಲ್ಲಿ ಹೆಚ್ಚಿನ ಮೊತ್ತ ಬರುತ್ತಿರುವ ಸಾರ್ವಜನಿಕರ ಗೊಂದಲ ನಿವಾರಿಸಲು ಜೆಸ್ಕಾಂ ಇಲಾಖೆಯಿಂದ ವಿಶೇಷ ಪರಿಶೀಲನಾ ತಂಡಗಳನ್ನು ರಚಿಸಲಾಗಿದೆ. ಈ ತಂಡಗಳು ಮನೆ ಬಾಗಿಲಿಗೆ ತೆರಳಿ ಪ್ರತಿದಿನ ಸುಮಾರು 3,000 ಅರ್ಜಿಗಳನ್ನು ಇತ್ಯರ್ಥಪಡಿಸುತ್ತಿವೆ. ಕಳೆದ 1 ವರ್ಷದ ಸರಾಸರಿ ಬಳಕೆಗಿಂತ ಹೆಚ್ಚಿನ ಬಳಕೆ ಇದ್ದರೆ ಅಥವಾ ಹಳೆಯ ಬಿಲ್ ಬಾಕಿ ಇದ್ದರೆ ಮಾತ್ರ ಹೆಚ್ಚುವರಿ ಮೊತ್ತ ಪಾವತಿಸಬೇಕಾಗಿದ್ದು, ಹಳೆಯ ಬಾಕಿಗೆ ಕಂತುಗಳ ಸೌಲಭ್ಯ ನೀಡಲಾಗಿದೆ. ಪ್ರತೀ ಏರಿಯಾದ ಲೈನ್ ಮ್ಯಾನ್ ಹಾಗೂ ಸಿಬ್ಬಂದಿಗಳನ್ನೊಳಗೊಂಡ ವಾಟ್ಸಾಪ್ ಗ್ರೂಪ್‌ಗಳನ್ನು ರಚಿಸಲಾಗಿದ್ದು, ಸಾರ್ವಜನಿಕರು ನೇರವಾಗಿ ಸಂಪರ್ಕಿಸಬಹುದು ಎಂದು ಜೆಸ್ಕಾಂ ಅಧಿಕಾರಿಗಳು ಸಭೆಗೆ ತಿಳಿಸಿದರು.

**ಯುವನಿಧಿ ಯೋಜನೆಯಲ್ಲಿ ಕಲಬುರಗಿ ಜಿಲ್ಲೆ ರಾಜ್ಯದಲ್ಲೇ ಎರಡನೇ ಸ್ಥಾನ:** ಯುವನಿಧಿ' ಯೋಜನೆಯಡಿ ಜಿಲ್ಲೆಯ 31,807ಕ್ಕೂ ಹೆಚ್ಚು ನಿರುದ್ಯೋಗಿ ಯುವಜನರು ನೊಂದಣಿ ಮಾಡಿಕೊಂಡಿದು, ಕಲಬುರಗಿ ಇಡೀ ರಾಜ್ಯದಲ್ಲೇ ಎರಡನೇ ಸ್ಥಾನದಲ್ಲಿದೆ. ನಿರುದ್ಯೋಗಿ ಯುವಕರು ಪ್ರತಿ ತಿಂಗಳು ಕಡ್ಡಾಯವಾಗಿ ಸ್ವ–ಯಂ ಘೋಷಣೆ ಸಲ್ಲಿಸುವ ಮೂಲಕ ಭತ್ಯೆಯ ಜೊತೆಗೆ ಸರ್ಕಾರದ 'ಯುವನಿಧಿ ಪ್ಲಸ್' ಉಚಿತ ಕೌಶಲ್ಯಾಭಿವೃದ್ಧಿ ತರಬೇತಿಯ ಪ್ರಯೋಜನ ಪಡೆಯಬಹುದಾಗಿದೆ ಎಂದು ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ವಿವರ ನೀಡಿದರು.

ಶಕ್ತಿ ಯೋಜನೆಯಡಿ ಜಿಲ್ಲೆಯಲ್ಲಿ 22 ಕೋಟಿಗೂ ಹೆಚ್ಚು ಮಹಿಳಾ ಪ್ರಯಾಣಿಕರು ಉಚಿತ ಪ್ರಯಾಣ ಮಾಡಿದ್ದಾರೆ. ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಸಾರಿಗೆ ಸಂಸ್ಥೆಯು ಬಸ್‌ಗಳ ಸಂಖ್ಯೆಯನ್ನು ಹೆಚ್ಚಿಸಿದೆ ಎಂದಿ ಸಾರಿಗೆ ಅಧಿಕಾರಿಗಳು ತಿಳಿಸಿದರು.

ಅನ್ನ ಭಾಗ್ಯ ಚರ್ಚೆಯ ಸಂದರ್ಭದಲ್ಲಿ ಯೋಜನೆಯಡಿ ನೀಡುವ ಉಚಿತ ಅಕ್ಕಿ ಕಾಳಸಂತೆಯಲ್ಲಿ ಮಾರಾಟ ಮಾಡುವ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿದ ಅಧ್ಯಕ್ಷರು ಪಡಿತರ ಅಕ್ಕಿ ಕಾಳಸಂತೆಯಲ್ಲಿ ಮಾರಾಟವಾದದಲ್ಲಿ ಲೋಪವೆಸಗುವ ನ್ಯಾಯಬೆಲೆ ಅಂಗಡಿಗಳನ್ನು ತಕ್ಷಣವೇ ಅಮಾನತುಗೊಳಿಸಲು ಸೂಚಿಸಿದರು. ಅಧಿಕಾರಿಗಳು ಕಡ್ಡಾಯವಾಗಿ ಸ್ಥಳ ತಪಾಸಣೆ ನಡೆಸಬೇಕು ಹಾಗೂ ಪ್ರತಿಯೊಂದು ಅಂಗಡಿಯ ಮುಂಭಾಗದಲ್ಲಿ ದೂರು ಸಲ್ಲಿಕೆಯ ಸಹಾಯವಾಣಿ ಸಂಖ್ಯೆಯನ್ನು ಪ್ರದರ್ಶಿಸಬೇಕೆಂದು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಸಭೆಯಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರುಗಳಾದ ಸೋಮಶೇಖರ ಹಿರೇಮಠ, ವಿಜಯಕುಮಾರ ಕಟ್ಟಿಮನಿ, ನಿರ್ಮಲಾ ಬರ್ಗಲಿ, ಸುರೇಶ ತಿಪ್ಪಶೆಟ್ಟಿ, ನರಸಿಂಹಲು ಕುಂಬಾರ ಸೇರಿದಂತೆ ಜಿಲ್ಲಾ ಸಮಿತಿ ಸದಸ್ಯರು, ತಾಲೂಕಿನ ಅಧ್ಯಕ್ಷರು–ಉಪಾಧ್ಯಕ್ಷರು ಹಾಗೂ ಜಿಲ್ಲಾ ಪಂಚಾಯತ್ ಸಿ.ಪಿ.ಓ ಮಧುಮತಿ ಹೊಸಮನಿ ಉಪಸ್ಥಿತರಿದ್ದರು.


Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000, Telephone Number:08483200222

PRGI NO. (RNINO:KARKAN/2011/48371)